ಸಂಪುಟ: 05 ಸಂಚಿಕೆ: 167 ಪುಟಗಳು: 08 ಭಾನುವಾರ 31 ಆಗಸ್ಟ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು
ಒಂದು ಸಾಮಾನ್ಯ ಕೆಲಸವನ್ನು ಅತ್ಯುತ್ತಮವಾಗಿ ಮಾಡುವುದರಿಂದ ಶ್ರೇಷ್ಠ ಪ್ರತಿಫಲ ದೊರಕುತ್ತದೆ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



## ಆಹಾರ ನಿಗಮದಲ್ಲಿ ಶ್ರೀಧರ್ ಉತ್ತಮ ಕಾರ್ಯ ನಿರ್ವಹಣೆ

### ಜಂಟಿ ನಿರ್ದೇಶಕರಾದ ಸೌಮ್ಯ

ಸದಾ ಹಸನ್ಮುಖಿ ಸ್ನೇಹಿತರೊಂದಿಗೆ ಸೇರುವ ಸ್ನೇಹ ಜೀವಿ ಶ್ರೀಧರ್ ಅವರು ವಯೋ ನಿವೃತ್ತಿ ಸಮಾರಂಭಕ್ಕೆ ಮುನ್ನ ಚಿಕ್ಕ ಮಗುವಿನೊಂದಿಗೆ ಮಗುವಿನ ರೀತಿಯಲ್ಲಿ ತಮ್ಮ ಕಚೇರಿಯಲ್ಲಿ ಮಾತನಾಡುತ್ತಿರುವ ಅದ್ಬುತ ಚಿತ್ರ

• ಉದಯವಾಹಿನಿ ತುಮಕೂರು

ಆಹಾರ ನಿಗಮದಲ್ಲಿ ಶ್ರೀಧರ್ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ ರಾಜ್ಯದಲ್ಲಿ ಅತಿ ಹೆಚ್ಚು ರಾಗಿ ಖರೀದಿ ಆಗುವ ಜಿಲ್ಲೆಯ ಎಂದರೆ ತುಮಕೂರು ಜಿಲ್ಲೆ

ಅತಿ ಹೆಚ್ಚು ತಾಲ್ಲೂಕುಗಳನ್ನ ಅಂದರೆ ಎಂಟು ತಾಲ್ಲೂಕುಗಳನ್ನು ಹೊಂದಿರುವ ಅತಿ ದೊಡ್ಡ ಜಿಲ್ಲೆ ಆಗಿರುವ ತುಮಕೂರಿನಲ್ಲಿ ಇಂತಹ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದಲೂ ಶ್ರೀಧರ್ ರವರು ಸೇವೆ ಸಲ್ಲಿಸಿ ರಾಗಿ ಖರೀದಿಯಿಂದ ಹಿಡಿದು ನಿಗಮದಲ್ಲಿಯೂ ಸಹ ತಮ್ಮ ಸಿಬ್ಬಂದಿಗಳೊಂದಿಗೆ ತಮ್ಮ ಕರ್ತವ್ಯವನ್ನು ನಡೆಸಿಕೊಂಡು ಬಂದಿದ್ದಾರೆ ತಮ್ಮ 37 ವರ್ಷ ಕಳೆದು 38 ವರ್ಷದ ಸುದೀರ್ಘ ಸೇವೆಯಲ್ಲಿ ಒಂದು ಕಪ್ಪು ಚುಕ್ಕೆಯನ್ನು ಸಹ ತೆಗೆದುಕೊಳ್ಳದೆ ಅತ್ಯುತ್ತಮವಾಗಿ ಕರ್ತವ್ಯ ನಿರ್ವಹಿಸಿಕೊಂಡು ಬಂದಿದ್ದಾರೆ ಈಗಿನ ಪೀಳಿಗೆಯ ಸರ್ಕಾರಿ ನೌಕರರಿಗೆ ಶ್ರೀಧರ್ ಅವರು ಮಾದರಿಯಾಗಿದ್ದಾರೆ.

ನಿಗಮದಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು ಯಾವುದೇ ಕಾರಣಕ್ಕೂ ಗೊಂದಲಕ್ಕೀಡಾಗದೆ ತಮ್ಮ ಸೇವೆಯನ್ನು ನಡೆಸಿಕೊಂಡು ಹೋಗಬೇಕೆಂದು ಆಹಾರ ಇಲಾಖೆ ಜಂಟಿ ನಿರ್ದೇಶಕರಾದ ಸೌಮ್ಯ



ಮಾತನಾಡಿದರು ಆಹಾರ ನಿಗಮದ ತುಮಕೂರು ಜಿಲ್ಲಾ ವ್ಯವಸ್ಥಾಪಕ ಶ್ರೀಧರ್ ಅವರು ಮತ್ತು ದಾಸ್ತಾನು ಮಳಿಗೆ ವ್ಯವಸ್ಥಾಪಕ ಕೃಷ್ಣಮೂರ್ತಿಯವರ ವಯೋನಿರುವತಿ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ನಿಗಮದ ಅಧಿಕಾರಿಗಳು ಯಾವುದೇ ಕಾರಣಕ್ಕೂ ಮಾನಸಿಕವಾಗಿ ಜರ್ಜರಿತರಾಗದೆ ಒತ್ತಡಕ್ಕೆ ಒಳಗಾಗದೆ ತಮ್ಮ ಕರ್ತವ್ಯವನ್ನು ನಿರ್ವಹಿಸಿಕೊಂಡು ಹೋಗಬೇಕು ನಾನು ಈ ಹಿಂದೆ ಆಹಾರ ನಿಗಮದಲ್ಲಿ ಸುಮಾರು ವರ್ಷಗಳ ಸೇವೆ ನಡೆಸಿದ್ದು ನಿಗಮದ ಅಧಿಕಾರಿಗಳು ಸಿಬ್ಬಂದಿಗಳ ಒತ್ತಡದ ಸೇವೆ ನನಗೆ ಅರ್ಥವಾಗುತ್ತಿದೆಹೀಗಾಗಿ ಯಾರು ಒತ್ತಡಕ್ಕೆ ಒಳಗಾಗದೆ ತಮ್ಮ ಕರ್ತವ್ಯ ನಿರ್ವಹಿಸಿಕೊಂಡ ಹೋಗಬೇಕೆಂದು ಕರ್ನಾಟಕ ರಾಜ್ಯ ಆಹಾರ ನಿಗಮ ನಿಯಮಿತ ನಿಗಮದ ಸಿಬ್ಬಂದಿಗಳಿಗೆ ಮಾನಸಿಕ ಧೈರ್ಯ ತುಂಬಿ ವಿಶೇಷ ಅಧಿಕಾರಿ ಎಂದೆನಿಸಿದರು

ವಯೋ ನಿರ್ವತಿಗೊಂಡ ತುಮಕೂರು ಜಿಲ್ಲಾ ಆಹಾರ ನಿಗಮದ ಅಧಿಕಾರಿಗಳಿಂದ ಶ್ರೀಧರ್ ಅವರು ಮಾತನಾಡಿ ನಾನು ಈ ಹಿಂದೆ ಬೆಂಗಳೂರು ಉತ್ತರ ದಕ್ಷಿಣ ಶಿವಮೊಗ್ಗ ಧಾರವಾಡ ಹಾಸನ ಜಿಲ್ಲೆ ಸೇರಿದಂತೆ ಹಲವಾರು ಕಡೆ ತನ್ನ ಸೇವೆಯನ್ನು ಸಲ್ಲಿಸಿದ್ದು ತುಮಕೂರು ಜಿಲ್ಲೆ ದೈವಶಕ್ತಿ ಅಧ್ಯಾತ್ಮ ಶಕ್ತಿಯನ್ನು ಹೊಂದಿರುವ ಜಿಲ್ಲೆ ಇಲ್ಲಿ ಸೇವೆ ಸಲ್ಲಿಸಲು ನನಗೆ ಅವಕಾಶ ಸಿಕ್ಕಿದ್ದು ನನ್ನ ಪುಣ್ಯ ಹೀಗಾಗಿ ಸಂತೋಷದಿಂದ ಸೇವೆ ನಿರ್ವಹಿಸಿ ನಿವೃತ್ತಿಯಾಗುತ್ತಿದ್ದೇನೆ ನಿಗಮದ ನನ್ನ ಸಹೋದ್ಯೋಗಿಗಳು ಕುಟುಂಬದ ಸದಸ್ಯರಂತೆ ನನ್ನೊಂದಿಗೆ ನಡೆದುಕೊಂಡಿದ್ದಾರೆ

ಹೀಗಾಗಿ ನಾನು ಎಂದಿಗೂ ಅವರಿಗೆ ಆಭಾರಿಯಾಗಿರುತ್ತೇನೆ ತನ್ನ ಮನದಾಳದಿಂದ ಅನಿಸಿಕೆಯನ್ನು ಹಂಚಿಕೊಂಡರು ನಿಗಮದ ಹಲವಾರು ಅಧಿಕಾರಿಗಳು ಶ್ರೀಧರ್ ರವರ ಸುಧೀರ್ಘ ಸೇವೆಯ ಬಗ್ಗೆ ಕೊಂಡಾಡಿದರು ಶ್ರೀಧರ್ ಅವರನ್ನು ಮತ್ತು ಕೃಷ್ಣಮೂರ್ತಿಯವರನ್ನು ನಿಗಮದಿಂದ ಸನ್ಮಾನಿಸಲಾಯಿತು ಬೆಂಗಳೂರು ಅಲ್ಲದೆ ಬೇರೆ ಬೇರೆ ಜಿಲ್ಲೆಗಳಿಂದ ಆಗಮಿಸಿದ ಆಹಾರ ಇಲಾಖೆಯ ನಿಗಮದ ಅಧಿಕಾರಿಗಳು ಆತ್ಮೀಯವಾಗಿ ಅಭಿನಂದಿಸಿ ಆದರಿಸಿದರು

• ವರದಿ ಉಮೇಶ್ ಬಾಣಾವರ

## ನಿವೃತ್ತ ನ್ಯಾಯಮೂರ್ತಿಗಳಿಂದ ವೃತ್ತಿಧರ್ಮಕ್ಕೆ ಅಪಚಾರ: ಕಿರಣ್

• ಉದಯವಾಹಿನಿ, ಬೆಂಗಳೂರು

'ನಿವೃತ್ತ ನ್ಯಾಯಮೂರ್ತಿಗಳು ಮತ್ತು ನ್ಯಾಯಾಧೀಶರು ಸರ್ಕಾರದ ವಿರುದ್ಧ ಮತ್ತು ಗೃಹ ಸಚಿವಾಲಯದ ವಿರುದ್ಧ ಪತ್ರ ಬರೆದಿದ್ದು ವಕೀಲ ವೃತ್ತಿಧರ್ಮಕ್ಕೆ ಮಾಡಿದ ಅಪಚಾರ' ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದರು.

ಈಚೆಗೆ ಕೆಲ ನಿವೃತ್ತ ನ್ಯಾಯಮೂರ್ತಿಗಳು ಮತ್ತು ನ್ಯಾಯಾಧೀಶರು ಒಟ್ಟಿಗೆ ಸೇರಿ ಗೃಹ ಸಚಿವಾಲಯದ ವಿರುದ್ಧ ಪತ್ರ ಬರೆದರು. ಇದು ಸರಿಯಲ್ಲ. ವಕೀಲರು ನ್ಯಾಯಾಧೀಶರಾಗಿ ನಿವೃತ್ತರಾದ ನಂತರವೂ ರಾಜಕೀಯ ನಿಲುವುಗಳಿಂದ, ಸಂಕಥನಗಳಿಂದ ಅಂತರ ಕಾಯ್ದುಕೊಳ್ಳಬೇಕು. ನಿವೃತ್ತರು ಹೀಗೆ ಸರ್ಕಾರದ ವಿರುದ್ಧ ಪತ್ರ ಬರೆದಿದ್ದರಿಂದ, ಅವರು ವೃತ್ತಿಯಲ್ಲಿದ್ದಾಗಲೂ ಸರಿಯಾಗಿ ಕೆಲಸ ಮಾಡಿದ್ದರೇ ಎಂದು ಸಂದೇಹದಿಂದ ನೋಡುವಂತಾಗಿದೆ' ಎಂದು ಹೇಳಿದರು. 'ಸುಪ್ರೀಂ ಕೋರ್ಟ್‌ನಲ್ಲಿ ಒಂದೇ ಪ್ರಕರಣ ಅಥವಾ ಅರ್ಜಿ ವಿಚಾರಣೆಗೆ ಹಲವು ನ್ಯಾಯಮೂರ್ತಿಗಳು ಪೀಠದಲ್ಲಿ ಕೂರುತ್ತಾರೆ. ಅಂತಹ ಹಲವು ಪೀಠಗಳು ಇರುತ್ತವೆ. ಅವರ ಮೇಲೆ ಒತ್ತಡ ಇರುತ್ತದೆ ಎಂಬುದು ನನಗೆ ಅರ್ಥವಾಗುತ್ತದೆ. ಅವರು ನೀಡುವ ತೀರ್ಪು ದೇಶದ ಕಾನೂನುಗಳಾಗುತ್ತವೆ. ಅದನ್ನು ಪಾಲಿಸಬೇಕಾಗುತ್ತದೆ' ಎಂದೂ ಹೇಳಿದರು.

## ಧರ್ಮ, ಭಕ್ತಿ ಪ್ರದರ್ಶನಕ್ಕಿರಿಸುವ ವಸ್ತುಗಳಲ್ಲ: ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಉಡುಪಿ

ಧರ್ಮ, ಪೂಜೆ, ಭಕ್ತಿ ಇವು ಪ್ರದರ್ಶನಕ್ಕೆ ಇರಿಸುವ ವಸ್ತುಗಳಲ್ಲ. ನಮ್ಮ ಆಚಾರ ವಿಚಾರಗಳನ್ನು ಒಟ್ಟಿಗೆ ತೆಗೆದುಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಕೃಷ್ಣ ಮಠದ ರಾಜಾಂಗಣದಲ್ಲಿ ಶನಿವಾರ ನಡೆದ ಪರ್ಯಾಯ ಪುತ್ತಿಗೆ ಮಠಾಧೀಶ ಸುಗುಣೇಂದ್ರ ತೀರ್ಥ ಶ್ರೀಪಾದರ 64ನೇ ಜನ್ಮ ನಕ್ಷತ್ರೋತ್ಸವ ಮತ್ತು ಶ್ರೀಮನ್ಮಧ್ವಾಚಾರ್ಯರ ಸ್ಮರಣಾರ್ಥ ಅಂಚೆ ಚೀಟಿ ಬಿಡುಗಡೆ ಸಮಾರಂಭದಲ್ಲಿ ಅಂಚೆ ಚೀಟಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಧರ್ಮವು ಮನುಷ್ಯನಿಗೆ ಆತ್ಮವಿಶ್ವಾಸ ಹೆಚ್ಚಿಸುವ ದಾರಿ. ಧರ್ಮ ಯಾವುದಾದರೂ ತತ್ವ ಒಂದೇ. ಮನುಷ್ಯ ಯಶಸ್ಸು ಸಾಧಿಸಬೇಕಾದರೆ ಧರ್ಮರಾಯನ ಧರ್ಮ, ಕರ್ಣನ ದಾನಗುಣ, ಅರ್ಜುನನ ಗುರಿ, ಭೀಮನ ಬಲ ಜೊತೆಗೆ ಕೃಷ್ಣನ ತಂತ್ರವೂ ಇರಬೇಕು ಎಂದರು. ಕಾರ್ಯಕ್ರಮದಲ್ಲಿ ಕೆಲವರು ಬಂಡೆಯ ವಿಚಾರ ಮಾತನಾಡಿದರು. ಬಂಡೆ ಎಂದರೆ ಪ್ರಕೃತಿ, ಕಡೆದರೆ ಅದು ಆಕೃತಿ, ಬಂಡೆಯನ್ನು ಹೇಗೆ ಬೇಕಾದರೂ ನಿಮಗೆ ಬಳಸಿಕೊಳ್ಳಬಹುದು ಎಂದರು.

## ಮೀಸಲಾತಿಗೂ, ಜಾತಿವಾರು ಸಮೀಕ್ಷೆಗೂ ಸಂಬಂಧ ಇಲ್ಲ: ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಮೀಸಲಾತಿಗೂ, ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಗೂ ಸಂಬಂಧವಿಲ್ಲ. ಹೀಗಾಗಿ ವೀರಶೈವ ಲಿಂಗಾಯತರು ಸಮೀಕ್ಷೆ ವೇಳೆ ನೈಜ ಮಾಹಿತಿಯನ್ನೇ ನೀಡಬೇಕು' ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಶನಿವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, 'ಶಾಮನೂರು ಶಿವಶಂಕರಪ್ಪ ಅವರ ಅನುಪಸ್ಥಿತಿಯಲ್ಲಿ, ಸಮುದಾಯದ ಸಚಿವರು ಮತ್ತು ಶಾಸಕರ ಸಭೆಯನ್ನು ಹಿಂದಿನ ಶುಕ್ರವಾರ ನಡೆಸಲಾಗಿತ್ತು. ವೀರಶೈವ ಲಿಂಗಾಯತರು ಸಮೀಕ್ಷೆಯಲ್ಲಿ ನೈಜ ಮಾಹಿತಿಯನ್ನೇ ನೀಡುವಂತೆ ಕರೆ ನೀಡಲು ಸಭೆಯಲ್ಲಿ ನಿರ್ಧರಿಸಲಾಗಿತ್ತು' ಎಂದು ಹೇಳಿದರು. ಕೆಲವರು ಮೀಸಲಾತಿ ದೊರಕಬಹುದು ಎಂದು ತಮ್ಮ ಉಪಜಾತಿಗೆ ಸಮೀಪದ ಮತ್ತೊಂದು ಜಾತಿಯ ಹೆಸರು ಬರೆಸಲಿದ್ದಾರೆ ಎಂಬುದರ ಬಗ್ಗೆ ಚರ್ಚೆಯಾಯಿತು. ಈ ಸಮೀಕ್ಷೆಯ ವರದಿ ಗೌಪ್ಯವಾಗಿ ಇರಲಿದ್ದು, ಇಲ್ಲಿ ತಪ್ಪು ಮಾಹಿತಿ ಕೊಟ್ಟ ತಕ್ಷಣ ಅದೇ ಜಾತಿಯ ಜಾತಿ ಪ್ರಮಾಣ ಪತ್ರ ಲಭಿಸುವುದಿಲ್ಲ' ಎಂದರು. 'ವೀರಶೈವ ಲಿಂಗಾಯತ ಮಹಾಸಭಾದ ಪದಾಧಿಕಾರಿಗಳ ಸಭೆಯು ಶನಿವಾರ ನಡೆದಿದ್ದು, ಸಮೀಕ್ಷೆಯ ಕೈಪಿಡಿ ಬಿಡುಗಡೆಯಾದ ನಂತರ ಅದನ್ನು ಪರಿಶೀಲಿಸಿ, ಮುಂದಿನ ನಡೆ ನಿರ್ಧರಿಸುವ ಬಗ್ಗೆ ಚರ್ಚಿಸಲಾಯಿತು' ಎಂದು ಮೂಲಗಳು ತಿಳಿಸಿವೆ.

ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ) ಶೃಂಗಸಭೆಯಲ್ಲಿ ಭಾಗವಹಿಸಲು, ಭಾರತದ ಪ್ರಧಾನಮಂತ್ರಿ, ನರೇಂದ್ರ, ಮೋದಿ ಅವರು, ಚೀನಾದ ಟಿಯಾಂಜಿನ್ ನಗರಕ್ಕೆ ಆಗಮಿಸಿದ್ದಾರೆ. ಟಿಯಾಂಜಿನ್ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರಿಗೆ ಚೀನಾ ಭರ್ಜರಿ ಸ್ವಾಗತ ನೀಡಿದ್ದು, ಉಭಯ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ ಸಂಬಂಧ ಸುಧಾರಣೆಯ ಧ್ಯೋತಕವಾಗಿ ಕಂಡುಬಂದಿದೆ.

# ಚೀನಾಗೆ ಕಾಲಿಟ್ಟ ಮೋದಿ ಸ್ನೇಹ ವೃದ್ಧಿಗೆ ನಾಂದಿ...



### ಟ್ರಂಪ್‌ಗೆ ಸಡ್ಡು

**ಅಮೆರಿಕದ ಜಾಗತಿಕ ಸುಂಕ ಸಮರದಿಂದ ಕೆರಳಿರುವ ಹಲವು ರಾಷ್ಟ್ರಗಳು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಸಡ್ಡು ಹೊಡೆಯಲು ಮುಂದಾಗಿವೆ. ಎಸ್‌ಸಿಒ ಶೃಂಗಸಭೆ ಇಂತದ್ದೊಂದು ಅವಕಾಶವನ್ನು ಒದಗಿಸಿದ್ದು, ಅಮೆರಿಕ ಹೊರತಾದ ಜಾಗತಿಕ ಕ್ರಮ ರಚನೆ ಮಾಡುವ ಪ್ರಯತ್ನಗಳಿಗೆ ಚಾಲನೆ ನೀಡಲಾಗುವುದು ಎಂದು ನಿರೀಕ್ಷಿಸಲಾಗಿದೆ. 2025ರ ಎಸ್‌ಸಿಒ ಶೃಂಗಸಭೆ ಅತ್ಯಂತ ಬೃಹತ್ ಆಯೋಜನೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.**

**ಟಿಯಾಂಜಿನ್:** ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ) ಶೃಂಗಸಭೆಯಲ್ಲಿ ಭಾಗವಹಿಸಲು, ಭಾರತದ ಪ್ರಧಾನಮಂತ್ರಿ, ನರೇಂದ್ರ, ಮೋದಿ ಅವರು, ಚೀನಾದ ಟಿಯಾಂಜಿನ್ ನಗರಕ್ಕೆ ಆಗಮಿಸಿದ್ದಾರೆ. ಟಿಯಾಂಜಿನ್ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರಿಗೆ ಚೀನಾ ಭರ್ಜರಿ ಸ್ವಾಗತ ನೀಡಿದ್ದು, ಉಭಯ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ ಸಂಬಂಧ ಸುಧಾರಣೆಯ ಧ್ಯೋತಕವಾಗಿ ಕಂಡುಬಂದಿದೆ. ಎಸ್‌ಸಿಒ ಶೃಂಗಸಭೆ 2025ರಲ್ಲಿ ಭಾಗವಹಿಸುವ ಉದ್ದೇಶದಿಂದ ಪ್ರಧಾನಿ ಮೋದಿ ಚೀನಾ ಪ್ರವಾಸ ಕೈಗೊಂಡಿದ್ದಾರೆ. ಈ ಬಾರಿಯ ಶೃಂಗಸಭೆ ಎಸ್‌ಸಿಒ ಇತಿಹಾಸದಲ್ಲೇ ಅತ್ಯಂತ ಬೃಹತ್ ಸಭೆ ಎಂಬ ಖ್ಯಾತಿ ಪಡೆದುಕೊಂಡಿದೆ. ಪ್ರಧಾನಿ ಮೋದಿ ಅವರು ಬರೋಬ್ಬರಿ ಏಳು ವರ್ಷಗಳ ಬಳಿಕ ಚೀನಾದ ನೆಲದಲ್ಲಿ ಕಾಲಿಟ್ಟಿದ್ದಾರೆ. ಅವರು ಕೊನೆಯ ಬಾರಿ 2018ರಲ್ಲಿ ಚೀನಾ ಪ್ರವಾಸ ಕೈಗೊಂಡಿದ್ದರು. 2020ರಲ್ಲಿ ಭಾರತ ಮತ್ತು ಚೀನಾ ಸೈನಿಕರ ನಡುವೆ ನಡೆದ ಗಲ್ವಾನ್ ಗಡಿ ಘರ್ಷಣೆ ಬಳಿಕ, ಉಭಯ ರಾಷ್ಟ್ರಗಳ ನಡುವಿನ ಸಂಬಂಧ ತೀರ ಹದಗೆಟ್ಟಿತ್ತು. ಆದರೆ ಸದ್ಯ ಬದಲಾದ ಭೌಗೋಳಿಕ ರಾಜಕೀಯ ಪರಿಸ್ಥಿತಿಗಳು ಉಭಯ ರಾಷ್ಟ್ರಗಳನ್ನು ಹತ್ತಿರಕ್ಕೆ ತಂದಿದ್ದು, ಸಂಬಂಧ ಸುಧಾರಣೆಗೆ ಉಭಯ ರಾಷ್ಟ್ರಗಳೂ ಒತ್ತು ನೀಡಿವೆ. ಚೀನಾದ ವಿದೇಶಾಂಗ ಸಚಿವಾಲಯವು ಕೆಲ ದಿನಗಳ ಹಿಂದಷ್ಟೇ, ಭಾರತದ ಪ್ರಧಾನಿ ಮೋದಿ ಚೀನಾಗೆ ಬರುವುದನ್ನು ಎದುರು ನೋಡುತ್ತಿದ್ದೇವೆ. ನರೇಂದ್ರ ಮೋದಿ ಅವರನ್ನು ಚೀನಾ ಸ್ವಾಗತಿಸುತ್ತದೆ ಎಂದು ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿತ್ತು. ಪ್ರಧಾನಿ ಮೋದಿ ಅವರು ಚೀನಾದ ಟಿಯಾಂಜಿನ್ ನಗರದಲ್ಲಿ ಆ.31-ಭಾನುವಾರ ನಡೆಯಲಿರುವ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಸೆ.1ರಂದು ಈ ಸಭೆ ಮುಕ್ತಾಯಗೊಳ್ಳಲಿದ್ದು, ಪ್ರಧಾನಿ ಮೋದಿ ಅಂದೇ ಭಾರತಕ್ಕೆ ಮರಳಿ ಬರಲಿದ್ದಾರೆ. ಇನ್ನು ಪ್ರಧಾನಿ ಮೋದಿ ಅವರ ತಮ್ಮ ಚೀನಾ ಪ್ರವಾಸದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಕಳೆದ ವರ್ಷ ರಷ್ಯಾದ ಕಜಾನ್‌ನಲ್ಲಿ ನಡೆದಿದ್ದ ಬ್ರಿಕ್ಸ್ ಸಮ್ಮೇಳನದಲ್ಲಿ, ಇಬ್ಬರೂ ನಾಯಕರು ಕೊನೆಯ ಬಾರಿಗೆ ಭೇಟಿ ಮಾಡಿದ್ದರು. ಈ ಬಾರಿಯ ಎಸ್‌ಸಿಒ ಶೃಂಗಸಭೆಯಲ್ಲಿ ಪ್ರಧಾನಿ ಮೋದಿ ಅವರು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸಲಿದ್ದಾರೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕ ಸಮರದ ವಿರೋಧಿಗಳಾದ ರಷ್ಯಾ, ಚೀನಾ ಮತ್ತು ಭಾರತ, ಬ್ರಿಕ್ಸ್ ಒಕ್ಕೂಟದ ಸದಸ್ಯ ರಾಷ್ಟ್ರಗಳನ್ನು ಒಗ್ಗೂಡಿಸಲು ಪ್ರಯತ್ನಿಸುತ್ತಿವೆ. ಅಮೆರಿಕ ಹೊರತಾದ ಜಾಗತಿಕ ಕ್ರಮ ರಚನೆ ಪ್ರಯತ್ನಗಳು ಆರಂಭವಾಗಿದ್ದು, ಇದಕ್ಕೆ ಚೀನಾದಲ್ಲಿ ನಡೆಯುತ್ತಿರುವ ಎಸ್‌ಸಿಒ ಶೃಂಗಸಭೆ ಮುನ್ನುಡಿ ಬರೆಯಲಿದೆ ಎಂದು ನಿರೀಕ್ಷಿಸಲಾಗಿದೆ. ಚೀನಾದ ಟಿಯಾಂಜಿನ್ ನಗರದಲ್ಲಿ ನಡೆಯುತ್ತಿರುವ ಎಸ್‌ಸಿಒ ಶೃಂಗಸಭೆಯಲ್ಲಿ ಭಾರತ, ರಷ್ಯಾ ಸೇರಿದಂತೆ 20 ರಾಷ್ಟ್ರಗಳ ಮುಖ್ಯಸ್ಥರು ಭಾಗವಹಿಸಲಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.

### ಚೀನೀ ಕಲಾವಿದರಿಂದ ಭರತನಾಟ್ಯ

**ಪ್ರಧಾನಿ ಮೋದಿ ಅವರಿಗೆ ಹೋಟೆಲ್ ಆವರಣದಲ್ಲಿ ಚೀನೀ ಕಲಾವಿದರಿಂದ ಭಾರತೀಯ ಶಾಸ್ತ್ರೀಯ ಸಂಗೀತ ಮತ್ತು ನೃತ್ಯದ ಮೂಲಕ ಸ್ವಾಗತ ನೀಡಲಾಯಿತು. ಪ್ರಧಾನಿ ಮೋದಿ ಅವರು ಚೀನೀ ಕಲಾವಿದರ ಶಾಸ್ತ್ರೀಯ ಸಂಗೀತ ಮತ್ತು ಭರತನಾಟ್ಯ ಪ್ರದರ್ಶನಕ್ಕೆ ಭಾರೀ ಮೆಚ್ಚುಗೆ ವ್ಯಕ್ತಪಡಿಸಿದರು. ಇನ್ನು ಪ್ರದರ್ಶನದ ಬಳಿಕ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಚೀನೀ ಕಲಾವಿದರು. ಭಾರತದ ಪ್ರಧಾನಮಂತ್ರಿ, ನಮ್ಮ ಕಲೆಯನ್ನು ಮೆಚ್ಚಿಕೊಂಡಿದ್ದು ನಮಗೆ ಹೆಮ್ಮೆಯ ಕ್ಷಣ. ನಾವು ಭಾರತೀಯ ಸಂಸ್ಕೃತಿಯನ್ನು ತುಂಬಾ ಇಷ್ಟಪಡುತ್ತೇವೆ. ಭಾರತದ ಪ್ರಧಾನಿ ಮುಂದೆ ಭರತನಾಟ್ಯ ಪ್ರದರ್ಶನ ಮಾಡಿದ್ದು ತುಂಬಾ ಖುಷಿ ಕೊಟ್ಟಿತು. ಅವರು ಕೂಡ ನಮಗೆ ನಿಮ್ಮ ಪ್ರದರ್ಶನ ಚೆನ್ನಾಗಿತ್ತು ಎಂದು ಪ್ರೋತ್ಸಾಹ ನೀಡಿದರು ಎಂದು ಹೇಳಿದರು.**

### ರಾಜತಾಂತ್ರಿಕ ಸಂಬಂಧ ಕೂಡ ಸುಧಾರಣೆ

**ಹದಗೆಟ್ಟಿರುವ ಭಾರತ-ಚೀನಾ ರಾಜತಾಂತ್ರಿಕ ಸಂಬಂಧ ಕೂಡ ಸುಧಾರಣೆ ಕಾಣುತ್ತಿದ್ದು, ಪ್ರಧಾನಿ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ನಡುವೆ ನಡೆಯಲಿರುವ ಮಾತುಕತೆ, ಉಭಯ ರಾಷ್ಟ್ರಗಳನ್ನು ಮತ್ತಷ್ಟು ಹತ್ತಿರಕ್ಕೆ ತರಲಿವೆ ಎಂಬ ನಿರೀಕ್ಷೆ ಕೂಡ ಇದೆ. ಪ್ರಧಾನಿ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೂ ಪ್ರತ್ಯೇಕ ಸಭೆ ನಡೆಸಲಿದ್ದಾರೆ.**


### ವಂದೇ ಮಾತರಂ ಗೀತೆ

**ಇನ್ನು ಪ್ರಧಾನಿ ಮೋದಿ ಅವರ ಮುಂದೆ ವಂದೇ ಮಾತರಂ ಗೀತೆಯನ್ನು ನುಡಿಸಿದ ಚೀನೀ ಕಲಾವಿದರು ಮಾತನಾಡಿ, ಇದು ತುಂಬಾ ರೋಮಾಂಚನಕಾರಿ ಆಗಿತ್ತು. ಪ್ರಧಾನಿ ಮೋದಿ ಅವರು ನಮ್ಮ ಶಾಸ್ತ್ರೀಯ ಸಂಗೀತವನ್ನು ಇಷ್ಟಪಟ್ಟಿದ್ದಾರೆ ಎಂದು ನಾವು ಭಾವಿಸುತ್ತೇವೆ. ಅವರು ತುಂಬಾ ಒಳ್ಳೆಯ ವ್ಯಕ್ತಿ ಎಂದು ಸಂತಸ ವ್ಯಕ್ತಪಡಿಸಿದರು.**

### ಶೆಹಬಾಜ್ ಕಿತಾಪತಿ?

**ಭಾರತ ಮತ್ತು ಚೀನಾ ಪರಸ್ಪರ ಹತ್ತಿರವಾಗುತ್ತಿವೆ. ಇದನ್ನು ಚೆನ್ನಾಗಿ ಅರಿತುಕೊಂಡಿರುವ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್, ಪಾಕಿಸ್ತಾನದ ಸ್ಥಾನಮಾನ ಪಲ್ಲಟವಾಗದಂತೆ ನೋಡಿಕೊಳ್ಳಲು ಪ್ರಯತ್ನಿಸುವುದು ಖಚಿತ. ಇದಕ್ಕೆ ಷರೀಫ್ ಎಸ್‌ಸಿಒ ಶೃಂಗಸಭೆಯ ವೇದಿಕೆಯನ್ನು ಬಳಸಿಕೊಳ್ಳುವ ಸಾಧ್ಯತೆಯೂ ಇದ್ದು, ಭಾರತವು ಪಾಕಿಸ್ತಾನ ನಡೆಯನ್ನು ಸೂಕ್ಷ್ಮವಾಗಿ ಗಮನಿಸಲಿದೆ. ಪ್ರಧಾನಿ ಮೋದಿ ತಮ್ಮ ಎಸ್‌ಸಿಒ ಭಾಷಣದಲ್ಲಿ ಭಯೋತ್ಪಾದನೆ ಮತ್ತು ಅದಕ್ಕೆ ಕುಮ್ಮಕ್ಕು ನೀಡುವ ಶಕ್ತಿಗಳ ವಿರುದ್ಧ ಖಂಡಿತ ಘರ್ಜಿಸಲಿದ್ದು, ಚೀನಾದ ನೆಲದಿಂದಲೇ ಪಾಕಿಸ್ತಾನಕ್ಕೆ ಖಡಕ್ ಸಂದೇಶ ರವಾನಿಸುವುದು ಖಚಿತ. ಈ ಹಿನ್ನೆಲೆಯಲ್ಲಿ ಶೆಹಬಾಜ್ ಷರೀಫ್ ಅವರ ಚೀನಾ ಪ್ರವಾಸ ಗಮನ ಸೆಳೆದಿದೆ.**

## ವಿಶ್ವ ಒಕ್ಕಲಿಗ ಮಹಾಸಂಸ್ಥಾನದ ಶ್ರೀ ಶ್ರೀ ಕುಮಾರ ಚಂದ್ರಶೇಖರನಾಥ ಸ್ವಾಮಿಗಳ ಪುಣ್ಯಾರಾಧನೆ



• ಉದಯವಾಹಿನಿ ಬೆಂಗಳೂರು

ದಿನಾಂಕ 31 8 2025 ನೇ ಭಾನುವಾರ ಬೆಳಗ್ಗೆ 11 ಗಂಟೆಗೆ ಶ್ರೀ ಶ್ರೀ ಜಗದ್ಗುರು ಕುಮಾರ ಚಂದ್ರಶೇಖರನಾಥ ಮಹಾಸ್ವಾಮಿಗಳ ಹದಿನಾರನೇ ದಿನದ ಪುಣ್ಯಾರಾಧನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಠದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ಪುಣ್ಯಾರಾಧನೆ ಕಾರ್ಯಕ್ರಮವು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಎರಡನೇ ಪೀಠಾಧ್ಯಕ್ಷರಾದ ಶ್ರೀ ಜಗದ್ಗುರು ಡಾಕ್ಟರ್ ನಿಶ್ಚಲಾನಂದ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆಯಲಿದೆ ಈ ಕಾರ್ಯಕ್ರಮದಲ್ಲಿ ನಾಡಿನ ಹಲವಾರು ಆಧ್ಯಾತ್ಮಿಕ ಚಿಂತಕರು ಸಾಧುಸಂತರು ಸಮಾಜದ ಮುಖಂಡರು ವಿವಿಧ ಸಂಘ ಸಂಸ್ಥೆಗಳು ಸಾಹಿತಿಗಳು ಹಾಗೂ ಕಲಾವಿದರು ಈ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ

ಶ್ರೀಮಠದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಮಹಾವೀರ ಪಂಚ ಗಣಪತಿ ದೇವರ ಹಾಗೂ ಶ್ರೀ ಗುರುಗಳ ಕೃಪೆಗೆ ಪಾತ್ರರಾಗಬೇಕೆಂದು ಜಗದ್ಗುರು ಡಾಕ್ಟರ್ ಶ್ರೀ ನಿಶ್ಚಲಾನಂದ ಮಹಾಸ್ವಾಮಿಜಿಯವರು ಹಾಗೂ ಮಠದ ಧರ್ಮದರ್ಶಿಗಳು ಮತ್ತು ಭಕ್ತ ವೃಂದದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಈ ಧಾರ್ಮಿಕ ಸಮಾರಂಭದಲ್ಲಿ ಆದಿಚುಂಚನಗಿರಿ ಶ್ರೀ ಕ್ಷೇತ್ರದ ಪೀಠಾಧ್ಯಕ್ಷರಾದ ಶ್ರೀ ಶ್ರೀ ನಿರ್ಮಲಾನಂದ ಮಹಾ ಸ್ವಾಮೀಜಿಗಳು. ಶ್ರೀ ಸಿದ್ದಗಂಗಾ ಮಠದ ಶ್ರೀ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು. ಮೈಸೂರು ಸುತ್ತೂರು ಮಠದ ವೀರ ಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಶ್ರೀ ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿಜಿಗಳು .. ನೀಡುಮಾ ಮಿಡಿ ಜಗದ್ಗುರು ಮಠದ ಶ್ರೀ ವೀರಭದ್ರ ಚೆನ್ನಮಲ್ಲ ದೇಶ ಕೇಂದ್ರ ಮಹಾಸ್ವಾಮಿಜಿಗಳು ಸೇರಿದಂತೆ ನಾಡಿನ ಹಲವಾರು ಖ್ಯಾತ ಪೀಠಾಧಿಪತಿಗಳು ಹರ ಗುರು ಚರಮೂರ್ತಿಗಳು ಈ ಕಾರ್ಯಕ್ರಮದಲ್ಲಿ ಸಾಕ್ಷಿಯಾಗಲಿದ್ದಾರೆ

ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾದ ಎಚ್ ಡಿ ಕುಮಾರಸ್ವಾಮಿ ಅವರು. ರಾಜ್ಯ ಸರ್ಕಾರದ ಉಪ ಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್. ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ಜಸ್ಟಿಸ್ ವಿ ಗೋಪಾಲಗೌಡರು ಕೇಂದ್ರ ರೈಲ್ವೆ ಮತ್ತು ಜಲಸಂಪನ್ಮೂಲ ಸರ್ಕಾರ ಸಚಿವರಾದ



ವಿ ಸೋಮಣ್ಣನವರು ಸೇರಿದಂತೆ ಲೋಕಸಭಾ ಸದಸ್ಯರುಗಳು ಕೇಂದ್ರ ಸರ್ಕಾರ ಸಚಿವರುಗಳು ಕರ್ನಾಟಕ ರಾಜ್ಯ ಸರ್ಕಾರದ ಸಚಿವರು ಸೇರಿದಂತೆ ಹಲವಾರು ಕೇಂದ್ರ ಸಚಿವರು, ರಾಜ್ಯ ಸರ್ಕಾರದ ಸಚಿವರು ಶಾಸಕರು ಮಾಜಿ ಶಾಸಕರು ಹಲವಾರು ಹಿರಿಯ ರಾಜಕಾರಣಿಗಳು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಂದು ಶ್ರೀಮಠದ ಜಗದ್ಗುರುಗಳಾದ ಡಾಕ್ಟರ್ ಶ್ರೀ ನಿಶ್ಚಲಾನಂದ ಮಹಾಸ್ವಾಮಿಜಿಗಳು ಉದಯವಾಹಿನಿ ಪತ್ರಿಕೆಗೆ ಈ ಮೂಲಕ ಜನತೆಗೆ ತಿಳಿಸಿದ್ದಾರೆ.

# ಧರ್ಮಸ್ಥಳ ಪ್ರಕರಣ, ಎಸ್‌ಐಟಿ ತನಿಖೆಗೆ ಮಧ್ಯಪ್ರವೇಶ ಮಾಡಲ್ಲ

■ ಧರ್ಮಸ್ಥಳ ಪ್ರಕರಣದ ತನಿಖೆ ತ್ವರಿತಗತಿಯಲ್ಲಿ ಆಗಬೇಕಾಗಿದೆ ■ ಎಸ್‌ಐಟಿ ತಂಡಕ್ಕೆ ನಾವು ಏನು ಸೂಚನೆ ಕೊಡುವುದಿಲ್ಲ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ಪ್ರಕರಣದ ತನಿಖೆ ತ್ವರಿತಗತಿಯಲ್ಲಿ ಆಗಬೇಕು. ಆದರೆ ಎಸ್ ಐ ಟಿ ಗೆ ಅವರದ್ದೇ ಆದ ತೀರ್ಮಾನ ಇರುತ್ತೆ .ತನಿಖೆ ನಡೆಸುತ್ತಿದ್ದಾರೆ ತನಿಖೆ ಮುಗಿಯುವವರೆಗೂ ಯಾವ ವಿಚಾರವನ್ನು ಅವರು ಹೇಳುವ ಹಾಗಿಲ್ಲ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಸ್ಪಷ್ಟಪಡಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಾವು ಟರ್ಮ್ಸ್ ಆಫ್ ರೆಫರೆನ್ಸ್ ನಲ್ಲಿ ಅವರಿಗೆ ಹೇಳಿದ್ದೇವೆ.ಅದರ ಪ್ರಕಾರ ತನಿಖೆ ಮಾಡುತ್ತಾರೆ. ಎಸ್‌ಐಟಿಗೆ ನಾವು ಏನು ಸೂಚನೆ ಕೊಡುವುದಿಲ್ಲ ಎಂದು ತಿಳಿಸಿದರು. ಸೌಜನ್ಯ ತಾಯಿ ದೂರು ನೀಡಿರುವ ವಿಚಾರವಾಗಿ ಮಾತನಾಡಿ, ಅವರು ಕೊಟ್ಟಿರುವ ದೂರು ಈ ಪ್ರಕರಣಕ್ಕೆ ಲಿಂಕ್ ಇದೆ ಇಲ್ವಾ ಅನ್ನೋದನ್ನು ಚೆಕ್ ಮಾಡ್ತಾರೆ. ಅದನ್ನು ತನಿಖೆ ಮಾಡಬೇಕಾ ಬೇಡ್ವಾ ಎಂಬುವುದನ್ನು ಎಸ್‌ಐಟಿ ಅಧಿಕಾರಿಗಳು ತೀರ್ಮಾನ ಮಾಡುತ್ತಾರೆ. ಈ ಪ್ರಕರಣ ಎಲ್ಲಿಗೆ ಹೋಗುತ್ತೆ ಅಂತ ಗೊತ್ತಿಲ್ಲ.ಬೇಗ ಮುಗಿದ್ರೆ ಬೇಗ ವರದಿ ಕೊಡ್ತಾರೆ ಎಂದರು.

ಪ್ರಕರಣ ತಾರ್ಕಿಕ ಅಂತ್ಯಕ್ಕೆ ಹೋಗುವ ತನಕ ತನಿಖೆ ಮಾಡುತ್ತಾರ. ಈಗಲೇ ಕೊಡಿ ಒಂದು ವಾರದಲ್ಲಿ ಮುಗಿಸಿ ಅಂತ ಹೇಳೋಕೆ ಇದು ಆ ರೀತಿಯಾದ ವಿಚಾರ ಅಲ್ಲ. ಎಸ್ ಐ ಟಿ ತನಿಖೆಗೆ ನಾವು ಸಮಯ ನಿಗದಿ ಮಾಡೋಕೆ ಬರಲ್ಲ. ಮುಂದಿನ ವಾರ ತನಿಖೆ ಮುಗಿಸಿ ಕೊಟ್ಟುಬಿಡಿ ಅಂತ ಹೇಳೋಕೆ ಬರಲ್ಲ ಎಂದರು. ಎನ್ ಐ ಎ ತನಿಖೆಗೆ ಕೇಳಬೇಕಾದರೆ ಇಲ್ಲಿ ತನಿಖೆ ನಡೆಯುವ ಬಗ್ಗೆ ಯಾರದ್ದು ತಕರಾರಿಲ್ಲ. ಎಸ್‌ಐಟಿಯನ್ನ ಧರ್ಮಸ್ಥಳದ ಧರ್ಮಾಧಿಕಾರಿಯಿಂದ ಹಿಡಿದು ಎಲ್ಲರೂ ಸ್ವಾಗತ ಮಾಡಿದ್ದಾರೆ .ಈ ಸಂದರ್ಭದಲ್ಲಿ ಬೇರೆ ತನಿಖೆ ಅಗತ್ಯ ಇಲ್ಲ. ಎಸ್‌ಐಟಿ ಚೆನ್ನಯ್ಯನನ್ನ ಬೆಂಗಳೂರಿಗೆ ಕರೆತರುವ ವಿಚಾರ ನನಗೆ ಗೊತ್ತಿಲ್ಲ. ಎಸ್‌ಐಟಿಯವರು ಏನು ಮಾಡ್ತಾರೆ ಅಂತ ಹೇಳಲ್ಲ. ನಾನು ಹೇಳಿದಂಗೆ ನೀವು ಹೇಳಿದಂಗೆ ಇನ್ಯಾರೋ ಹೇಳಿಕೆ ಕೊಟ್ಟ ಹಾಗೆ ತನಿಖೆ ನಡೆಯಲ್ಲ.ತನಿಖೆಗೆ ಅವರದೇ ಆದ ಪ್ರಕ್ರಿಯೆ ಇದೆ ಎಂದರು.

ಗುಂಡಿ ತೋಡಿದ ಸಂದರ್ಭದಲ್ಲಿ ಸಂಗ್ರಹ ಮಾಡಿರುವ ಸ್ಯಾಂಪಲ್‌ನೆಲ್ಲಾ ಎಫ್‌ಎಸ್‌ಎಲ್ ಗೆ ಕೊಟ್ಟಿದ್ದಾರೆ. ಅದೆಲ್ಲ ಅನಾಲಿಸಿಸ್ ಮಾಡಿ ಅದರ ಫಲಿತಾಂಶ ಬರಬೇಕು. ಹೀಗಾಗಿ ನಾವು ಇಂತ ಕೇಸ್ ಅಲ್ಲಿ ಊಹೆ ಮಾಡೋಕೆ ಬರಲ್ಲ ಎಂದ ಅವರು, ಡಾ. ಸಿಎಸ್ ದ್ವಾರಕನಾಥ್ ಹೇಳಿಕೆಗೆ ನಾನು ಪ್ರತಿಕ್ರಿಯೆ ಮಾಡೋಕೆ ಹೋಗಲ್ಲ ದಯವಿಟ್ಟು ಕ್ಷಮಿಸಿ ಎಂದರು.



### ಅವರೇನು ರಾಜಕಾರಣಕ್ಕೆ ಹೊಸಬರಲ್ಲ

**ಸಚಿವರ ಜೊತೆ ಸಿಎಂ ಬಿಹಾರ ರಾಹುಲ್ ಯಾತ್ರೆಗೆ ಹೋಗಿದ್ದ ವಿಚಾರವಾಗಿ ಮಾತನಾಡಿ, ರಾಹುಲ್ ಗಾಂಧಿಯವರ ಯಾತ್ರೆ ನಡೀತಾ ಇದೆ .ಹಾಗಾಗಿ ನಾನು ಮುಖ್ಯಮಂತ್ರಿಗಳು ಎಲ್ಲರೂ ಹೋಗಿದ್ವಿ. ನಾವೂ ಬೆಂಬಲ ಸೂಚಿಸುವ ಸಲುವಾಗಿ ಹೋಗಿದ್ವಿ ಎಂದರು. ಡಿಕೆಶಿ ಒಬ್ಬಂಟಿ ಆದರು ಎನ್ನುವ ವಿಚಾರವಾಗಿ ಮಾತನಾಡಿ, ಡಿಕೆ ಶಿವಕುಮಾರ್ ನಮ್ಮ ಪಕ್ಷದ ಅಧ್ಯಕ್ಷರು. ಅವರು ಡಿಸಿಎಂ ಎನ್ನುವುದಕ್ಕಿಂತ ಹೆಚ್ಚಾಗಿ ನಮ್ಮ ಪಕ್ಷದ ಅಧ್ಯಕ್ಷರು. ಅವರಿಗೆ ಆದ ಗೌರವ ಘನತೆ ಇದೆ. ಅವರೇನು ರಾಜಕಾರಣಕ್ಕೆ ಹೊಸಬರಲ್ಲ. ಅವರು ಸಮರ್ಥರಿದ್ದಾರೆ, ರಾಜಕೀಯವಾಗಿ ಜ್ಞಾನ ಇದೆ. ಅವರು ಒಬ್ಬಂಟಿ ಎಂಬುವುದು ಸರಿ ಅಲ್ಲ ಎಂದು ತಿಳಿಸಿದರು.**

# ಆನ್‌ಲೈನ್ ಗೇಮಿಂಗ್ ಕಾಯ್ದೆ ವಿರುದ್ಧ ಅರ್ಜಿ: ಕೇಂದ್ರದ ಪ್ರತಿಕ್ರಿಯೆ ಕೇಳಿ ಕರ್ನಾಟಕ ಹೈಕೋರ್ಟ್ ನೋಟಿಸ್!

• **ಉದಯವಾಹಿನಿ, ಬೆಂಗಳೂರು**

ಆನ್‌ಲೈನ್ ಗೇಮಿಂಗ್ (ಪ್ರಚಾರ ಮತ್ತು ನಿಯಂತ್ರಣ) ಕಾಯ್ದೆ 2025 ಅನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ಕುರಿತು ಕರ್ನಾಟಕ ಹೈಕೋರ್ಟ್ ಕೇಂದ್ರ ಸರ್ಕಾರದಿಂದ ಪ್ರತಿಕ್ರಿಯೆ ಕೋರಿದೆ. ಈ ಕಾನೂನು ಇದ್ದಕ್ಕಿದ್ದಂತೆ ಸಾವಿರಾರು ಜನರ ಜೀವನೋಪಾಯವನ್ನು ಕಸಿದುಕೊಳ್ಳುತ್ತದೆ.

ಅಲ್ಲದೆ ರಾತ್ರೋರಾತ್ರಿ ಉದ್ಯಮವನ್ನು ಸ್ಥಗಿತಗೊಳಿಸಿದೆ ಎಂದು ಅರ್ಜಿದಾರರು ವಾದಿಸಿದ್ದಾರೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ. ಶ್ಯಾಮ್ ಪ್ರಸಾದ್ ಕೇಂದ್ರಕ್ಕೆ ನೋಟಿಸ್ ನೀಡಿದೆ. ರಾಷ್ಟ್ರಪತಿಗಳ ಅನುಮೋದನೆಯ ಹೊರತಾಗಿಯೂ ಈ ಕಾಯ್ದೆಯನ್ನು ಇನ್ನೂ ತಿಳಿಸಲಾಗಿಲ್ಲ ಎಂದು ಅರ್ಜಿದಾರರ ಪರ ಹಾಜರಿದ್ದ ಹಿರಿಯ ವಕೀಲರು ವಾದಿಸಿದರು.

ಈ ಉದ್ಯಮ ಇದ್ದಕ್ಕಿದ್ದಂತೆ ಮುಚ್ಚಿದರೆ, ಗಂಭೀರ ಪರಿಣಾಮಗಳು ಉಂಟಾಗುತ್ತವೆ. ಸರ್ಕಾರವು ಅಧಿಸೂಚನೆಯನ್ನು ನಿಲ್ಲಿಸಬೇಕು ಅಥವಾ ಕನಿಷ್ಠ ಒಂದು ವಾರದ ಸೂಚನೆ ನೀಡಬೇಕು. ಇದರಿಂದ ನಾವು ನ್ಯಾಯಾಲಯಕ್ಕೆ ಬರಬಹುದು ಎಂದು ವಾದಿಸಿದರು.




ಅದೇ ಸಮಯದಲ್ಲಿ, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಸರ್ಕಾರದ ಪರವಾಗಿ ವಾದಿಸಿದ್ದು, ಸಂಸತ್ತು ಕಾನೂನನ್ನು ಅಂಗೀಕರಿಸಿ ರಾಷ್ಟ್ರಪತಿಗಳಿಂದ ಅನುಮೋದನೆ ಪಡೆದ ನಂತರ, ಅಧಿಸೂಚನೆಯು ಸಾಂವಿಧಾನಿಕ ಪ್ರಕ್ರಿಯೆಯಾಗಿದ್ದು, ಇದರಲ್ಲಿ ನ್ಯಾಯಾಲಯವು ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದು ವಾದಿಸಿದರು. ಹೀಗಾಗಿ ಕೋರ್ಟ್ ಪ್ರಕರಣದ ಮುಂದಿನ ವಿಚಾರಣೆಯೊಳಗೆ ಉತ್ತರ ಸಲ್ಲಿಸುವಂತೆ ಹೈಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ. ಯಾವುದೇ ಸಮಾಲೋಚನೆ ಮತ್ತು ಚರ್ಚೆಯಿಲ್ಲದೆ ಹೊಸ ಕಾನೂನನ್ನು ತರಲಾಗಿದೆ. ಇದು ಆನ್‌ಲೈನ್ ಕೌಶಲ್ಯ ಗೇಮಿಂಗ್ ಕ್ಷೇತ್ರದ ಮೇಲೆ ನೇರ ಪರಿಣಾಮ ಬೀರುತ್ತದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಅರ್ಜಿದಾರರ ಪ್ರಕಾರ, ಇದು ಕೋಟಿಗಟ್ಟಲೆ ಹೂಡಿಕೆ ನಷ್ಟಕ್ಕೆ ಕಾರಣವಾಗುವುದಲ್ಲದೆ 2 ಲಕ್ಷಕ್ಕೂ ಹೆಚ್ಚು ಜನರ ಜೀವನೋಪಾಯಕ್ಕೂ ಅಪಾಯವನ್ನುಂಟು ಮಾಡುತ್ತದೆ.

ಕೌಶಲ್ಯ ಆಧಾರಿತ ಆಟಗಳನ್ನು ಕಾನೂನುಬದ್ಧ ವ್ಯವಹಾರವೆಂದು ಪರಿಗಣಿಸಲಾಗುತ್ತದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಇದನ್ನು ಸಂವಿಧಾನದ 19(1)(g) ವಿಧಿಯ ಅಡಿಯಲ್ಲಿ ರಕ್ಷಿಸಲಾಗಿದೆ.

## ರಾಯರ ಮಠದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು, ಅನ್ನದಾನ ಸೇವೆ, ನೃತ್ಯ ಸೇವೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಆ.28 ರಂದು ಬೆಳಗ್ಗೆ ರಾಯರಿಗೆ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ ಮಹಾಮಂಗಳಾರತಿ, ಅನ್ನದಾನ ಸೇವೆಗಳು ಜರುಗಿದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ ಗಜವಾಹನೋತ್ಸವ ಪಲ್ಲಕ್ಕಿ ಉತ್ಸವ ತೊಟ್ಟಿಲು ಸೇವೆ, ಅಷ್ಟಾವಧಾನ ಸೇವೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭರತನಾಟ್ಯ ವಿದುಷಿ ಡಾ|| ವಿದ್ಯಾ ಎಸ್. ಅವರ ನಿರ್ದೇಶನದಲ್ಲಿ ನೃತ್ಯ ಲೋಕ ಕಲಾ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಏರ್ಪಡಿಸಿತ್ತು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು.

## ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ ಡಾ. ಎಂ.ಎ ಸಲೀಂ ನೇಮಕ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿ (ಡಿಜಿ-ಐಜಿಪಿ)ಯಾಗಿ ಹಿರಿಯ ಐಪಿಎಸ್ ಅಧಿಕಾರಿ ಡಾ. ಎಂ.ಎ ಸಲೀಂ ಅವರನ್ನು ರಾಜ್ಯ ಸರ್ಕಾರ ನೇಮಿಸಿದೆ.ಈ ಬಗ್ಗೆ ಅಧಿಸೂಚನೆ ಹೊರಡಿಸಿದೆ. ಅವರು ಮೇ 21ರಿಂದ ಪ್ರಭಾರ ಡಿಜಿ-ಐಜಿಪಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರು.

## ಮೃತಪಟ್ಟವರ ಪ್ರತಿ ಕುಟುಂಬಕ್ಕೆ 25 ಲಕ್ಷ ರೂ ನೆರವು ನೀಡಿದ ಆರ್‌ಸಿಬಿ

• **ಉದಯವಾಹಿನಿ, ಬೆಂಗಳೂರು**

ಆರ್‌ಸಿಬಿ ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ್ದ ಕಾಲ್ತುಳಿತದಿಂದ ಮೃತಪಟ್ಟ ಪ್ರತಿ ಕುಟುಂಬಗಳಿಗೆ ತಲಾ 25 ಲಕ್ಷ ರೂ. ಆರ್ಥಿಕ ಸಹಾಯ ನೀಡಿರುವುದಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಅಧಿಕೃತವಾಗಿ ಪ್ರಕಟಿಸಿದೆ. ಜೂನ್ 4, 2025 ರಂದು ನಡೆದ ಕಾಲ್ತುಳಿತದಿಂದಾಗಿ 11 ಮಂದಿ ಅಭಿಮಾನಿಗಳು ಸಾವಿಗೀಡಾಗಿದ್ದರು. ಅಭಿಮಾನಿಗಳ ಸಾವಿನ ಬೆನ್ನಲ್ಲೇ ಆರ್‌ಸಿಬಿ ಕೇರ್ಸ್ ಶುರು ಮಾಡಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಇದೀಗ ಮೃತಪಟ್ಟ ಕುಟುಂಬಗಳಿಗೆ ಧನ ಸಹಾಯ ನೀಡಿದೆ. ಅಲ್ಲದೆ ಆರ್‌ಸಿಬಿ ಕೇರ್ಸ್ ಮೂಲಕ ಮತ್ತಷ್ಟು ಸಹಾಯಹಸ್ತ ನೀಡುವ ಹಾಗೂ ಕಾರ್ಯಕ್ರಮಗಳನ್ನು ಆಯೋಜಿಸುವ ಭರವಸೆಯನ್ನು ಸಹ ನೀಡಿದ್ದಾರೆ.

**ಆರ್‌ಸಿಬಿ ಕೇರ್ಸ್‌ನ ಅಧಿಕೃತ ಪ್ರಕಟಣೆ ಹೀಗಿದೆ:** ಜನವರಿ 4, 2025 ಈ ದಿನ ನಮ್ಮ ಹೃದಯದಲ್ಲಿ ಶಾಶ್ವತವಾಗಿ ಉಳಿಯಲಿದೆ. ನಾವು ಕಳೆದುಕೊಂಡಿದ್ದು 11 ಅಭಿಮಾನಿಗಳನ್ನಷ್ಟೇ ಅಲ್ಲ ಅವರು ನಮ್ಮ ಕುಟುಂಬದ ಸದಸ್ಯರಾಗಿದ್ದರು, ನಮ್ಮ ಹೃದಯದ ಭಾಗವಾಗಿದ್ದರು. ಅವರ ಉತ್ಸಾಹವೇ ನಮ್ಮ ನಗರ, ಸಮುದಾಯ ಮತ್ತು ತಂಡಕ್ಕೆ ಜೀವ ತುಂಬುವ ಬೆಳಕಾಗಿತ್ತು. ನಮ್ಮ ನೆನಪುಗಳಲ್ಲಿ ಅವರು ಸದಾ ಜೀವಂತವಾಗಿರುತ್ತಾರೆ. ಅವರ ಜಾಗವನ್ನು ಯಾವ ಸಹಾಯವೂ ತುಂಬಲಾರದು. ಆದರೆ ಮೊದಲನೇ ಮತ್ತು ಗೌರವದ ಸಂಕೇತವಾಗಿ, ಆರ್‌ಸಿಬಿ ಪ್ರತಿ ಕುಟುಂಬಕ್ಕೆ 25 ಲಕ್ಷ ರೂ. ನೆರವನ್ನು ನೀಡಿದೆ. ಇದು ಕೇವಲ ಆರ್ಥಿಕ ಸಹಾಯವಲ್ಲ, ಕರುಣೆ, ಒಗಟ್ಟು ಮತ್ತು ನಿರಂತರ ಕಾಳಜಿಯ ಭರವಸೆ.

## 50% ಟ್ರಾಫಿಕ್ ಫೈನ್ ಡಿಸ್ಕೌಂಟ್ : ಒಂದೇ ವಾರದಲ್ಲಿ 21 ಕೋಟಿ ದಂಡ ಸಂಗ್ರಹ

• **ಉದಯವಾಹಿನಿ, ಬೆಂಗಳೂರು**

ಸಂಚಾರ ನಿಯಮ ಉಲ್ಲಂಘನೆ ಮಾಡಿ ದಂಡ ಕಟ್ಟದೇ ಬಾಕಿ ಉಳಿಸಿಕೊಂಡಿದ್ದ ವಾಹನ ಸವಾರರಿಗೆ ಸರ್ಕಾರ 50% ಡಿಸ್ಕೌಂಡ್ ನೀಡಿತ್ತು. ಇದೀಗ ಒಂದೇ ವಾರದಲ್ಲಿ 21 ಕೋಟಿ 86 ಸಾವಿರ ರೂ. ದಂಡ ಸಂಗ್ರಹವಾಗಿದೆ. ಆ.21ರಂದು ಟ್ರಾಫಿಕ್ ಫೈನ್‌ಗೆ 50% ಡಿಸ್ಕೌಂಟ್ ಆದೇಶ ನೀಡಲಾಗಿತ್ತು. ಆ.23 ರಿಂದ ಸೆ.12 ರ ವರೆಗೆ ರಿಯಾಯಿತಿ ದರದಲ್ಲಿ ದಂಡ ಕಟ್ಟಲು ವಾಹನ ಸವಾರರಿಗೆ ಅವಕಾಶ ನೀಡಲಾಗಿದೆ. ಅದರಂತೆ ಕಳೆದ ಆರು ದಿನದಲ್ಲಿ 7,43,160 ಕೇಸ್ ವಿಲೇವಾರಿ ಮಾಡಿ 21 ಕೋಟಿ 86 ಸಾವಿರ ರೂ. ದಂಡ ಸಂಗ್ರಹ ಮಾಡಲಾಗಿದೆ. ಬೆಂಗಳೂರು ವ್ಯಾಪ್ತಿಗೆ ಮಾತ್ರ ಈ ಡಿಸ್ಕೌಂಡ್ ನೀಡಿದ್ದು, ವಾಹನ ಸವಾರರ ರಿಯಾಕ್ಷನ್ ನೋಡಿಕೊಂಡು ಜಿಲ್ಲೆಗಳಿಗೂ ವಿಸ್ತರಣೆ ಮಾಡಬೇಕೇ ಬೇಡವೇ ಅನ್ನೋದು ತೀರ್ಮಾನ ಮಾಡುವ ಸಾಧ್ಯತೆ ಇದೆ. ಇನ್ನೂ ಹತ್ತು ದಿನಗಳ ಕಾಲ ರಿಯಾಯಿತಿ ದರದಲ್ಲಿ ದಂಡ ಕಟ್ಟಲು ಅವಕಾಶವಿದ್ದು, ಸುಮಾರು 50 ಕೋಟಿಯಷ್ಟು ದಂಡ ಸಂಗ್ರಹವಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

## ಪಿಎಸ್‌ಐ ಮೇಲೆ ವಾಹನ ಹತ್ತಿಸಲು ಯತ್ನ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ರಾತ್ರಿ ಗಸ್ತಿನಲ್ಲಿದ್ದ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಮೇಲೆ ಯುವಕರ ಗುಂಪೊಂದು ಕಾರು ಹತ್ತಿಸಲು ಯತ್ನಿಸಿದ ಘಟನೆ ರಾಜಗೋಪಾಲನಗರ ಠಾಣಾ ವ್ಯಾಪ್ತಿಯಲ್ಲಿ ಗುರುವಾರ ರಾತ್ರಿ ನಡೆದಿದೆ. ಠಾಣಾ ವ್ಯಾಪ್ತಿಯ ಮಾರ್ಕ್ ಬಾರ್ ಬಳಿ 4-5 ಜನರ ಗುಂಪು ವಾಹನ ನಿಲ್ಲಿಸಿಕೊಂಡು ಮದ್ಯ ಸೇವಿಸುತ್ತಿತ್ತು. ಗಸ್ತಿನಲ್ಲಿದ್ದ ಪಿಎಸ್‌ಐ ಮುರುಳಿ ಅವರು ಬಾರ್ ಬಳಿ ನಿಂತಿದ್ದ ಯುವಕರನ್ನು ಪ್ರಶ್ನಿಸಲು ಮುಂದಾದರು. ಪಿಎಸ್‌ಐ ಅವರನ್ನು ನೋಡುತ್ತಿದ್ದಂತೆ ಎಲ್ಲರೂ ಕಾರು ಒಳಗೆ ಕುಳಿತುಕೊಂಡಿದ್ದಾರೆ. ತಕ್ಷಣ ಚಾಲಕ ವಾಹನವನ್ನು ಹಿಂದಕ್ಕೆ ತೆಗೆದುಕೊಂಡಿದ್ದಾರೆ. ವಾಹನ ನಿಲ್ಲಿಸುವಂತೆ ಅಧಿಕಾರಿ ಹೇಳಿದರೂ, ವೇಗವಾಗಿ ಅವರ ಮೇಲೆ ಹತ್ತಿಸಲು ಯತ್ನಿಸಿ, ಪರಾರಿಯಾಗಿದ್ದಾರೆ. ಈ ವೇಳೆ ಪಿಎಸ್‌ಐ ಅವರ ಕೈಗೆ ಗಾಯವಾಗಿ ರಕ್ತ ಸುರಿದಿದೆ. ವಾಹನದ ಮೇಲೆ ಜಯ ಕರ್ನಾಟಕ ಸಂಘಟನೆ ಎಂಬ ಹೆಸರು ಇದೆ. ವಾಹನದ ನೋಂದಣಿ ಸಂಖ್ಯೆ ಆಧರಿಸಿ, ಮಾಲೀಕನನ್ನು ಪತ್ತೆ ಮಾಡಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಧರ್ಮಸ್ಥಳ ಕೇಸ್‌ಲ್ಲಿ ಎಸ್‌ಐಟಿ ತನಿಖೆಗೆ ಸಮಯ ನಿಗದಿ ಮಾಡಿಲ್ಲ

**ಸೌಜನ್ಯ ತಾಯಿ ಕೊಟ್ಟಿರುವ ದೂರು ತನಿಖೆ ಆಗುತ್ತಾ ಎಂಬ ವಿಚಾರಕ್ಕೆ ಪ್ರತಿಕ್ರಿಯೆ**

• **ಉದಯವಾಹಿನಿ, ಬೆಂಗಳೂರು**

ಧರ್ಮಸ್ಥಳ ಕೇಸ್‌ನಲ್ಲಿ ಎಸ್‌ಐಟಿ ತನಿಖೆ ಪೂರ್ಣ ಮಾಡಲು ಸಮಯ ನಿಗದಿ ಮಾಡಿಲ್ಲ. ಎಸ್‌ಐಟಿ ತನಿಖೆ ನಡೆಸುವಾಗಲೇ ಎನ್‌ಐಎ ತನಿಖೆಯೂ ಸಾಧ್ಯವಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ತನಿಖೆ ತ್ವರಿತವಾಗಿ ಆಗಬೇಕು ಎಂದು ಹೇಳಿದ್ರೆ, ಎಸ್‌ಐಟಿ ಅವರಿಗೆ ಅವರದ್ದೇ ಆದ ತೀರ್ಮಾನ ಇರುತ್ತದೆ. ಎಸ್‌ಐಟಿ ಅವರು ತನಿಖೆ ಮಾಡುತ್ತಿದ್ದಾರೆ. ತನಿಖೆ ಮುಗಿಯೋವರೆಗೂ ಅವರು ಯಾವ ವಿಚಾರಗಳನ್ನು ಹೇಳುವ ಹಾಗೇ ಇಲ್ಲ. ನಾವು ಹೇಳೋ ಹಾಗೇ ಇಲ್ಲ. ತನಿಖೆ ತ್ವರಿತವಾಗಿ ಆಗಲಿ ಅಂತ ಹೇಳಬಹುದು. ಎಸ್‌ಐಟಿಗೆ ಟರ್ಮ್ಸ್ ಆಫ್ ರೆಫರೆನ್ಸ್ ಕೊಟ್ಟಿದ್ದೇವೆ ಅದನ್ನ ಮಾಡ್ತಾರೆ. ಅದರಲ್ಲಿ ಅವರಿಗೆ ಬೇರೆ ಬೇರೆ ಮಾಹಿತಿ ಸಿಗುವ ಹಾಗಿದ್ದರೆ ಅವರೇ ತನಿಖೆ ಮಾಡಿಕೊಳ್ತಾರೆ. ಅದಕ್ಕೆ ನಾವು ಯಾವುದೇ ಡೈರೆಕ್ಷನ್ಸ್ ಕೊಡೋದಿಲ್ಲ ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಸೌಜನ್ಯ ತಾಯಿ ಕೊಟ್ಟಿರುವ ದೂರು ತನಿಖೆ ಆಗುತ್ತಾ ಎಂಬ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದನ್ನ ಎಸ್‌ಐಟಿ ಅವರು ಡಿಸೈಡ್ ಮಾಡ್ತಾರೆ. ಇದಕ್ಕೂ ಅದಕ್ಕೂ ಲಿಂಕ್ ಇದೆಯಾ? ಇಲ್ಲವಾ? ಹಾಗೂ ತನಿಖೆ ಮಾಡಬೇಕಾ? ಬೇಡವಾ? ಅಂತ ಎಸ್‌ಐಟಿ ನಿರ್ಧರಿಸಿ ತನಿಖೆ ಮಾಡುತ್ತದೆ. ನಾವು ಅದನ್ನ ಹೇಳೋಕೆ ಸಾಧ್ಯವಿಲ್ಲ. ಧರ್ಮಸ್ಥಳ ಕೇಸ್ ತನಿಖೆ ಇಷ್ಟೇ ದಿನದಲ್ಲಿ ಮಾಡಿ ಅಂತ ಹೇಳಿಲ್ಲ. ಆದಷ್ಟೂ ಬೇಗ ತನಿಖೆ ಮಾಡಿ ಅಂತ ಹೇಳಿದ್ದೇವೆ. ಸಮಯ ನಿಗದಿ ಮಾಡೋಕೆ ಆಗೋದೇ ಇಲ್ಲ. ತನಿಖೆ ಹೇಗೆ ಹೋಗುತ್ತದೆ ಅಂತ ಯಾರಿಗೂ ಗೊತ್ತಿಲ್ಲ. ಬೇಗ ಮುಗಿದರೆ ಬೇಗ ವರದಿ ಕೊಡ್ತಾರೆ. ತನಿಖೆ ಪೂರ್ತಿ ಮುಗಿಯುವವರೆಗೂ ಅವರು ತನಿಖೆ ಮಾಡುತ್ತಲೇ ಇರುತ್ತಾರೆ ಎಂದು ಹೇಳಿದ್ದಾರೆ.

> **ಎನ್‌ಐಎ ತನಿಖೆಗೆ ಕೊಡಿ ಎಂಬ ವಿಪಕ್ಷಗಳ ಆಗ್ರಹ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯಾವುದೇ ತನಿಖೆಗೆ ಕೊಡಬೇಕಾದರೂ ಈಗ ಇಲ್ಲಿ ತನಿಖೆ ನಡೆಯುತ್ತಿದೆ. ತನಿಖೆ ನಡೆಯೋ ಬಗ್ಗೆ ಯಾರದ್ದು ತಕರಾರಿಲ್ಲ. ಎಸ್‌ಐಟಿ ತನಿಖೆ ಎಲ್ಲರೂ ಸ್ವಾಗತ ಮಾಡಿದ್ದಾರೆ. ಧರ್ಮಸ್ಥಳದ ಹೆಗ್ಗಡೆ ಅವರು ತನಿಖೆ ಸ್ವಾಗತ ಮಾಡಿದ್ದಾರೆ. ತನಿಖೆ ನಡೆಯುತ್ತಿದೆ ಈ ಸಮಯದಲ್ಲಿ ಬೇರೆ ಏಜೆನ್ಸಿಯಿಂದ ತನಿಖೆ ಆಗತ್ಯವಿಲ್ಲ. ಹೀಗಾಗಿ ಸದ್ಯಕ್ಕೆ ಎನ್‌ಐಎ ತನಿಖೆಗೆ ಕೊಡುವುದಿಲ್ಲ ಎಂದು ತಿಳಿಸಿದ್ದಾರೆ.**

ಬಿಜೆಪಿ-ಜೆಡಿಎಸ್‌ನಿಂದ ಧರ್ಮಸ್ಥಳ ಯಾತ್ರೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ತನಿಖೆ ಹೀಗೆ ಆಗುತ್ತೆ, ಆಗಬೇಕು, ನಾಳೆ ತನಿಖೆ ಮುಗಿಸಿ ಕೊಡಿ ಎಂದು ಹೇಳೋಕೆ ಆಗಲ್ಲ.

ಯಾವುದೇ ತನಿಖೆಯಾದರೂ ಕೂಡ ನಾವು ಸಮಯ ನಿಗದಿ ಮಾಡಲು ಸಾಧ್ಯವಿಲ್ಲ. ರಾಜಕೀಯಕ್ಕೆ ತಿರುಗಿದರೂ ಕೂಡ ನಾವು ಎಸ್‌ಐಟಿ ಅವರಿಗೆ ಮುಂದಿನ ವಾರ ಮುಗಿಸಿ, ವರದಿ ಕೊಡಿ ಎಂದು ಹೇಳೋಕಾಗಲ್ಲ ಎಂದಿದ್ದಾರೆ.

ಈವರೆಗೂ ಪ್ರಕರಣದಲ್ಲಿ ಯಾರನ್ನು ಬಂಧಿಸದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ತನಿಖೆಗಳು ನಾನು, ನೀವು, ಬೇರೆಯವರು ಹೇಳಿದ ಹಾಗೆ ನಡೆಯುವುದಿಲ್ಲ. ಎಸ್‌ಐಟಿ ಅವರಿಗೆ ಅವರದ್ದೇ ಆದ ತನಿಖೆಯ ಕ್ರಮಗಳಿವೆ. ಅದನ್ನ ಅವರು ಮಾಡಿಕೊಳ್ತಾರೆ. ಸ್ಯಾಂಪಲ್ ತಂದು ಎಫ್‌ಎಸ್‌ಎಲ್‌ಗೆ ಕೊಟ್ಟಿದ್ದಾರೆ. ಅದರ ಮಾಹಿತಿ ಪಡೆಯಬೇಕು. ಅದರ ರಿಪೋರ್ಟ್ ಬರಬೇಕು. ಅದರ ಮೇಲೆ ಏನೇನು ಇರುತ್ತದೆ ಗೊತ್ತಿಲ್ಲ ಎಂದರು. ಇನ್ನೂ ದ್ವಾರಕನಾಥ್ ಎನ್‌ಐಎ, ಸಿಬಿಐಗೆ ಕೊಟ್ಟರೆ ಕೇಸ್ ಮುಚ್ಚಿ ಹೋಗುತ್ತದೆ ಎಂಬ ಹೇಳಿಕೆ ವಿಚಾರವಾಗಿ ಮಾತನಾಡಿ, ಎಲ್ಲರ ಹೇಳಿಕೆಗೆ ನಾನು ಪ್ರತಿಕ್ರಿಯೆ ಮಾಡುವುದಿಲ್ಲ ಎಂದಿದ್ದಾರೆ

## ಸರ್ಕಾರದಿಂದ ಕೆಟಿಪಿಪಿ ಕಾಯ್ದೆ ಉಲ್ಲಂಘನೆ: ರೂ.600 ಕೋಟಿ ನಷ್ಟ

• **ಉದಯವಾಹಿನಿ, ಬೆಂಗಳೂರು**

ರಾಯಲ್ ಆರ್ಕಿಡ್ ಹೋಟೆಲ್ಸ್ ಲಿಮಿಟೆಡ್‌ಗೆ 1.07 ಲಕ್ಷ ಚದರಡಿ ಭೂಮಿಯ ಗುತ್ತಿಗೆ ನೀಡುವಲ್ಲಿ ರಾಜ್ಯ ಸರ್ಕಾರ ಕಾನೂನನ್ನು ಉಲ್ಲಂಘಿಸಿರುವುದರಿಂದ ಸರ್ಕಾರಕ್ಕೆ ರೂ.600 ಕೋಟಿ ನಷ್ಟ ಉಂಟಾಗಿದೆ.ಸ್ಟಾರ್ ಹೋಟೆಲ್‌ಗಳ ಕಾರ್ಯಾಚರಣೆ ನಡೆಸುವ ರಾಯಲ್ ಆರ್ಕಿಡ್ ಹೋಟೆಲ್‌ಗೆ ಟೆಂಡರ್ ಪ್ರಕ್ರಿಯೆ ನಡೆಸದೆ, ಅಧಿಕಾರಿಗಳ ಸಲಹೆಯನ್ನೂ ಪರಿಗಣಿಸದೆ ಅತಿ ಕಡಿಮೆ ಬೆಲೆಗೆ ಗುತ್ತಿಗೆ ನೀಡಲಾಗಿದೆ.



ಮಾಹಿತಿ ಹಕ್ಕು ಕಾಯ್ದೆಯಡಿ ಪಡೆದಿರುವ ದಾಖಲೆಗಳ ಪ್ರಕಾರ, ದೊಮ್ಮಲೂರಿನಲ್ಲಿರುವ ಕರ್ನಾಟಕ ಗಾಲ್ಫ್ ಅಸೋಸಿಯೇಷನ್ ಪಕ್ಕದಲ್ಲಿರುವ 2 ಎಕರೆ 19 ಗುಂಟೆ (1,07,593 ಚದರಡಿ) ಭೂಮಿಯ ಗುತ್ತಿಗೆಯನ್ನು ಅಧಿಕಾರಿಗಳ ಆಕ್ಷೇಪಣೆಯ ನಡುವೆಯೂ ಮರು ನವೀಕರಿಸಲಾಗಿದೆ. ಪ್ರವಾಸೋದ್ಯಮದ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಹೋಟೆಲ್ ರಾಯಲ್ ಆರ್ಕಿಡ್‌ಗೆ ಹಲವು ಕಡೆ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆಎಸ್‌ಟಿಡಿಸಿ) ವತಿಯಿಂದ ಭೂಮಿ ನೀಡಲಾಗಿದೆ. 1992ರಲ್ಲಿ ರಾಯಲ್ ಆರ್ಕಿಡ್‌ಗೆ 4 ಎಕರೆ 32 ಗುಂಟೆಯನ್ನು ಪ್ರತಿ ಎಕರೆಗೆ ರೂ.1.11 ಲಕ್ಷ ವಾರ್ಷಿಕ ಬಾಡಿಗೆ ನಿಗದಿಪಡಿಸಿ 30 ವರ್ಷಕ್ಕೆ ಗುತ್ತಿಗೆಗೆ ನೀಡಲಾಗಿತ್ತು. ಈ ಗುತ್ತಿಗೆ ಅವಧಿ 2022ರ ಜನವರಿ 1ರಂದು ಮುಗಿದಿತ್ತು.

ಕಂಪನಿ ಗುತ್ತಿಗೆ ನವೀಕರಣಕ್ಕಾಗಿ ಅರ್ಜಿ ಸಲ್ಲಿಸಿತ್ತು. ಷರತ್ತಿನಂತೆ, ಗುತ್ತಿಗೆ ನವೀಕರಣವಾಗಬೇಕಿದ್ದರೆ ಪರಸ್ಪರ ಒಪ್ಪಿಗೆ'ಯಾಗಬೇಕಿತ್ತು. ಈ ಗುತ್ತಿಗೆ ನವೀಕರಣದ ಸಂದರ್ಭದಲ್ಲಿ ಕೆಎಸ್‌ಡಿಟಿಸಿ ಅಧಿಕಾರಿಗಳು ಕಡತವನ್ನು ಪರಿಶೀಲಿಸಿದಾಗ ಆಶ್ಚರ್ಯಗೊಂಡಿದ್ದಾರೆ. ಮೂಲ ಗುತ್ತಿಗೆಯ ನಿಯಮಗಳನ್ನು ಉಲ್ಲಂಘಿಸಿ, 25 ಗುಂಟೆ 27,000 ಚದರಡಿ ಭೂಮಿಯನ್ನು ರೂ.23 ಲಕ್ಷಕ್ಕೆ ಮತ್ತೊಂದು ಕಂಪನಿ ಗಾಲ್ಫ್ ವ್ಯೂ ಹೋಮ್‌ಗೆ ಉಪ ಗುತ್ತಿಗೆ ನೀಡಲಾಗಿತ್ತು. ಹೀಗಿದ್ದರೂ ಕಂಪನಿ ವಿರುದ್ಧ ಯಾವುದೇ ಶಿಸ್ತುಕ್ರಮ ಕೈಗೊಂಡಿರಲಿಲ್ಲ.

2022ರಲ್ಲಿ ಕೆಎಸ್‌ಟಿಡಿಸಿಯ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪತ್ರ ಬರೆದು, ಗುತ್ತಿಗೆ ನವೀಕರಣದ ಮನವಿಯನ್ನು ತಿರಸ್ಕರಿಸಬೇಕು ಎಂದು ತಿಳಿಸಿದ್ದರು.

ಗುತ್ತಿಗೆದಾರರು ಯಾವುದೇ ರೀತಿಯಲ್ಲೂ ಭೂಮಿಯನ್ನು ಉಪ ಗುತ್ತಿಗೆ. ಅಡಮಾನ ಅಥವಾ ಇತರೆ ಯಾವುದೇ ರೀತಿಯ ಪ್ರಕ್ರಿಯೆಯನ್ನು ಪೂರ್ವಾನುಮತಿ ಇಲ್ಲದೆ ನಡೆಸುವಂತಿಲ್ಲ ಎಂದು 1992ರ ಜುಲೈ 20ರಲ್ಲಿ ಸರ್ಕಾರ ಹೊರಡಿಸಿದ್ದ ಆದೇಶವನ್ನು ಅವರು ಉಲ್ಲೇಖಿಸಿದ್ದರು.

## ಅಭಿಮಾನ್ ಸ್ಟುಡಿಯೋ ಜಮೀನು ವಾಪಸ್ ಪಡೆಯಲು ಅರಣ್ಯ ಇಲಾಖೆ ನಿರ್ಧಾರ



• **ಉದಯವಾಹಿನಿ, ಬೆಂಗಳೂರು**

ನಟ ಟಿ.ಎನ್. ಬಾಲಕೃಷ್ಣ ಅವರ ಅಭಿಮಾನ್ ಸ್ಟುಡಿಯೋಗೆ ಮಂಜೂರು ಮಾಡಿದ್ದ. ನಟ ವಿಷ್ಣುವರ್ಧನ್ ಅವರ ಸಮಾಧಿ ತೆರವಿನಿಂದ ವಿವಾದಕ್ಕೆ ಗುರಿಯಾಗಿದ್ದ ಕೆಂಗೇರಿಯ ಅರಣ್ಯ ಭೂಮಿಯನ್ನು ವಾಪಸ್ ಪಡೆಯುವಂತೆ ಅರಣ್ಯ ಇಲಾಖೆಯು ಬೆಂಗಳೂರು ನಗರ ಜಿಲ್ಲಾಧಿಕಾರಿಗೆ ಪತ್ರ ಬರೆದಿದೆ.

ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ ಮೈಲಸಂದ್ರ, ಗ್ರಾಮದ ಸರ್ವೆ ನಂ. 26ರಲ್ಲಿ ಹಂಚಿಕೆ ಮಾಡಲಾಗಿದ್ದ ಅರಣ್ಯ ಪ್ರದೇಶದ 20 ಎಕರೆ ಭೂಮಿಯ ಮಂಜೂರಾತಿ ಆದೇಶ ರದ್ದುಪಡಿಸಬೇಕು. ಇದನ್ನು ಅರಣ್ಯ ಇಲಾಖೆಗೆ ಇಂಡೀಕರಣ ಮಾಡಿಕೊಡಬೇಕು' ಎಂದು ನಗರ ಉಪ ಅರಣ್ಯ ಸಂರಕ್ಷಣಾಧಿಕಾರಿ ಎನ್.ರವೀಂದ್ರಕುಮಾರ್ ಅವರು ಬೆಂಗಳೂರು ನಗರ ಜಿಲ್ಲಾಧಿಕಾರಿಗೆ ಪತ್ರ ಬರೆದಿದ್ದಾರೆ. ಅರಣ್ಯ ಭೂಮಿಯ ವಿಚಾರದಲ್ಲಿ ಸುಪ್ರೀಂ ಕೋರ್ಟ್ 2025ರ ಮೇ 15ರಂದು ನೀಡಿರುವ ಆದೇಶದ ಮೇರೆಗೆ ನಿಗದಿತ ಉದ್ದೇಶ ಬಿಟ್ಟು ಮಾರಾಟ ಮಾಡಿರುವ ಭೂಮಿಯನ್ನು ಹಿಂದಕ್ಕೆ ಪಡೆಯಬೇಕು. 1995ರ ಟಿ.ಎನ್.ಗೋದವರ್ಮನ್ ತಿರುಮಲಪಾಡ್ ಕೇಂದ್ರ ಸರ್ಕಾರ, ಇತರರ ನಡುವಿನ ವ್ಯಾಜ್ಯ ಪ್ರಕರಣದ ತೀರ್ಪಿನ ಆದೇಶವನ್ನು ಆಧರಿಸಿ ಮಂಜೂರಾತಿ ರದ್ದು ಮಾಡಿ ಭೂಮಿಯನ್ನು ಅರಣ್ಯ ಇಲಾಖೆಗೆ ಮರಳಿಸಬೇಕು ಎಂದು ಕೋರಿದ್ದಾರೆ.

> **ಡಿಸಿಎಫ್ ಪತ್ರದಲ್ಲಿ ಏನಿದೆ**
> **ಮೈಲಸಂದ್ರ ಗ್ರಾಮದ 2 ಸರ್ವೆ ನಂ. 22ರಲ್ಲಿ 78 ಎಕರೆ 18ಗುಂಟೆ, ಸರ್ವೆ ನಂ. 26ರಲ್ಲಿ 62 ಎಕರೆ 20 ಗುಂಟೆ ಪ್ರದೇಶವನ್ನು ತುರಹಳ್ಳಿ ಕಾಯ್ದಿಟ್ಟ ಮೀಸಲು ಅರಣ್ಯ ಪ್ರದೇಶವೆಂದು ಘೋಷಣೆ ಮಾಡಲಾಗಿದೆ. ಒಮ್ಮೆ ಒಂದು ಪ್ರದೇಶವನ್ನು ಅರಣ್ಯ ಎಂದು ಅಧಿಸೂಚನೆ ಹೊರಡಿಸಿದ ಬಳಿಕ. ಅದನ್ನು ಅರಣ್ಯವಲ್ಲ ಎಂದು ಯಾವುದೇ ಅಧಿಸೂಚನೆ ಹೊರಡಿಸದೇ ಇದ್ದರೆ, ಅದನ್ನು ಅರಣ್ಯ ಪ್ರದೇಶ ಎಂದು ಪರಿಭಾವಿಸಲಾಗುತ್ತದೆ.**

1979ರ ಮಾರ್ಚ್ 21ರಂದು ಸರ್ಕಾರಿ ಆದೇಶದಲ್ಲಿ ಅಭಿಮಾನ್ ಸ್ಟುಡಿಯೋ ನಿರ್ಮಾಣ ಹೊರತಾಗಿ ಬೇರೆ ಯಾವುದೇ ಉದ್ದೇಶಕ್ಕೆ ಬಳಸಬಾರದು ಎಂದು ಷರತ್ತು ವಿಧಿಸಿ ಅನುಮತಿ ನೀಡಲಾಗಿದೆ. ಸರ್ಕಾರದ ಪೂರ್ವಾನುಮತಿ ಇಲ್ಲದೇ ಮಾರಾಟ, ಪರಭಾರೆ ಮಾಡಬಾರದು. ಹಾಗೇನಾದರೂ ಮಾಡಿದರೆ ಮಂಜೂರಾತಿ ರದ್ದುಪಡಿಸಿ ಭೂಮಿಯನ್ನು ಹಿಂಪಡೆಯಲಾಗುವುದು ಎಂದು ಅಂದಿನ ಆದೇಶದಲ್ಲೂ ಉಲ್ಲೇಖಿಸಲಾಗಿದೆ.

ನಟ ಟಿ.ಎನ್. ಬಾಲಕೃಷ್ಣ ಅವರು ಭೂ ಪರಿವರ್ತನಾ ಶುಲ್ಕ ವಿನಾಯಿತಿ ನೀಡುವಂತೆ, ಅದೇ ವರ್ಷ ಪತ್ರ ಬರೆದಿದ್ದರು. ಐದು ವರ್ಷದೊಳಗೆ ಅಭಿಮಾನ್ ಸ್ಟುಡಿಯೋ ನಿರ್ಮಾಣ ಪೂರ್ಣಗೊಳಿಸುವಂತೆ, ಈ ಉದ್ದೇಶ ಬಿಟ್ಟು ಬೇರೆ ಕಾರಣಗಳಿಗಾಗಿ ಬಳಸಿದರೆ ಷರತ್ತಿನ ಉಲ್ಲಂಘನೆಯಾಗಲಿದ್ದು, ಮಂಜೂರಾತಿ ರದ್ದಾಗಿ ಭೂಮಿ ವಾಪಸ್ ಪಡೆದಾಗ ಯಾವುದೇ ಪರಿಹಾರವನ್ನೂ ನೀಡಲಾಗುವುದಿಲ್ಲ ಎಂದೂ ತಿಳಿಸಲಾಗಿದೆ.

## ಬೆಂಗಳೂರಿನಲ್ಲಿ ಆಗಸ್ಟ್ 31, ಸೆ.14 ರಂದು ಮದ್ಯ ಮಾರಾಟ ನಿಷೇಧ

• **ಉದಯವಾಹಿನಿ, ಬೆಂಗಳೂರು**

ರಾಜಧಾನಿ ಬೆಂಗಳೂರಿನಲ್ಲಿ ಸಾಮೂಹಿಕ ಗಣೇಶ ವಿಸರ್ಜನೆ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಆಗಸ್ಟ್ 31 ಹಾಗೂ ಸೆಪ್ಟಂಬರ್ 14ರಂದು ನಗರದ ಹಲವು ಪ್ರದೇಶಗಳಲ್ಲಿ ಮದ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಲಾಗಿದೆ.

ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಸಾಮೂಹಿಕ ಗಣೇಶ ಮೂರ್ತಿಗಳು ವಿಸರ್ಜನೆ ನಡೆಯುವುದರಿಂದ ಕಿಡಿಗೇಡಿಗಳು ಮದ್ಯ ಸೇವಿಸಿ ಗಲಾಟೆ ಮಾಡುವ ಸಾಧ್ಯತೆ ಇರುವುದರಿಂದ ಬೆಂಗಳೂರಿನ ಹಲವು ಪ್ರದೇಶಗಳಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ. ಗಣೇಶ ಮೂರ್ತಿಗಳ ವಿಸರ್ಜನೆ ಹಿನ್ನೆಲೆಯಲ್ಲಿ ನಗರದ ಕೆಲವು ಠಾಣೆಗಳ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಆದೇಶ ಹೊರಡಿಸಿದ್ದಾರೆ.

ಆಗಸ್ಟ್ 31ರ ಬೆಳಗ್ಗೆ 6 ಗಂಟೆಯಿಂದ ಸೆಪ್ಟೆಂಬರ್


ಉದಯವಾಹಿನಿ ಚಿತ್ರ

1ರ ಬೆಳಗ್ಗೆ 6 ಗಂಟೆವರೆಗೆ ಪೂರ್ವ ವಿಭಾಗದಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ.

ಕೆ.ಜಿ. ಹಳ್ಳಿ, ಡಿ.ಜೆ. ಹಳ್ಳಿ, ಗೋವಿಂದಪುರ, ಬಾಣಸವಾಡಿ, ರಾಮಮೂರ್ತಿನಗರ, ಹೆಣ್ಣೂರು, ಕಮರ್ಷಿಯಲ್ ಸ್ಟ್ರೀಟ್, ಶಿವಾಜಿನಗರ, ಭಾರತಿನಗರ, ಪುಲಿಕೇಶಿನಗರ, ಹಲಸೂರು, ಯಶವಂತಪುರ ಸಂಜಯನಗರ, ಜಾಲಹಳ್ಳಿ, ಆರ್‌ಎಂಸಿ ಯಾರ್ಡ್ ಜೆ.ಸಿ. ನಗರ, ಆರ್.ಟಿ. ನಗರ, ಹೆಬ್ಬಾಳ, ಸದಾಶಿವನಗರ, ತಲಘಟ್ಟಪುರ, ಸುಬ್ರಹ್ಮಣ್ಯಪುರ, ಕೆಂಗೇರಿ, ಜ್ಞಾನಭಾರತಿ, ಕುಂಬಳಗೋಡಿನಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ. ಇನ್ನು ಸೆಪ್ಟೆಂಬರ್ 14ರ ಬೆಳಗ್ಗೆ 6ಗಂಟೆಯಿಂದ

> **ಕಾನೂನು ಸುವ್ಯವಸ್ಥೆಗೆ ತೊಂದರೆಯಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಬೆಂಗಳೂರಿನ ಕೆಲವು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ CL-4, CL-6 ಪರವಾನಿಗೆ ಹೊರತುಪಡಿಸಿ ಉಳಿದೆಲ್ಲ ಮದ್ಯದಂಗಡಿಗಳನ್ನು ಬಂದ್ ಮಾಡಲಾಗುವುದು, ರೆಸ್ಟೋರೆಂಟ್, ಹೋಟೆಲ್‌ಗಳಲ್ಲಿ ಆಹಾರ ಸೇವೆಗಳಿಗೆ ಮಾತ್ರ ವಿನಾಯಿತಿ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.**

ಸೆ.15ರ ಬೆಳಗ್ಗೆ 6 ಗಂಟೆವರೆಗೆ ಕಾಮಾಕ್ಷಿಪಾಳ್ಯ ಹಾಗೂ ವಿಜಯನಗರದಲ್ಲಿ ಮದ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಲಾಗಿದೆ.

## ನಕಲಿ ಸುದ್ದಿ ಹರಡಿದ ಆರೋಪ: ಜೆಡಿಎಸ್ ಎಕ್ಸ್ ಖಾತೆ ವಿರುದ್ಧ ಎಫ್‌ಐಆರ್

• **ಉದಯವಾಹಿನಿ, ಬೆಂಗಳೂರು**

ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರನ್ನು ಪಕ್ಷದಿಂದ ಹೊರಹಾಕಲಾಗಿದೆ ಎಂದು ಸುಳ್ಳು ಸುದ್ದಿ ಹರಡಲು ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ನಕಲಿ ಲೆಟರ್‌ಹೆಡ್ ಬಳಸಿದ್ದಕ್ಕಾಗಿ ಜೆಡಿಎಸ್‌ನ ಅಧಿಕೃತ ಎಕ್ಸ್ ಸಾಮಾಜಿಕ ಮಾಧ್ಯಮ ಹ್ಯಾಂಡಲ್ ವಿರುದ್ಧ ಹೈಗ್ರೌಂಡ್ಸ್ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಆಗಸ್ಟ್ 26 ರಂದು ಎಕ್ಸ್‌ನಲ್ಲಿ ಹಂಚಿಕೊಂಡ ಪೋಸ್ಟ್‌ನಲ್ಲಿ ಹೀಗೆ ಹೇಳಲಾಗಿತ್ತು. ಶಿಸ್ತು ಕ್ರಿಯಾ ಸಮಿತಿಯ ಶಿಫಾರಸಿನ ಮೇರೆಗೆ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿಕೆ ಶಿವಕುಮಾರ್ ಅವರನ್ನು ಪಕ್ಷ ವಿರೋಧಿ ಚಟುವಟಿಕೆಗಳಿಗಾಗಿ ಕಾಂಗ್ರೆಸ್ ಪಕ್ಷದಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹೊರಹಾಕಲಾಗಿದೆ, ಆಗಸ್ಟ್ 25 ರಂದು ಎಐಸಿಸಿ ಅನುಮೋದನೆಗೆ ಒಳಪಟ್ಟಿರುತ್ತದೆ ಎಂದು ಜೆಡಿಎಸ್ ತನ್ನ ಟ್ವಿಟ್ಟರ್ ನಲ್ಲಿ ಪೋಸ್ಟ್ ಮಾಡಿತ್ತು.

ಪೋಸ್ಟ್ ನಂತರ, ಕಾಂಗ್ರೆಸ್ ವಕ್ತಾರ ಸಿ.ಎಂ. ಧನಂಜಯ ಅವರು ಹೈಗ್ರೌಂಡ್ಸ್ ಪೊಲೀಸರಿಗೆ ದೂರು ಸಲ್ಲಿಸಿದರು, ಜೆಡಿಎಸ್ ಸಾಮಾಜಿಕ ಮಾಧ್ಯಮದಲ್ಲಿ ತಪ್ಪು ಮಾಹಿತಿಯನ್ನು ಹರಡಲು ನಕಲಿ ಎಐಸಿಸಿ ಲೆಟರ್‌ಹೆಡ್ ಬಳಸಿದೆ ಎಂದು ಹೇಳಿದ್ದಾರೆ.

ಈ ಸಂಬಂಧ ಪ್ರಕರಣ ದಾಖಲಿಸಲಾಗಿದ್ದು ಪೋಸ್ಟ್ ಅನ್ನು ಪರಿಶೀಲಿಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೋಸ್ಟ್‌ನಲ್ಲಿ ಯಾವುದೇ ಸಹಿ ಇರಲಿಲ್ಲ ಆದರೆ ನಕಲಿ ಎಐಸಿಸಿ


ಉದಯವಾಹಿನಿ ಚಿತ್ರ

ಲೆಟರ್‌ಹೆಡ್ ಬಳಸಲಾಗಿದೆ ಮತ್ತು ಕಾಂಗ್ರೆಸ್ ಪದವನ್ನು ತಪ್ಪಾಗಿ ಬರೆಯಲಾಗಿತ್ತು.

# 1370 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ: ವಿ ಸೋಮಣ್ಣ

**ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣ ಅಭಿವೃದ್ಧಿಗೆ ಮುಂದಾದ ರೈಲ್ವೆ ಇಲಾಖೆ**

• **ಉದಯವಾಹಿನಿ, ಬೆಂಗಳೂರು**

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣವನ್ನು 1,370 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ರೈಲ್ವೆ ಇಲಾಖೆಯು ಮುಂದಾಗಿದೆ. ಈ ಬಗ್ಗೆ ಕೇಂದ್ರ ರೈಲ್ವೆ ಸಹಾಯಕ ಸಚಿವ ವಿ ಸೋಮಣ್ಣ ಮಾಹಿತಿ ನೀಡಿದ್ದಾರೆ.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣವನ್ನು 1,370 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು. ಜತೆಗೆ, ಪ್ಲಾಟ್‌ಫಾರಂಗಳ ಸಂಖ್ಯೆಯನ್ನೂ ಹೆಚ್ಚಿಸಲಾಗುತ್ತದೆ.

ಕಂಟೋನ್ಮೆಂಟ್ ರೈಲು ನಿಲ್ದಾಣವನ್ನು 485 ಕೋಟಿ ರೂ. ಹಾಗೂ ಯಶವಂತಪುರ ರೈಲು ನಿಲ್ದಾಣವನ್ನು 485 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸುತ್ತೇವೆ ಎಂದು ಸಚಿವರು ಮಾಹಿತಿ ನೀಡಿದರು.

ಬೆಂಗಳೂರು ನಗರದ ಕುಮಾರಕೃಪಾ ಅತಿಥಿ ಗೃಹದಲ್ಲಿ ತೆಂಗು ಬೆಳೆಯ ರೋಗ ನಿಯಂತ್ರಣದ ಕುರಿತು ಕೃಷಿ ವಿಜ್ಞಾನ ಕೇಂದ್ರದ ಅಧಿಕಾರಿಗಳು ಹಾಗೂ ಐಸಿಎಆರ್‌ನ ಕೃಷಿ ಮತ್ತು


ಉದಯವಾಹಿನಿ ಚಿತ್ರ

ತೋಟಗಾರಿಕಾ ವಿಜ್ಞಾನಿಗಳೊಂದಿಗೆ ಸಭೆ ನಡೆಸಿ, ಕೀಟ ನಿವಾರಣೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದರು.

ತೆಂಗು ಅಭಿವೃದ್ಧಿ ಮಂಡಳಿಯು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ತೆಂಗು ಬೆಳೆಗೆ ತಗಲುವ ಕೀಟಗಳ ನಿವಾರಣೆ ಮತ್ತು ಮಣ್ಣಿನ ಆರೋಗ್ಯ ಸುಧಾರಣೆಗೆ ವೈಜ್ಞಾನಿಕ ನಿರ್ವಹಣಾ ಪದ್ಧತಿಗಳ ಕುರಿತು ಗ್ರಾಮ ಮತ್ತು ಹೋಬಳಿ ಮಟ್ಟದಲ್ಲಿ ಜಾಗೃತಿ ಸಭೆಗಳನ್ನು ಆಯೋಜಿಸಬೇಕು ಎಂದು ಸೂಚಿಸಿದರು.

> **ಬೆಂಗಳೂರಿನ ರೈಲ್ವೆ ದಟ್ಟಣೆ ನಿವಾರಣೆ ಮತ್ತು ಹೊಸ ರೈಲುಗಳ ಸಂಚಾರ ಆರಂಭಿಸುವುದಕ್ಕೆ ಸಹಕಾರಿಯಾಗುವ ನಿಟ್ಟನಲ್ಲಿ ದೇವನಹಳ್ಳಿ ಬಳಿ 500 ಕೋಟಿ ರೂ. ವೆಚ್ಚದಲ್ಲಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್ ಸ್ಥಾಪಿಸಲಾಗುತ್ತಿದೆ. ಈಗಾಗಲೇ ಜಾಗ ಗುರುತಿಸಿ ಸರ್ವೇ ಮಾಡಲಾಗಿದೆ. ಮೇಕ್ ಇನ್ ಇಂಡಿಯಾ ಪರಿಕಲ್ಪನೆಯಡಿ ವಿದೇಶಿ ಆಮದು ಕಡಿಮೆ ಮಾಡುವ ನಿಟ್ಟನಲ್ಲಿ ಯಲಹಂಕದ ರೈಲ್ವೆ ಚಾಸಿ ಕಾರ್ಖಾನೆಯ ಉತ್ಪಾದನಾ ಸಾಮರ್ಥ್ಯವನ್ನು 90 ಸಾವಿರದಿಂದ 1.12 ಲಕ್ಷಕ್ಕೆ ಹೆಚ್ಚಿಸುವುದಕ್ಕೆ ಕ್ರಮ ವಹಿಸಲಾಗಿದೆ, ಎಂದು ಸೋಮಣ್ಣ ತಿಳಿಸಿದರು.**

**ದೇವನಹಳ್ಳಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್**

> **ಸೆಂಟರ್‌ಆಫ್ ಎಕ್ಸಲೆನ್ಸ್ ಕೇಂದ್ರ ಸ್ಥಾಪನೆ**
> **ತುಮಕೂರು ಜಿಲ್ಲೆಯಲ್ಲಿ ತೆಂಗು ಬೆಳೆಯ ಸಂಶೋಧನೆ, ಕೀಟ ನಿವಾರಣೆ ಮತ್ತು ಮೌಲ್ಯವರ್ಧನೆಗಾಗಿ ಸೆಂಟರ್ ಆಫ್ ಎಕ್ಸಲೆನ್ಸ್ ಕೇಂದ್ರವನ್ನು ಸ್ಥಾಪಿಸುವ ಕುರಿತು ಕೇಂದ್ರ ಕೃಷಿ ಸಚಿವರ ಗಮನಕ್ಕೆ ತರಲಾಗುವುದು ಎಂದು ರೈಲ್ವೆ ಖಾತೆ ಸಧಿಹಾಧಿಯಕ ಸಚಿವ ವಿ.ಸೋಮಣ್ಣ ತಿಳಿಸಿದರು.**

# ಧರ್ಮಸ್ಥಳ ಕ್ಷೇತ್ರದ ಕುರಿತು ಸುತ್ತೂರು ಶ್ರೀ ಬಹಿರಂಗ ಪತ್ರ

## ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವಿರೇಂದ್ರ ಹೆಗ್ಗಡೆ ಅವರ ಕಾರ್ಯ ವೈಖರಿಗೆ ಶ್ಲಾಘನೆ

• ಉದಯವಾಹಿನಿ, ಮೈಸೂರು

ಸುತ್ತೂರು ಮಠದ ಶಿವರಾತ್ರಿ, ದೇಶಿಕೇಂದ್ರ ಸ್ವಾಮೀಜಿ ಅವರು ಧರ್ಮಸ್ಥಳದ ಬಗ್ಗೆ ಬಹಿರಂಗ ಪತ್ರ ಬರೆದಿದ್ದು, ಎಲ್ಲಾ ಕಾರ್ಮೋಡಗಳು ಕರಗಿ ಶಾಂತಿ – ನೆಮ್ಮದಿ ನೆಲೆಸುವಂತಾಗಲಿ ಎಂದು ಹಾರೈಸಿದ್ದಾರೆ. ಅಲ್ಲದೇ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಅವರ ಕಾರ್ಯ ವೈಖರಿಯನ್ನು ಶ್ರೀಗಳು ಶ್ಲಾಘಿಸಿದ್ದಾರೆ.

ನಾಡಿನ ಪ್ರಸಿದ್ಧ ಧಾರ್ಮಿಕ ಕೇಂದ್ರಗಳಲ್ಲಿ ಧರ್ಮಸ್ಥಳವೂ ಒಂದಾಗಿದೆ. ಕ್ಷೇತ್ರವನ್ನು ವಿವಾದಿತ ಕೇಂದ್ರವನ್ನಾಗಿಸಲು ಕೆಲವರು ಯತ್ನಿಸುತಿರುವುದು ವಿಷಾದನೀಯ. ನಂಬಿಕೆ ಎಂಬುದು ಬಹು ಸೂಕ್ಷ್ಮವಾದ ಸಂಗತಿ. ಅದು ಕನ್ನಡಿ ಇದ್ದಂತೆ. ಒಮ್ಮೆ ಅದು ಒಡೆದು ಹೋದರೆ ಮತ್ತೆ ಸರಿಪಡಿಸಲಾಗುವುದಿಲ್ಲ. ಒಡೆದ ಕನ್ನಡಿಯ ಪ್ರತಿ ಚೂರಿನಲ್ಲೂ ಪ್ರತ್ಯೇಕ ಬಿಂಬಗಳು ಕಾಣುತಿರುತ್ತವೆ. ಹೀಗೆ ಕಂಡ ಕಂಡ ಬಿಂಬಗಳನ್ನೆಲ್ಲ ನಂಬಿ ವಿಭಿನ್ನವಾಗಿ ಅರ್ಥೈಸುತ್ತಾ ಹೋಗುವುದು ಸೂಕ್ತವಾದುದಲ್ಲ. ಒಂದು ಧಾರ್ಮಿಕ ಒಂದು ವಿವಾದವನ್ನು ಮುನ್ನೆಲೆಗೆ ತರುತ್ತಿರುವ ಪ್ರಯತ್ನಗಳು ಸೂಕ್ತವಾದುವಲ್ಲ, ಎಂದು ಶ್ರೀಗಳು ಹೇಳಿದ್ದಾರೆ.


ಉದಯವಾಹಿನಿ ಚಿತ್ರ

**ಧರ್ಮಾಧಿಕಾರಿ ಡಾ. ವಿರೇಂದ್ರ ಹೆಗ್ಗಡೆ ಅವರ ಕಾರ್ಯ**

**ವಿಷಾದನೀಯ ಎಂದು ಸುತ್ತೂರು ಶ್ರೀ:** ನಾಡಿನ ಪ್ರಸಿದ್ದ ಶ್ರದ್ಧಾ ಮತ್ತು ಭಕ್ತಿಯ ಧಾರ್ಮಿಕ ಕೇಂದ್ರವಾದ ಧರ್ಮಸ್ಥಳ ಕ್ಷೇತ್ರವನ್ನು ವಿವಾದಿತ ಕೇಂದ್ರವನ್ನಾಗಿಸಲು ಕೆಲವರು ಯತ್ನಿಸುತ್ತಿರುವುದು ವಿಷಾದನೀಯ. ಪವಿತ್ರ ಕ್ಷೇತ್ರದ ಪರಿಸರದಲ್ಲಿ ನಡೆದ ಕೆಲವು ಅಸಹಜ ಸಾವಿನ ಪ್ರಕರಣಗಳು ಗಂಭೀರವಾದುವೇ ಆಗಿರಬಹುದು. ಆದರೆ, ಇಂತಹ ಪ್ರಕರಣಗಳನ್ನು ಶ್ರೀಕ್ಷೇತ್ರದೊಂದಿಗೆ ತಳುಕು ಹಾಕಲು ಪ್ರಯತ್ನಿಸುವುದು ದುಡುಕಿನ ನಿರ್ಧಾರವಾಗುತ್ತದೆ. ಸತ್ಯ ಸದಾ ಮೌನಿ. ಸುಳ್ಳಿಗೆ ಆರ್ಭಟಿ ಜಾಸ್ತಿ. ಇದರಿಂದ ಶ್ರದ್ಧಾವಂತ ಮನಸ್ಸುಗಳಿಗೆ ಧಕ್ಕೆಯುಂಟಾಗಬಾರದು ಉಸ್ತುವಾರಿ ನೋಡಿ ಕೊಳ್ಳುತ್ತಿರುವವರು ಧರ್ಮದ ಜೈನ ಸಮುದಾಯದವರು. ಮೂರು ವಿಭಿನ್ನ ನಂಬಿಕೆಗಳು ಒಗ್ಗೂಡಿರುವ ಶ್ರೀಕ್ಷೇತ್ರದ ಮೂಲ ದೈವಕ್ಕೆ ಹೆಗ್ಗಡೆ ಪರಂಪರೆ ಕುಟುಂಬದ ಶ್ರದ್ಧಾ–ಭಕ್ತಿಗಳಿಂದ ನಡೆದುಕೊಳ್ಳುತ್ತಿರುವುದು ಹಾಗೂ ಯಾವುದೇಚ್ಯುತಿ ಬಾರದಂತೆ ನಿರ್ವಹಿಸುತ್ತಿರುವುದು ಹೆಮ್ಮೆ ಪಡುವ ನೀಚಾರ. ಇದು ಭಾವೈಕ್ಯತೆಗೆ ನಿಜವಾದ ಕನ್ನಡಿ, ಎಂದಿದ್ದಾರೆ.

ಧರ್ಮಸ್ಥಳದ ಧರ್ಮಾಧಿಕಾರಿ ಡಿ.ವೀರೇಂದ್ರ ಧರ್ಮಸ್ಥಳ ಹೆಗ್ಗಡೆದುವರು ಗ್ರಾಮೀಣಾಭಿವೃದ್ಧಿ ಯೋಜನೆ ಮೂಲಕ ಗ್ರಾಮೀಣ ಜನರ ಬದುಕನ್ನು ಸಮೃದ್ಧಗೊಳಿಸಿದ್ದಾರೆ. ಗ್ರಾಮಗಳಿಗೆ ಕುಡಿಯುವ ನೀರು ಮತ್ತು ಮೂಲಸೌಕರ್ಯ. ದೇವಾಲಯಗಳ ಜೀರ್ಣೋದ್ಧಾರ, ಮಂಜೂರಾ ವಸ್ತುಸಂಗ್ರಹಾಲಯದ ಪ್ರಾಚಿನ ವಸ್ತುಗಳು, ಸ್ಮರಣಿಕೆಗಳು ಹಸ್ತಪ್ರತಿಗಳ ಸಂಗ್ರಹ ಮತ್ತು ಪ್ರದರ್ಶನ ವ್ಯವಸ್ಥೆ ಮಾಡಿದ್ದಾರೆ. ಸ್ತ್ರೀಶಕ್ತಿ ಸಂಘಗಳ ಮೂಲಕ ಗ್ರಾಮೀಣ ಮಹಿಳೆದುರ ಆರ್ಥಿಕ ಭದ್ರತೆಯನ್ನು ಹೆಚ್ಚಿಸಿದ್ದಾರೆ. 1972ರಿಂದಲೂ ಸಾಮೂಹಿಕ ವಿವಾಹ ನಡೆಸಿರುವುದು ಅನುಕರಣೀದು,ಎಂದು ಶ್ಲಾಘಿಸಿದ್ದಾರೆ.

### ಶೀಘ್ರವಾಗಿ ಕೂಲಂಕುಷವಾಗಿ ತನಿಖೆ ನಡೆಸಿ ಸತ್ಯ ಪತ್ತೆ ಮಾಡಿ

**ಇಂಥ ಕೃತ್ಯಗಳನ್ನು ಸಮಗ್ರವಾಗಿ ತನಿಖೆ ಮಾಡಿ ಸಕ್ಕವನ್ನು ಅನಾವರಣ ಮಾಡಬೇಕಾದುದು ಸರಕಾರದ ಜವಾಬ್ದಾರಿಯಾಗಿದ್ದು, ಅದಕ್ಕಾಗಿ ವಿಶೇಷ ತನಿಖಾ ತಂಡವನ್ನು ರಚಿಸಿದೆ. ಶ್ರೀಕ್ಷೇತ್ರದ ಬಗ್ಗೆ ಅಪಾರ ಭಕ್ತಿ ಮತ್ತು ಶ್ರದ್ದೆಯನ್ನು ಹೊಂದಿದ್ದ ಹೊಂದಿರುವ ಸದಕ್ಷರು ಶಾಂತಿ ಮತ್ತು ಸಂಯಮದಿಂದ ಇರಬೇಕು ಎಂಬುದು ಅಗತ್ಯ. ಹಾಗೆಯೇ ನ್ಯಾಯಕ್ಕಾಗಿ ಆಗ್ರಹಿಸುವವರು ಕೂಡ ಯಾವುದೇ ಪೂರ್ವಗ್ರಹಗಳಿಗೆ ಒಳಗಾಗದೆ ತನಿಖೆ ಪೂರ್ಣವಾಗುವವರೆಗೆ ಅಸಹನೆಗೊಳ್ಳದೆ ತಾಳ್ಮೆಯಿಂದ ಇರಬೇಕಾದ್ದು ಅಗತ್ಯ ಸರಕಾರ ಆದಷ್ಟು ಶೀಘ್ರವಾಗಿ ಕೂಲಂಕುಷವಾಗಿ ತನಿಖೆ ನಡೆಸಿ ಸತ್ಯವನ್ನು ಪತ್ತೆ ಹಚ್ಚಬೇಕು, ಎಂದು ಸಲಹೆ ನೀಡಿದ್ದಾರೆ.**

# ರಾಮನಗರದಲ್ಲಿ ಹೆಚ್ಚಿದ ದ್ವೇಷ ರಾಜಕಾರಣ

• ಉದಯವಾಹಿನಿ, ಹಾರೋಹಳ್ಳಿ

ಇತ್ತೀಚೆಗೆ ರಾಮನಗರ ಕ್ಷೇತ್ರದಲ್ಲಿ ದ್ವೇಷ ರಾಜಕಾರಣ ಹೆಚ್ಚಾಗಿದ್ದು, ಅದನ್ನು ಎಂದಿಗೂ ಸಹಿಸುವುದಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು. ಹಾರೋಹಳ್ಳಿಯ ಅಂಚಿಬಾರೆಯ ಕಲ್ಯಾಣ ಮಂಟಪದಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಜೆಡಿಎಸ್ ಶಾಸಕರಿದ್ದಾಗ ಯಾವುದೇ ದ್ವೇಷ ರಾಜ ಕಾರಣ ಮಾಡುತ್ತಿರಲಿಲ್ಲ. ಇತ್ತೀಚೆಗೆ ಹೆಚ್ಚಾಗಿದೆ ಎಂದರು.

ಸರಕಾರಿ ಇಲಾಖೆಯಲ್ಲಿ ಕಾರ್ಯಕರ್ತರ ಮೇಲೆ ದೌರ್ಜನ್ಯಗಳು ನಡೆಯುತ್ತಿವೆ. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ನಮ್ಮ ಕಾರ್ಯಕರ್ತರ ಧ್ವನಿ ಅಡಗಿಸುವ ಪ್ರಯತ್ನ ನಡೆಯುತ್ತಿವೆ. ಮುಂದೆ ಕ್ಷೇತ್ರದ ಜನತೆಯೇ ಇದಕ್ಕೆ ಉತ್ತರಿಸುತ್ತಾರೆ ಎಂದು ಹೇಳಿದರು.

ವಿಧಾನಸಭಾ ಚುನಾವಣೆಯಲ್ಲಿ ಸಣ್ಣ ಪುಟ್ಟ ಲೋಪಗಳೊಂದಿಗೆ ಚುನಾವಣೆಗೆ ನಿಲ್ಲಲಾಯಿತು. ಆದರೆ, ಒಳಸಂಚು ರೂಪಿಸಿ


ಉದಯವಾಹಿನಿ ಚಿತ್ರ

**ನಿಖಿಲ್ ಕುಮಾರಸ್ವಾಮಿ ಹೇಳಿಕೆ**

ಚುನಾವಣೆಯಲ್ಲಿ ಸೋಲಿಸಿದರು ಎಂದು ಅಳಲು ತೋಡಿಕೊಂಡರು. ಇಂದು ಕಾರ್ಯಕರ್ತರ ಬಳಿ ಮುಕ್ತವಾಗಿ ಮಾತನಾಡಬೇಕು. ಕಾರ್ಯಕರ್ತರ ಭಾವನೆಗಳಿಗೆ ಯಾವುದೇ ರೀತಿ ಚ್ಯುತಿ ಬಾರದಂತೆ ನೋಡಿ ಕೊಳ್ಳಲಾಗುವುದು ಎಂದರು. ನನ್ನ ಮುಂದೆ ಬೆಟ್ಟದಷ್ಟು ಗುರಿ ಇದೆ. ಕಾರ್ಯಕರ್ತರೇ ಚುನಾವಣೆ ನಡೆಸಬೇಕು. ಹಾಗಾಗಿ ಈಗಿನಿಂದಲೇ ಸಂಘಟನೆಗೆ ಒತ್ತು ನೀಡಬೇಕು.

ರಾಜ್ಯ ಸುತ್ತುವ ಜವಾಬ್ದಾರಿ ಇರುವುದರಿಂದ ಸಾಮೂಹಿಕ ಜವಾಬ್ದಾರಿ ಅವಶ್ಯಕತೆ ಇದೆ. 2028ಕ್ಕೆ ಸಂಮಿಶ್ರ ಸರ್ಕಾರ ಅಧಿಕಾರಕ್ಕೆ ಬರಲಿದೆ' ಎಂದರು. ಶಿವಲಿಂಗಪ್ಪ, ಮೇಡಮಾರನಹಳ್ಳಿ ಕುಮಾರ್, ಕೆಂಪಣ್ಣ, ಜೆಸಿಬಿ ಕರಿಯಪ್ಪ, ರಾಮು, ತಮ್ಮಯ್ಯಣ್ಣ, ರಂಗಪ್ಪ, ಸಿದ್ದರಾಜು, ಶಿವರುದ್ರ, ಶೇಷಾದ್ರಿ, ರಾಮು, ಪ್ರದೀಪ್ ಸೇರಿದಂತೆ ಇತರರು ಇದ್ದರು.

**ಹಾರೋಹಳ್ಳಿ ತಾಲ್ಲೂಕಿನೆಲ್ಲೆಡೆ ಪಕ್ಷ ಸಂಘಟನೆ ಅಗತ್ಯ. ಅದಕ್ಕಾಗಿ ಪಕ್ಷವನ್ನು ತಳಮಟ್ಟದಿಂದ ಸಂಘಟಿಸಲಾಗುತ್ತಿದೆ. ಕಳೆದ ಚುನಾವಣೆಯಲ್ಲಿ ಹಲವು ಪಿತೂರಿಗಳಿಂದ ಸೋತಿದ್ದೇವೆ. ಅದು ಮುಂದೆ ಪುನರಾವರ್ತನೆ ಆಗುವುದಿಲ್ಲ ಎಂದರು. ಕುಮಾರಣ್ಣ ಯಾವ ಜಮೀನನ್ನು ಬರೆಸಿಕೊಂಡಿಲ್ಲ. ಆದರೆ, ಈಗಿನ ಶಾಸಕರು ಎಕರೆಗಟ್ಟಲೆ ಜಮೀನನ್ನು ಹೊಡೆದಿದ್ದಾರೆ' ಎಂದು ಆರೋಪಿಸಿದರು.**

**ಜೆಡಿಎಸ್ ಜಿಲ್ಲಾಧ್ಯಕ್ಷ ಎ.ಮಂಜುನಾಥ್**

# ಜಿಲ್ಲೆಯ 3.70 ಲಕ್ಷ ಮನೆಗಳಿಗೆ ಸ್ಟಿಕ್ಕರ್: ರವೀಂದ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ಸೆ.22ರಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಿದ್ದತೆಗಳ ಬಗ್ಗೆ ಸಮೀಕ್ಷೆ ಕೈಗೊಳ್ಳಲು ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅಧಿಕಾರಿಗಳಿಗೆ ಸೂಚಿಸಿದರು. ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಸಮೀಕ್ಷಾ ಕಾರ್ಯದ ಮುಖ್ಯ ತರಬೇತುದಾರರು.

ಮೇಲ್ವಿಚಾರಕರು, ಗಣತಿದಾರರನ್ನು ನೇಮಿಸುವ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದರು. ಸಮೀಕ್ಷಾ ಕಾರ್ಯವು ರಾಜ್ಯದಾದ್ಯಂತ ಏಕಕಾಲಕ್ಕೆ ನಡೆಯಲಿದೆ. ಪ್ರತಿ 150 ಮನೆಗಳಿಗೆ ಒಬ್ಬ ಗಣಿತಿದಾರರನ್ನು ಹಾಗೂ ಪ್ರತಿ 20 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರನ್ನು ನೇಮಿಸಬೇಕಾಗಿದೆ ಎಂದರು. ಈ ಕಾರ್ಯಕ್ಕೆ ಶಿಕ್ಷಕರು ಹಾಗೂ ಇತರೆ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಪಟ್ಟಿ ಸಿದ್ಧಪಡಿಸಬೇಕು. ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ತರಬೇತಿ ನೀಡಲು ಸಿದ್ಧತೆ ಮಾಡಿಕೊಳ್ಳಬೇಕು. ಮುಖ್ಯ ತರಬೇತುದಾರರನ್ನು ಸರ್ಕಾರದ ನಿರ್ದೇಶನದಂತೆ ಆಯ್ಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಈ ಸ್ಟಿಕ್ಕರ್‌ಗಳನ್ನು ಯಾವುದೇ ಸಾರ್ವಜನಿಕರು ತೆಗೆದುಹಾಕುವುದು, ಮುಚ್ಚುವುದು ಅಥವಾ ನಾಶಪಡಿಸುವುದು ಮಾಡಬಾರದು. ಗಣತಿದಾರರು ಕೇಳುವ ಮಾಹಿತಿ ನೀಡುವ ಮೂಲಕ ಜಿಲ್ಲಾಡಳಿತದ ಈ ಕಾರ್ಯಕ್ಕೆ ಕೈಜೋಡಿಸಬೇಕು


ಉದಯವಾಹಿನಿ ಚಿತ್ರ

**ಬೆಸ್ಕಾಂ ಅಧಿಕಾರಿಗಳು ಹಾಗೂ ಸಿಬ್ಬಂದಿ ಜಿಲ್ಲೆಯ ಎಲ್ಲಾ ಕುಟುಂಬಗಳ ಮನೆಗಳಿಗೆ ಶೈಕ್ಷಣಿಕ ಸಮೀಕ್ಷಾ ಸ್ಟಿಕ್ಕರ್ ಅಂಟಿಸುತ್ತಿರುವ ಕಾರ್ಯದ ಬಗ್ಗೆ ಕಾಲೋಚಿತವಾಗಿ ಖಾತರಿಪಡಿಸಿಕೊಳ್ಳಬೇಕು. ಜಿಲ್ಲೆಯ ಸುಮಾರು 3,70.000 ಕುಟುಂಬಗಳ ಮನೆಗಳಿಗೆ ಸ್ಟಿಕ್ಕರ್ ಅಂಟಿಸುವ ಕಾರ್ಯವನ್ನು ಸೆ.5ರೊಳಗೆ ಬೆಸ್ಕಾಂನವರು ಪೂರ್ಣಗೊಳಿಸಬೇಕು ಎಂದರು.**

ಎಂದು ಕೋರಿದರು. ತಾಲ್ಲೂಕು ಮಟ್ಟದಲ್ಲಿ ನಗರ ವ್ಯಾಪ್ತಿಗೆ ತಹಶೀಲ್ದಾರರು ಹಾಗೂ ಗ್ರಾಮೀಣ ಭಾಗದಲ್ಲಿ ತಾ.ಪಂ ಕಾರ್ಯನಿರ್ವಾಹಣಾಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನೇಮಿಸಬೇಕು.

ಸಮೀಕ್ಷೆಯಿಂದ ಯಾವುದೇ ಕುಟುಂಬ, ವ್ಯಕ್ತಿ ಕೈಬಿಟ್ಟು ಹೋಗದಂತೆ ನಿಗಾವಹಿಸಬೇಕು. ಈ ನಿಟ್ಟಿನಲ್ಲಿ ಸಕಲ ಸಿದ್ಧತೆಗಳನ್ನು ಈಗಿನಿಂದಲೇ ಕೈಗೊಳ್ಳಬೇಕು ಎಂದರು.

# ಹಂದಿಜ್ವರ: 57 ಹಂದಿಗಳ ಸಂಹಾರ

• ಉದಯವಾಹಿನಿ, ಚಿಂತಾಮಣಿ

ತಾಲ್ಲೂಕಿನ ಹೆಬ್ಬರಿ ಗ್ರಾಮದ ಹಂದಿ ಫಾರ್ಮ್‌ನಲ್ಲಿ ಪಶುಸಂಗೋಪನಾ ಇಲಾಖೆ ವೈದ್ಯರು ಮತ್ತು ಸಿಬ್ಬಂದಿ ವಿದ್ಯುತ್ ಶಾಕ್ ನೀಡಿ 57 ಹಂದಿಗಳನ್ನು ಹತ್ಯೆ ಮಾಡಿ. ಮಣ್ಣಿನಲ್ಲಿ ಹೂತು ಹಾಕಿದರು. ಹೆಬ್ಬರಿ ಗ್ರಾಮದ ಹಂದಿ ಫಾರ್ಮ್‌ನಲ್ಲಿ ಕಳೆದ ಕೆಲವು ದಿನಗಳಿಂದ ಸುಮಾರು 100 ಹಂದಿಗಳು ಮೃತಪಟ್ಟಿವೆ. ಫಾರ್ಮ್‌ನಲ್ಲಿ ಆಗಸ್ಟ್ 15ರಿಂದ ಪ್ರತಿ ದಿನವೂ ಹಂದಿಗಳು ಸಾಯುತ್ತಿದ್ದವು.

ಪಶುವೈದ್ಯರು ಜ್ವರ ಬಂದಿರುವ ಹಂದಿಗಳ ಸ್ಯಾಂಪಲ್ ಪಡೆದು, ಮಧ್ಯಪ್ರದೇಶದ ಭೋಪಾಲ್‌ನಲ್ಲಿರುವ ಹಕ್ಕಿಜ್ವರ ತಪಾಸಣೆ ಪ್ರಯೋಗಾಲಯಕ್ಕೆ ರವಾನಿಸಿದ್ದರು. ಹಂದಿಗಳಿಂದ ಸಂಗ್ರಹಿಸಿದ ಮಾದರಿಯಲ್ಲಿ ಹಂದಿಜ್ವರದ ಸೋಂಕು ಇರುವುದು ಖಚಿತವಾಗಿದೆ. ಹೀಗಾಗಿ, ಹಂದಿ ಜ್ವರ ವ್ಯಾಪಿಸಿರುವ ಹಂದಿಗಳನ್ನು ಕೊಲ್ಲಲು ತೀರ್ಮಾನಿಸಲಾಯಿತು ಎಂದು ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ.ರಂಗಪ್ಪ ತಿಳಿಸಿದರು. ಹಂದಿಜ್ವರವು ಮನುಷ್ಯರ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಹಂದಿಜ್ವರ ಮನುಷ್ಯರಲ್ಲಿ ಹರಡಿರುವ ಯಾವುದೇ ಪ್ರಕರಣ ಈವರೆಗೆ ಕಂಡುಬಂದಿಲ್ಲ. ಯಾರೂ ಭಯಪಡುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

ಪಶುಸಂಗೋಪನಾ ಇಲಾಖೆಯ ವೈದ್ಯರು, ಸಿಬ್ಬಂದಿ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡು ಉಳಿದಿದ್ದ ಎಲ್ಲಾ ಹಂದಿಗಳನ್ನು ಕೊಂದು ಹಾಕಿದರು. ಫಾರ್ಮ್ ಸುತ್ತಮುತ್ತಲ ಪ್ರದೇಶದಲ್ಲಿ ಕ್ಲೋರಿನೇಷನ್ ಮಾಡಿ ಸ್ವಚ್ಛಗೊಳಿಸಿದರು.

ತಹಶೀಲ್ದಾರ್ ಸುದರ್ಶನ ಯಾದವ್, ತಾಲ್ಲೂಕು ಪಂ. ಕಾರ್ಯನಿರ್ವಹಣಾಧಿಕಾರಿ ಎಸ್.ಆನಂದ್, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ರಂಗಪ್ಪ ಕೆರೆ ಬಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಸಿಬ್ಬಂದಿ ನೆರವಿನಿಂದ ನೀರಿನಲ್ಲಿ ತೇಲುತ್ತಿದ್ದ ಹಂದಿಗಳ ಕಳೆಬರವನ್ನು ತೆಗೆದು ಮಣ್ಣಿನ ಗುಂಡಿಯಲ್ಲಿ ಹಾಕಿ ಮುಚ್ಚಿಸಿದರು. ಕ್ಲೋರಿನೇಷನ್ ಮಾಡಿ ನೀರನ್ನು ಶುದ್ಧಿಕರಿಸಲು ಕ್ರಮಕೈಗೊಳ್ಳಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಒಂದು ವಾರ ಕುರಿ, ಮೇಕೆ ಮತ್ತಿತರ ಪ್ರಾಣಿಗಳ ಮೈತೊಳೆಯಲು ನೀರಿನಲ್ಲಿ ಇಳಿಯಬಾರದು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.


ಉದಯವಾಹಿನಿ ಚಿತ್ರ

### ಸತ್ತ ಹಂದಿಗಳನ್ನು ಕೆರೆಗೆ ಎಸೆಯಲಾಗಿದೆ

**ಫಾರ್ಮ್‌ನಲ್ಲಿ ಕಳೆದ 15 ದಿನಗಳಿಂದ ಹಂದಿಜ್ವರದಿಂದ ಸತ್ತಿರುವ ಹಂದಿಗಳನ್ನು ಗ್ರಾಮದ ಸಮೀಪದ ಕೆರೆಯಲ್ಲಿ ಎಸೆಯಲಾಗಿದೆ. ಸತ್ತ ಹಂದಿಗಳು ಕೊಳೆತು ನಾರುತ್ತಿದ್ದು, ಸುತ್ತಮುತ್ತ ದುರ್ನಾತ ಬೀರುತ್ತಿದೆ. ಕೆಲವು ಹಂದಿಗಳು ಊದಿಕೊಂಡು ನೀರಿನಲ್ಲಿ ತೇಲುತ್ತಿದ್ದರೆ, ಕೆಲವು ಕೊಳೆತು ನಾರುತ್ತಿವೆ. ಕೆರೆಯ ಮೀನುಗಳು ಸಹ ಸತ್ತ ಹಂದಿಗಳನ್ನು ತಿಂದಿವೆ ಎಂದು ಗ್ರಾಮಸ್ಥರು ಆರೋಪಿಸಿದರು.**

# ಮುನಿಯಪ್ಪ ಸುಳ್ಳು ಹೇಳುವುದು ಬಿಡಲಿ: ಎಸ್.ಮುನಿಸ್ವಾಮಿ ಕಿಡಿ

• ಉದಯವಾಹಿನಿ, ಕೋಲಾರ

ಕೋಲಾರ ಲೋಕಸಭಾ ಕ್ಷೇತ್ರದಲ್ಲಿ 7 ಬಾರಿ ಸಂಸದರಾಗಿದ್ದ ಕೆ.ಎಚ್.ಮುನಿಯಪ್ಪ ಅವರಿಂದ ಏನೂ ಉಪಯೋಗವಿಲ್ಲವೆಂದು ಜನರು 2019ರಲ್ಲಿ ನನ್ನನ್ನು ಸಂಸದನನ್ನಾಗಿ ಆಯ್ಕೆ ಮಾಡಿದ್ದರು.

ಕೇಂದ್ರ ಸಚಿವರಾಗಿದ್ದಾಗಲೂ ಅವರು ಯಾವುದೇ ಅಭಿವೃದ್ಧಿ ಮಾಡದೆ ಇಂದಿಗೂ ಹೇಳುತ್ತಿರುವ ಹಸಿ ಸುಳ್ಳುಗಳನ್ನು ಬಿಡಬೇಕು ಎಂದು ಮಾಜಿ ಸಂಸದ ಎಸ್.ಮುನಿಸ್ವಾಮಿ ಕುಟುಕಿದರು. ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರಿಕುಪ್ಪಂನಿಂದ ಕುಪ್ಪಂವರೆಗೆ ರೈಲು ಹಳಿ ವಿಸ್ತರಣೆ ಮಾಡಿದ್ದು, ಇಂಡಸ್ಟ್ರಿಯಲ್ ಕಾರಿಡಾರ್ ಮಾಡಿಸಿದ್ದು ತಾವು ಎಂಬುದಾಗಿ ಮುನಿಯಪ್ಪ ಮಾಧ್ಯಮಗಳಲ್ಲಿ ಹೇಳಿದ್ದಾರೆ.

ಆದರೆ ಮಾರಿಕುಪ್ಪಂಗೆ ಸಂಪರ್ಕ ಕಲ್ಪಿಸಿದ್ದು, ಊರಿಗಾಂ, ಮಾಲೂರು ಸೇರಿದಂತೆ ವಿವಿಧ ರೈಲು ನಿಲ್ದಾಣಗಳ ಅಭಿವೃದ್ಧಿ, ಎಲೆಕ್ಟ್ರಿಕ್ ಲೈನ್ ಸೇರಿದಂತೆ ಅನೇಕ ಕಾಮಗಾರಿ ಮಾಡಿದ್ದು ನನ್ನ ಅವಧಿಯಲ್ಲಿ ಎಂದರು. ಈಚೆಗೆ ಸೋಮಣ್ಣ ರೈಲ್ವೆ ಇಲಾಖೆ ರಾಜ್ಯ ಸಚಿವರಾದ ಬಳಿಕ ಸ್ಯಾನಿಟೋರಿಯಂ ಬಳಿ ಸೇತುವೆ. ಟೇಕಲ್ ರಸ್ತೆಯಲ್ಲಿ ಮೇಲೇತುವೆ ಮಂಜೂರು ಮಾಡಿಸಿದ್ದೇವೆ. ಇದಲ್ಲದೇ ಇಂಡಸ್ಟ್ರಿಯಲ್ ಕಾರಿಡಾರ್, ಕೆಜಿಎಫ್ ಅಮೃತ್ ಸಿಟಿ ಆಗಿದ್ದು ನಮ್ಮ ಕಾಲದಲ್ಲಿ. ಸುಳ್ಳು ಹೇಳುವುದನ್ನು ಮುನಿಯಪ್ಪ ಬಿಡಬೇಕು. ಅವರ ಬಗ್ಗೆ ನಮಗೆ ಗೌರವ ಇದೆ ಎಂದು ನುಡಿದರು.

ಗಣೇಶ ಚತುರ್ಥಿ ವೇಳೆ ಡಿ.ಜೆಗೆ ಅವಕಾಶವಿಲ್ಲವೆಂದು ನ್ಯಾಯಾಲಯದ ತೀರ್ಪು ತೋರಿಸುವವರು ಅಜಾನ್ ಕೂಗುವುದಕ್ಕೆ ಏಕೆ ತೀರ್ಪನ್ನು ತೋರಿಸುತ್ತಿಲ್ಲ? ಮುಂದಿನ ದಿನಗಳಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಮತ್ತೆಂದೂ ಅಧಿಕಾರಕ್ಕೆ ಬರುವುದಿಲ್ಲ' ಎಂದರು. ಧರ್ಮಸ್ಥಳ ಪರ ಹೋರಾಟಕ್ಕೆ ಬಿಜೆಪಿ, ಜೆಡಿಎಸ್ ಪ್ರತ್ಯೇಕವಾಗಿ ತೆರಳುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, 'ಪಕ್ಷಗಳ ನಾಯಕರು ದಿನಾಂಕ ನಿಗದಿಪಡಿಸಿರುವ ಕಾರಣ ಒಂದು ದಿನ ಹೆಚ್ಚುಕಡಿಮೆ ಇದೆ. ಎಲ್ಲರೂ ಧರ್ಮಸ್ಥಳದ ಪರವಾಗಿಯೇ ಹೋರಾಟ ನಡೆಸುತ್ತಿದ್ದಾರೆ' ಎಂದು ಸಮರ್ಥಿಸಿಕೊಂಡರು. ಈ ಸಂದರ್ಭದಲ್ಲಿ ಮುಖಂಡ ನಾಗಭೂಷಣ್. ಮುಳಬಾಗಿಲು ಗ್ರಾಮಾಂತರ ಬಿಜೆಪಿ ಉಪಾಧ್ಯಕ್ಷ ಪ್ರಕಾಶ್ ರೆಡ್ಡಿ ಇದ್ದರು.


ಉದಯವಾಹಿನಿ ಚಿತ್ರ

**ದಸರೆಗೆ ಬಾನು ಬೇಡ ಹಿಂದೂಗಳಿಗೆ ನಿರಂತರ ತೊಂದರೆ ಕೊಟ್ಟವರ ಪರವಾಗಿಯೇ ಸದಾ ಸರ್ಕಾರ ನಿಂತಿದೆ. ದಸರಾ ಉದ್ಘಾಟಿಸಲು ಬಾನು ಮುಷ್ತಾಕ್ ಆಯ್ಕೆ ಖಂಡನೀಯ. ಕನ್ನಡ ಹಾಗೂ ಕನ್ನಡಪರ ಹೋರಾಟಗಾರರ ಕ್ಷಮೆ ಕೇಳಬೇಕು. ಬಾನು ಮುಷ್ತಾಕ್ ಯಾವುದೇ ಕಾರಣಕ್ಕೂ ದಸರಾ ಉದ್ಘಾಟನೆ ಮಾಡಬಾರದು. ರಾಜ್ಯದಲ್ಲಿ ಅನೇಕ ಸಾಧಕರಿದ್ದು ಅವರಲ್ಲಿ ಯಾರನ್ನಾದರೂ ಆಯ್ಕೆ ಮಾಡಲಿ' ಎಂದು ಮುನಿಸ್ವಾಮಿ ಆಗ್ರಹಿಸಿದರು.**

# ಅಸುರಕ್ಷಿತ ಸ್ಟಾರ್ಟರ್: ಅಪಾಯಕಾರಿ ವಿದ್ಯುತ್ ತಂತಿ

• ಉದಯವಾಹಿನಿ, ಮುಳಬಾಗಿಲು

ತಾಲ್ಲೂಕಿನ ನಗವಾರ ಸಮೀಪದ ಕೊತ್ತೂರು ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕೊಳವೆ ಬಾವಿಯ ಸ್ಟಾರ್ಟರ್ ಅನ್ನು ಅಸುರಕ್ಷಿತವಾಗಿ ಇರಿಸಲಾಗಿದೆ. ವಿದ್ಯುತ್ ತಂತಿಗಳು ನೆಲದ ಮೇಲೆಯೇ ಹಾದು ಹೋಗಿದ್ದು, ಜನ ಮತ್ತು ಜಾನುವಾರುಗಳಿಗೆ ಅಪಾಯ ಎದುರಾಗಿದೆ. ಮುಷ್ಟೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಕೊತ್ತೂರು ಗ್ರಾಮದ ಹೊರವಲಯದ ಕೆರೆಯ ಬಳಿ ಇರುವ ಕೊಳವೆ ಬಾವಿಯ ಸ್ಟಾರ್ಟರ್ ಅನ್ನು ಪ್ಲಾಸ್ಟಿಕ್ ಟ್ರೈ ಮೇಲೆ ಇರಿಸಲಾಗಿದೆ. ಪರಿವರ್ತಕ ಇರುವ ಸ್ಥಳದಿಂದ ಸ್ಟಾರ್ಟರ್ ವರೆಗೆ ವಿದ್ಯುತ್ ತಂತಿಯನ್ನು ಎಳೆಯಲಾಗಿದ್ದು, ಅಪಾಯ ಆಹ್ವಾನಿಸುತ್ತಿದೆ. ಬಿಸಿಲು, ಗಾಳಿ ಮಳೆಗೆ ತಂತಿಗಳ ಮೇಲಿನ ಪ್ಲಾಸ್ಟಿಕ್ ಉದಿರು ಹೋಗಿದ್ದು, ಜನ ಮತ್ತು ಜಾನುವಾರುಗಳಿಗೆ ತಂತಿ ತಾಗಿದರೆ ಅಪಾಯ ತಪ್ಪಿದ್ದಲ್ಲ.

ಈ ಬಗ್ಗೆ ಪಂಚಾಯತಿ ಅಧಿಕಾರಿಗಳ ಗಮನಕ್ಕೆ ತಂದೂ, ದುರಸ್ತಿ ಮಾಡುವಂತೆ ಹಲವು ಬಾರಿ ಮನವಿ ಮಾಡಿದ್ದರೂ ಅಧಿಕಾರಿಗಳು ಸ್ಪಂದಿಸಿಲ್ಲ.

ಅವಘಡ ನಡೆದ ಮೇಲೆ ಎಚ್ಚೆತ್ತು ಕೊಳ್ಳುತ್ತಾರೆಯೋ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೊಳವೆ ಬಾವಿಯ ಸುತ್ತಲೂ ಕಾಲಿಡಲೂ ಆಗದಂತೆ ಗಿಡಗಂಟಿ ಬೆಳೆದು ನಿಂತಿದೆ. ಇದರ ಮಧ್ಯದಲ್ಲಿ ಸ್ಟಾರ್ಟರ್ ಇದೆ.

# ಶೀಘ್ರ ಬೈಪಾಸ್ ರಸ್ತೆ ನಿರ್ಮಾಣ:ಕಾರ್ಯಕ್ಕೆ ಭೂಮಿ ಪೂಜೆ

## ಜಿಲ್ಲೆಯ ಗುಬ್ಬಿ ಬೈಪಾಸ್ ಚೆನ್ನಿಶೆಟ್ಟಿಹಳ್ಳಿ ಬಳಿ ಅಂಡರ್ ಪಾಸ್ ಮೇಲೆ ವಾಹನ ಸಂಚಾರಕ್ಕೆ ಚಾಲನೆ

• ಉದಯವಾಹಿನಿ, ತುಮಕೂರು,

ಮುಂದಿನ ಒಂದೂವರೆ ತಿಂಗಳಲ್ಲಿ ಜಿಲ್ಲೆಗೆ ಮಂಜೂರಾಗಿರುವ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ರವರಿಂದ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಕೇಂದ್ರ ರೈಲ್ವೆ, ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

ಜಿಲ್ಲೆಯ ಗುಬ್ಬಿ ಬೈಪಾಸ್ ಚೆನ್ನಿಶೆಟ್ಟಿಹಳ್ಳಿ ಬಳಿ ಅಂಡರ್ ಪಾಸ್ ಮೇಲೆ ವಾಹನ ಸಂಚಾರಕ್ಕೆ ಚಾಲನೆ ನೀಡಿ, ಗುಬ್ಬಿ ರೈಲ್ವೆ ನಿಲ್ದಾಣದಲ್ಲಿ ಲಘು ರಸ್ತೆ ಮೇಲ್ಸೇತುವೆ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ ಬಳಿಕ ಮಾತನಾಡಿದ ಅವರು, ಬೆಂಗಳೂರಿನಿಂದ ತುಮಕೂರಿಗೆ 2 ಹಂತದಲ್ಲಿ ಬೈಪಾಸ್ ರಸ್ತೆಗಳು 2650 ಕೋಟಿ ರೂ. ವೆಚ್ಚದಲ್ಲಿ ಮಂಜೂರಾಗಿವೆ. ಈ ಎರಡು ಬೈಪಾಸ್ ರಸ್ತೆಗಳಿಗೆ ಹಂತ ಹಂತವಾಗಿ ಡಿಪಿಆರ್ ಕೂಡ ಮಾಡಲಾಗುತ್ತದೆ ಎಂದರು. ಮುಂದಿನ ಒಂದೂವರೆ ತಿಂಗಳಲ್ಲಿ 2650 ಕೋಟಿ ರೂ. ವೆಚ್ಚದ ಬೈಪಾಸ್ ರಸ್ತೆ ನಿರ್ಮಾಣ ಕಾರ್ಯಕ್ಕೆ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರ್ ಅವರಿಂದ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಅವರು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ–206 ರಲ್ಲಿ ಕಾಮಗಾರಿಗಳಿಗೆ ಅಡಚಣೆ ಉಂಟಾಗಿದ್ದರಿಂದ ಸಾರ್ವಜನಿಕರಿಗೆ, ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿತ್ತು. ಈಗ ಇದ್ದ ಅಡಚಣೆ ನ್ಯಾಯಾಲಯದಲ್ಲಿ ತೀಮಾನವಾಗಿದ್ದು, ನೆನೆಗುದಿಗೆ ಬಿದ್ದಿದ್ದ ಕಾಮಗಾರಿಗಳನ್ನು ಹೆದ್ದಾರಿ ಪ್ರಾಧಿಕಾರದವರು ಶೀಘ್ರ ಪೂರ್ಣಗೊಳಿಸಿ, ಸಾರ್ವಜನಿಕ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲಿದ್ದಾರೆ ಎಂದರು. ಇನ್ನು ತಿಪಟೂರು, ಕಡೂರು, ಬೀರೂರು, ತರೀಕೆರೆಯಲ್ಲಿ ಇರುವ ಅಡಚಣೆಗಳನ್ನು ಬಗೆಹರಿಸಲು ಸಹ ಕ್ರಮ ವಹಿಸುತ್ತಿದ್ದೇವೆ ಎಂದ ಅವರು ಹೇಳಿದರು. ತುಮಕೂರು ಜಿಲ್ಲೆಯಲ್ಲೇ ಗುಬ್ಬಿ ತಾಲ್ಲೂಕಿನಲ್ಲಿ ರೈಲ್ವೆ ಗೇಟ್‌ಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ಈ ಎಲ್ಲಾ ಗೇಟ್‌ಗಳ ಬಳಿ ಸಾರ್ವಜನಿಕರ ಅನುಕೂಲಕ್ಕಾಗಿ ಅಂಡರ್‌ಪಾಸ್, ಲಘು ಮೇಲ್ಸೇತುವೆ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗುತ್ತಿದೆ ಎಂದರು.

ಈ ಕಾಮಗಾರಿಯಿಂದಾಗಿ ರೈತರಿಗೆ ತೊಂದರೆಯಾಗುವುದು ಸಹಜ. ಆದರೆ ಇದರಿಂದ ಸಾರ್ವಜನಿಕವಾಗಿ ತುಂಬಾ ಅನುಕೂಲವಾಗಲಿದೆ. ಸರ್ಕಾರ ನೀಡುವ ಹಣ ಯಾರ ಬಳಿಯೂ ಇರುವುದಿಲ್ಲ. ರೈತರು ನೀಡುವ ಭೂಮಿಯಲ್ಲಿ ಮಾಡುವ ಕೆಲಸ ಮಾತ್ರ ಶಾಶ್ವತವಾಗಿ ಉಳಿಯಲಿದೆ ಎಂದರು. ಶಾಸಕ ಹಾಗೂ ಕೆಎಸ್ಆರ್‌ಟಿಸಿ ನಿಗಮದ ಅಧ್ಯಕ್ಷ ಎಸ್. ಆರ್. ಶ್ರೀನಿವಾಸ್, ಮಾಜಿ ಸಂಸದ ಜಿ.ಎಸ್. ಬಸವರಾಜು, ಹೆದ್ದಾರಿ ಪ್ರಾಧಿಕಾರದ ಮುಖ್ಯಸ್ಥರಾದ ಬ್ರಹ್ಮಾಂಕರ್, ದಿಲೀಪ್‌ಕುಮಾರ್, ಹೊನ್ನಗಿರಿಗೌಡ, ಗ್ಯಾಸ್ ಬಾಬು, ನಾಗರಾಜು, ಯೋಗಾನಂದ್, ವೈ.ಹೆಚ್. ಹುಚ್ಚಯ್ಯ, ಬ್ಯಾಟರಂಗೇಗೌಡ, ರುದ್ರೇಶ್, ಭೈರಣ್ಣ, ಬೆಟ್ಟಸ್ವಾಮಿ, ಶಿವಪ್ರಸಾದ್, ಪ್ರಕಾಶ್ ಮತ್ತಿತರರು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯಿಂದ ಲಕ್ಷಾಂತರ ಜನರಿಗೆ ಅನುಕೂಲವಾಗಲಿದೆ. ಹಾಗಾಗಿ ಆದಷ್ಟು ಬೇಗ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಹೆದ್ದಾರಿ ಪ್ರಾಧಿಕಾರಿದ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಹೇಳಿದರು. ಗುಬ್ಬಿ ಪಟ್ಟಣದ 9 ಕಿ.ಮೀ. ದೂರ ಸಿಮೆಂಟ್ ಕಾಂಕ್ರೀಟ್ ರಸ್ತೆ, ಮಧ್ಯೆದಲ್ಲಿ 3 ಕಿ.ಮೀ. ಡಬಲ್ ರಸ್ತೆ ನಿರ್ಮಾಣವಾಗುತ್ತಿದೆ. ಗುಬ್ಬಿ ರೈಲ್ವೇ ನಿಲ್ದಾಣದಲ್ಲಿ ಎಲ್‌ಸಿ ಗೇಟ್ ಇರಲಿಲ್ಲ. ಈಗ ಲಘು ಮೇಲ್ಸೇತುವೆ ನಿರ್ಮಾಣ ಕಾರ್ಯಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದ್ದು, ಕಾಮಗಾರಿ ಪ್ರಾರಂಭ ಮಾಡಲಾಗುತ್ತಿದೆ ಎಂದರು.**

**ಪ್ರಧಾನಿ ನರೇಂದ್ರ ಮೋದಿಯವರು ಅಭಿವೃದ್ಧಿಯಲ್ಲಿ ರಾಜಕಾರಣ ಮಾಡಬೇಡಿ, ಚುನಾವಣೆ ವೇಳೆ ಮಾತ್ರ ರಾಜಕಾರಣ ಮಾಡಿ ಎಂದು ಹೇಳಿದ್ದಾರೆ. ಹಾಗಾಗಿ ಪಕ್ಷಾತೀತವಾಗಿ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ ಎಂದರು. ಭಾರತದ ಸಾರ್ವಭೌಮತ್ವವನ್ನು ಎತ್ತಿ ಹಿಡಿಯುವ ಉದ್ದೇಶದಿಂದ ದೇಶದ ಇತಿಹಾಸಕ್ಕೆ ಸ್ವಲ್ಪವೂಚ್ಯುತಿಬಾರದಂತೆ ನರೇಂದ್ರ ಮೋದಿಯವರು 11 ವರ್ಷಗಳ ಕಾಲ ಪ್ರಧಾನಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಕನಸಿನ ಭಾರತವನ್ನು ನನಸು ಮಾಡುವ ನಿಟ್ಟಿನಲ್ಲಿ ಪಕ್ಷಾತೀತವಾಗಿ, ಜಾತ್ಯಾತೀತವಾಗಿ ನಾವೆಲ್ಲರೂ ಒಂದಾಗೋಣ ಎಂದರು. ಇದೇ ಸಂದರ್ಭದಲ್ಲಿ ಸಚಿವ ಸೋಮಣ್ಣ ಅವರು ಗುಬ್ಬಿಯ ಚನ್ನಬಸವೇಶ್ವರ ಸ್ವಾಮಿ ದೇವಾಲಯದ ಬಳಿ ರಾಷ್ಟ್ರೀಯ ಹೆದ್ದಾರಿ 206ರಲ್ಲಿ ವೈಟ್ ಟ್ಯಾಪಿಂಗ್ ಕಾರ್ಯಕ್ಕೆ ಚಾಲನೆ ನೀಡಿದರು.**

## ಮಿನಿ ನ್ಯೂಸ್

### ಪಂಚಾಯಿತಿ ಸೌಲಭ್ಯ ಒದಗಿಸಬೇಕೆಂದು ಒತ್ತಾಯ

• ಉದಯವಾಹಿನಿ, ಹಾರೋಹಳ್ಳಿ

ತಾಲ್ಲೂಕಿನ ಬಾಚಳ್ಳಿದೊಡ್ಡಿ ಗ್ರಾಮದಲ್ಲಿ ರಸ್ತೆ, ಚರಂಡಿ ಹದಗೆಟ್ಟಿದ್ದು, ಬೀದಿ ದೀಪ ಸೇರಿದಂತೆ ಮೂಲಸೌಕರ್ಯವಿಲ್ಲದೆ ಸೊರಗಿದೆ.

ಕಟ್ಟಕಡೆಯ ಹಳ್ಳಿಗಳಿಗೂ ಮೂಲ ಸೌಕರ್ಯ ಕಲ್ಪಿಸಬೇಕೆಂದು ಸರ್ಕಾರಗಳು ಸಲವು ಯೋಜನೆಗಳು ಅನುಷ್ಠಾನಗೊಳಿಸಿದ್ದರೂ ತಾಲ್ಲೂಕಿನ ಬಾಚಳ್ಳಿದೊಡ್ಡಿ ಗ್ರಾಮ ಮೂಲ ಸೌಕರ್ಯಗಳಿಂದ ವಂಚಿತವಾಗಿದೆ. **ಚರಂಡಿ ವ್ಯವಸ್ಥೆಯಿಲ್ಲ:** ಗ್ರಾಮದಲ್ಲಿ ಸುಮಾರು 50ಕ್ಕೂ ಹೆಚ್ಚು ಮನೆಗಳಿದ್ದರೂ ಇದುವರೆಗೂ ಚರಂಡಿ ನಿರ್ಮಾಣ ಮಾಡಿಲ್ಲ. ಇದರಿಂದ ಮನೆಗಳ ನೀರು ರಸ್ತೆಯಲ್ಲಿ ನಿಂತು ದುರ್ವಾಸನೆ ಬೀರುತ್ತಿದೆ. ಈ ಬಗ್ಗೆ ಹಲವು ಬಾರಿ ಗ್ರಾಮ ಪಂಚಾಯಿತಿಗೆ ಮನವಿ ನೀಡಿದರೂ ಪ್ರಯೋಜನವಾಗಿಲ್ಲ.

**ಹದಗೆಟ್ಟ ರಸ್ತೆ:** ಗ್ರಾಮದಲ್ಲಿ ರಸ್ತೆ ನಿರ್ಮಿಸಿ 25 ರಿಂದ 30 ವರ್ಷಗಳಾಗಿದ್ದು, ಬರೀ ಗುಂಡಿಮಯವಾಗಿದೆ. ಹಾಗಾಗಿ ಪ್ರಯಾಣಿಕರು ಸಂಚರಿಸಲು ಕಷ್ಟಪಡುವಂತಾಗಿದೆ. ರಸ್ತೆಯುದ್ದಕ್ಕೂ ತಗ್ಗು–ದಿನ್ನೆಗಳಿವೆ.

ಈ ರಸ್ತೆಯಲ್ಲಿ ಪ್ರಯಾಣಿಸುವವರು ಬಿದ್ದು ಗಾಯಗೊಂಡಿರುವ ಘಟನೆಗಳು ನಡೆದಿವೆ. ರಾತ್ರಿ ವೇಳೆ ಪ್ರಯಾಣ ತೀರ ಕಷ್ಟಕರವಾಗಿದೆ.

**ಉರಿಯದ ಬೀದಿ ದೀಪ:** ರಾತ್ರಿ ವೇಳೆ ಓಡಾಡುವುದೇ ಸಾರ್ವಜನಿಕರಿಗೆ ದೊಡ್ಡ ಸವಾಲಾಗಿದೆ. ಬೀದಿ ದೀಪಗಳು ಸರಿಯಾಗಿ ಉರಿಯದ ಕಾರಣ ಸಾರ್ವಜನಿಕರು ಕತ್ತಲಲ್ಲಿ ಓಡಾಡುವಂತಾಗಿದೆ. ಹಾಗಾಗಿ ಪಂಚಾಯಿತಿಯವರು ಎಚ್ಚೆತ್ತು ಗ್ರಾಮಕ್ಕೆ ಸೌಲಭ್ಯ ಒದಗಿಸಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

### ಹೊಸದುರ್ಗ ಗ್ರಾಮ ಪಂಚಾಯಿತಿ ನೂತನ ಉಪಾಧ್ಯಕ್ಷೆ ಆಯ್ಕೆ

• ಉದಯವಾಹಿನಿ, ಕನಕಪುರ

ತಾಲ್ಲೂಕಿನ ಕೋಡಿಹಳ್ಳಿ ಹೋಬಳಿ ಹೊಸದುರ್ಗ ಗ್ರಾಮ ಪಂಚಾಯಿತಿ ನೂತನ ಉಪಾಧ್ಯಕ್ಷರಾಗಿ ವಲಸೆ ಚೌಡಮ್ಮ ಆಯ್ಕೆಯಾಗಿದ್ದಾರೆ. ಪಂಚಾಯಿತಿ ಉಪಾಧ್ಯಕ್ಷೆ ನಾಗುಬಾಯಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಚೌಡಮ್ಮ ಒಬ್ಬರೇ ನಾಮಪತ್ರ ಸಲ್ಲಿಸಿದ್ದ ಹಿನ್ನೆಲೆ ಚುನಾವಣಾಧಿಕಾರಿ ಮತ್ತಿಗೌಡ ಚೌಡಮ್ಮ ಅವರನ್ನೇ ಅವಿರೋಧವಾಗಿ ಘೋಷಿಸಿದರು.

### ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಣೆ

• ಉದಯವಾಹಿನಿ, ತುಮಕೂರು,

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿ ಮಾಡಿ 26 ಮಂದಿ ಅಮಾಯಕ ಪ್ರವಾಸಿಗರನ್ನು ಕೊಂದು ರಾಷ್ಟ್ರದ ಭದ್ರತೆಗೆ ಸವಾಲು ಹಾಕಿದ ಈ ಕೃತ್ಯಕ್ಕೆ ಪ್ರತೀಕಾರಾಗಿ ಕೇಂದ್ರ ಸರ್ಕಾರ ಮತ್ತು ಭದ್ರತಾ ಪಡೆಗಳು ನಡೆಸಿದ ಆಪರೇಷನ್ ಸಿಂಧೂರ ಯಶಸ್ವಿ ಕಾರ್ಯಾಚರಣೆ ಹಿನ್ನೆಲೆಯಲ್ಲಿ ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಕಲ್ಪತರುನಾಡಲ್ಲಿ ಆಪರೇಷನ್ ಸಿಂಧೂರ ವಿಜಯೋತ್ಸವವನ್ನು ಆಚರಿಸಲಾಯಿತು. ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಸಿದ್ದಪಡಿಸಿದ್ದ ಬೃಹತ್ ವೇದಿಕೆಯಲ್ಲಿ ಮೇಘಾಲಯ ರಾಜ್ಯಪಾಲರಾದ ಸಿ.ಹೆಚ್. ವಿಜಯಶಂಕರ್ ಅವರು ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಣೆಗೆ ವಿದ್ಯುಕ್ತವಾಗಿ ಚಾಲನೆ ನೀಡಿದರು. ನಂತರ ಮಾತನಾಡಿದ ಮೇಘಾಲಯ ರಾಜ್ಯಪಾಲರು, ನಮ್ಮ ದೇಶದ ಮೇಲೆ ದಾಳಿ ಮಾಡಿದ ಉಗ್ರರನ್ನು ಆಪರೇಷ್ ಸಿಂಧೂರ ಮೂಲಕ ಸದೆಬಡಿಯಲಾಯಿತು. ಇನ್ನು ಯುದ್ಧ ಮುಂದುವರೆಸಿದರೆ ಅಮಾಯಕರ ಸಾವು ನೋವು ಸಂಭವಿಸಬಹುದು ಎಂಬ ಉದ್ದೇಶದಿಂದ ಯುದ್ಧವನ್ನು ಕೈ ಬಿಡಲಾಯಿತು. ನಮ್ಮ ಶಾಂತಿ ಸಾಮರಸ್ಯಕ್ಕೆ ಹೆಸರಾದ ದೇಶ ಎಂದು ಹೇಳಿದರು.

ಮಾಜಿ ಸಚಿವ ಸೊಗಡು ಶಿವಣ್ಣರವರ ನೇತೃತ್ವದಲ್ಲಿ ನಡೆದ ಆಪರೇಷನ್ ಸಿಂಧೂರ ವಿಜಯೋತ್ಸವದಲ್ಲಿ ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಆದಿಚುಂಚನಗಿರಿ ಮಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಕೇಂದ್ರ ಸಚಿವ ವಿ. ಸೋಮಣ್ಣ, ಇಸ್ರೋ ಮಾಜಿ ಅಧ್ಯಕ್ಷ ಕೆ.ಎಸ್. ಕಿರಣ್‌ಕುಮಾರ್ ಸೇರಿದಂತೆ ಜಿಲ್ಲೆಯ ಶಾಸಕರುಗಳು, ಮಾಜಿ ಶಾಸಕರು, ಮಾಜಿ ಸೈನಿಕರು, ಎನ್‌ಸಿಸಿ, ಸ್ಕೌಟ್ಸ್–ಗೈಡ್ಸ್ ವಿದ್ಯಾರ್ಥಿಗಳು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ರೈತರಲ್ಲಿ ನಗು ಮೂಡಿಸಿದ ಚೆಂಡುಮಲ್ಲಿಗೆ

• ಉದಯವಾಹಿನಿ, ಬಾಗೇಪಲ್ಲಿ

ನದಿ, ನಾಲೆಗಳು ಇಲ್ಲದ ಬಯಲುಸೀಮೆ ತಾಲ್ಲೂಕು ಬಾಗೇಪಲ್ಲಿಯಲ್ಲಿ ನೀರಿನ ಕೊರತೆಯ ನಡುವೆ ರೈತರು ಬಟನ್ ರೋಜಾ, ಚೆಂಡುಮಲ್ಲಿಗೆ, ಸೇವಂತಿಗೆಯಂತಹ ವಾಣಿಜ್ಯ ಹೂವಿನ ಬೆಳೆಗಳನ್ನು ಬೆಳೆಯುವ ಮೂಲಕ ಆರ್ಥಿಕ ಲಾಭ ಗಳಿಸಿದ್ದಾರೆ. ಮುಂಗಾರು, ಹಿಂಗಾರು, ವಾಯುಭಾರ ಕುಸಿತದಿಂದ ಉಂಟಾಗುವ ಮಳೆಗಳಿಂದ ತರಕಾರಿ ಹೂವಿನ ಬೆಳೆ ಬೆಳೆಯುವುದು ಕಷ್ಟ. ಸರಿಯಾದ ಸಮಯಕ್ಕೆ ಮಳೆ ಬರದಿದ್ದರೆ, ಹೂವಿನ ಸಸಿಗಳಿಗೆ ನೀರು ಹರಿಸಲು ಸಾಧ್ಯವಾಗುವುದಿಲ್ಲ. ಇದರಿಂದ ನಷ್ಟವಾಗಲಿದೆ ಎಂದು ರೈತರು ಭಾವಿಸುತ್ತಾರೆ. ಆದರೆ ಹನಿ ನೀರಾವರಿ, ತುಂತುರು ನೀರಾವರಿ ಪದ್ಧತಿ, ಕೊಳವೆಬಾವಿಯಿಂದ ನೀರು ಬಳಕೆ ಮಾಡಿಕೊಂಡ ತಾಲ್ಲೂಕಿನ ಕೆಲವು ರೈತರು ಬಗೆ ಬಗೆಯ ಹೂವುಗಳನ್ನು ಬೆಳೆದಿದ್ದಾರೆ. ತಾಲ್ಲೂಕಿನ ಯಲ್ಲಂಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಂಬಾಲಪಲ್ಲಿ, ಪಟ್ರವಾರಿಪಲ್ಲಿ, ಯಲ್ಲಂಪಲ್ಲಿ, ಲಘುಮದ್ದೇಪಲ್ಲಿ, ಆಚೇಪಲ್ಲಿ, ಟೆಂಕಾಯಿಮಾಕಲಪಲ್ಲಿ, ಶಂಖಂವಾರಿಪಲ್ಲಿ, ಕಾನಗಮಾಕಲಪಲ್ಲಿ ಪಂಚಾಯಿತಿಯ ಕೋಡಿಪಲ್ಲಿ, ಕೊತ್ತಕೋಟೆ, ನಲ್ಲಮಲ್ಲೇಪಲ್ಲಿ ಸೇರಿದಂತೆ ವಿವಿಧ ಗ್ರಾಮಗಳ ರೈತರು ಬಟನ್ ರೋಜಾ, ಚೆಂಡುಮಲ್ಲಿಗೆ, ಕನಕಾಂಬರ, ಗುಂಡುಮಲ್ಲಿಗೆ, ಸೇವಂತಿಗೆ ಸೇರಿದಂತೆ ಇನ್ನಿತರ ಬಣ್ಣ ಬಣ್ಣದ ಹೂವುಗಳನ್ನು ಬೆಳೆದಿದ್ದಾರೆ. ಶ್ರಾವಣ ಮಾಸದ ವರಮಹಾಲಕ್ಷ್ಮಿ, ಗೌರಿ–ಗಣೇಶ ಸೇರಿದಂತೆ ವಿವಿಧ ಹಬ್ಬಗಳು ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಬೇಡಿಕೆಗೆ ತಕ್ಕಂತೆ ಹೂವುಗಳನ್ನು ಪೂರೈಸುವ ಮೂಲಕ ಲಾಭ ಮಾಡಿಕೊಂಡಿದ್ದಾರೆ. ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯ 2025–26ನೇ ಸಾಲಿನಲ್ಲಿ ಈವರೆಗೆ ರೈತರು ಸೇವಂತಿಗೆ 202 ಹೆಕ್ಟೇರ್ ಪ್ರದೇಶಗಳಲ್ಲಿ 2,012 ಮೆಗಾಟನ್‌ಗಳಲ್ಲಿ, ಚೆಂಡುಮಲ್ಲಿಗೆ ಹೂವನ್ನು 134 ಹೆಕ್ಟೇರ್ ಪ್ರದೇಶಗಳಲ್ಲಿ 1,074 ಮೆಗಾಟನ್‌ಗಳಲ್ಲಿ, ಬಟನ್ ಗುಲಾಬಿ– 1 ಹೆಕ್ಟೇರ್ ಪ್ರದೇಶದಲ್ಲಿ 8 ಟನ್ ಹಾಗೂ ಸುಗಂಧ ರಾಜವು 2 ಹೆಕ್ಟೇರ್ ಪ್ರದೇಶದಲ್ಲಿ 19 ಮೆಗಾಟನ್‌ನಷ್ಟು ಉತ್ಪಾದನೆ ಮಾಡುವ ಗುರಿ ಹೊಂದಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ.

**ವೃಷಭ** ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ, ಒಂಟಿತನದ ಭಾವನೆಯನ್ನು ತೊಡೆದುಹಾಕಿ. ನಿಮ್ಮ ಸಹೋದರ – ಸಹೋದರಿಯರಲ್ಲಿ ಒಬ್ಬರು ನಿಮ್ಮಿಂದ ಹಣವನ್ನು ಪಡೆಯಬಹುದು.

**ಮಿಥುನ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು.

**ಕರ್ಕಾಟಕ** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು.

**ಸಿಂಹ** ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟಿರಿ ಮತ್ತು ಅತಿಯಾಗಿ ತಿನ್ನಬೇಡಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು.

**ಕನ್ಯಾ** ಪಾಲಕರು ಮತ್ತು ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸಲು ಅವರಿಗೆ ಸಾಧ್ಯವಾದದ್ದನ್ನೆಲ್ಲ ಮಾಡುತ್ತಾರೆ. ಹಠಾತ್ ಪ್ರಣಯ ಪ್ರಸಂಗಗಳು ನಿಮ್ಮನ್ನು ಗೊಂದಲಕ್ಕೀಡು ಮಾಡಬಹುದು.

**ತುಲಾ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು.

**ವೃಶ್ಚಿಕ** ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ.

**ಧನಸ್ಸು** ಹಾಸ್ಯ ಪ್ರಜ್ಞೆ ಇನ್ನೊಬ್ಬರಿಗೆ ಸಂತೋಷ ವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ.

**ಮಕರ** ಕುಟುಂಬದ ಸದಸ್ಯರು ನಿಮ್ಮ ನಿರೀಕ್ಷೆಗಳನ್ನು ಪೂರೈಸದಿರಬಹುದು. ಅವರು ನಿಮ್ಮ ಇಷ್ಟಾನಿಷ್ಟಗಳ ಪ್ರಕಾರ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ , ನಿಮ್ಮ ಶೈಲಿಯನ್ನು ಬದಲಾಯಿಸಲು ಪ್ರಯತ್ನಿಸಿ.

**ಕುಂಭ** ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು.

**ಮೀನ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಸ್ವಲ್ಪ್ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ.

---

### ● ಧರ್ಮಪುರ ಬಸ್ ನಿಲ್ದಾಣ ನಿರ್ಮಾಣಕ್ಕೆ ಶೀಘ್ರ ಮಂಜೂರಾತಿ : ಸಚಿವ ರಾಮಲಿಂಗಾ ರೆಡ್ಡಿ ಘೋಷಣೆ

# ಹಿರಿಯೂರಿನ ನೂತನ ಬಸ್ ಘಟಕ ಲೋಕಾರ್ಪಣೆ

• **ಉದಯವಾಹಿನಿ ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಧರ್ಮಪುರದಲ್ಲಿ ರೂ.3.5 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣಕ್ಕೆ ಶೀಘ್ರ ಮಂಜೂರಾತಿ ನೀಡುವುದಾಗಿ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಘೋಷಿಸಿದರು. ಹಿರಿಯೂರು ನಗರದ ಹುಳಿಯಾರು ರಸ್ತೆಯಲ್ಲಿ ರೂ. 06 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ನೂತನ ಹಿರಿಯೂರು ಬಸ್ ಘಟಕ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ

**6 ಕೋಟಿ ವೆಚ್ಚದಲ್ಲಿ ನಿರ್ಮಾಣ**

ಕಳೆದ 2017 ರಲ್ಲಿ ಸಾರಿಗೆ ಸಚಿವನಾಗಿದ್ದಾಗ ದಾವಣಗೆರೆ ಹಾಗೂ ತುಮಕೂರು ವಿಭಾಗದಲ್ಲಿದ್ದ ಚಿತ್ರದುರ್ಗವನ್ನು ಪ್ರತ್ಯೇಕ ವಿಭಾಗವನ್ನಾಗಿ ಪ್ರಾರಂಭಿಸಲು ಅನುಮತಿ ನೀಡಿದ್ದೆ. ಅದರಂತೆ ಚಿತ್ರದುರ್ಗ ವಿಭಾಗವು 2018 ರಿಂದ ಕಾರ್ಯನಿರ್ವಹಿಸುತ್ತಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಬಸ್ ಘಟಕಗಳನ್ನು ನಿರ್ಮಿಸಲಾಗುತ್ತಿದೆ.

ಮೊಳಕಾಲ್ಮೂರು ಹಾಗೂ ಹೊಳಲ್ಕೆರೆ ನೂತನ ಬಸ್ ಘಟಕಗಳ ನಿರ್ಮಾಣ ಕಾರ್ಯ ಅಂತಿಮ ಹಂತದಲ್ಲಿದೆ. ಈ ಘಟಕಗಳಲ್ಲಿ ಡೀಸೆಲ್ ಪಂಪ್ ನಿರ್ಮಿಸಲು ಜಿಲ್ಲಾಧಿಕಾರಿಗಳು ಅನುಮತಿ ನೀಡಿದ್ದಾರೆ. ಇನ್ನೂ ಎರಡು ತಿಂಗಳಲ್ಲಿ ಬಸ್ ಘಟಕ ನಿರ್ಮಾಣದ ಅಂತಿಮ ಕೆಲಸಗಳನ್ನು ಪೂರ್ಣಗೊಳಿಸಿ ಉದ್ಘಾಟಿಸುವುದಾಗಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಶಕ್ತಿ ಯೋಜನೆ ಜಾರಿಯಿಂದ ಇಲ್ಲಿಯವರೆಗೆ ಚಿತ್ರದುರ್ಗ ವಿಭಾಗದ ಬಸ್‍ಗಳಲ್ಲಿ 5.48 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ. ಪ್ರತಿ ದಿನ ರಾಜ್ಯ ಸಾರಿಗೆ ಬಸ್‍ಗಳಲ್ಲಿ 55 ರಿಂದ 60 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸುತ್ತಿದ್ದು, ಇಲ್ಲಿಯವರೆಗೆ ಒಟ್ಟು 512 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಸಾರಿಗೆಯ ಲಾಭ ಪಡೆದಿದ್ದಾರೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ ಮಾತನಾಡಿ, ಬಡತನ ರೇಖೆಗಿಂತ ಕೆಳಗಿರುವ ಜನರನ್ನೂ ಒಳಗೊಂಡು ಬಡವರನ್ನು ಆರ್ಥಿಕವಾಗಿ ಸಬಲರಾಗಿಸಲು ಸರ್ಕಾರ ಪಂಚ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಬಸ್ ಘಟಕ ನಿರ್ಮಾಣವಾಗಿರುವುದರಿಂದ ಗ್ರಾಮೀಣ ಭಾಗದ ಜನರು ಹಾಗೂ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಿದೆ.

ತಾಲ್ಲೂಕಿನ ಮೇಟಿಕುರ್ಕಿ ಬಳಿ ಟ್ರಕ್ ಟರ್ಮಿನಲ್‍ಗೆ ಜಾಗ ಗುರುತಿಸಲಾಗಿದೆ. ಸಾರಿಗೆ ಸಚಿವರು ಟ್ರಕ್ ಟ್ರರ್ಮಿನಲ್ ನಿರ್ಮಿಸಲು ಅನುಮತಿಸಿದರೆ ಅನುಕೂಲವಾಗುತ್ತದೆ ಎಂದು ಹೇಳಿದರು. ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್ ಮಾತನಾಡಿ, ಹಿರಿಯೂರು ಅತಿ ವೇಗವಾಗಿ ಬೆಳೆಯುತ್ತಿದೆ. ಎರಡು ರಾಷ್ಟ್ರೀಯ ಹೆದ್ದಾರಿಗಳು ಹಿರಿಯೂರು ನಗರದಲ್ಲಿ ಹಾದು ಹೋಗಿವೆ. ತಾಲ್ಲೂಕಿನಲ್ಲಿ ಅತಿದೊಡ್ಡ ಕೈಗಾರಿಕಾ ಪ್ರದೇಶವಾಗಿ ಅಭಿವೃದ್ಧಿ ಪಡಿಸಲಾಗುತ್ತಿದ್ದು, ಮುಂಬರುವ ದಿನಗಳಲ್ಲಿ ಹೆಚ್ಚಿನ ಉದ್ದಿಮೆಗಳು ಸ್ಥಾಪನೆಯಾಗಲಿವೆ. ಬಸ್ ಡಿಪೋ ನಿರ್ಮಾಣದಿಂದ ಹಿರಿಯೂರಿನ ಗ್ರಾಮೀಣ ಭಾಗಕ್ಕೆ ಹೆಚ್ಚಿನ ಬಸ್ ಸೌಲಭ್ಯ ದೊರತಂತಾಗಿದೆ ಎಂದು ಹೇಳಿದರು.

ಸಚಿವ ರಾಮಲಿಂಗಾರೆಡ್ಡಿ, ಹಿರಿಯೂರು–ಧರ್ಮಸ್ಥಳ, ಹಿರಿಯೂರು– ಚಳ್ಳಕೆರೆ, ಹಿರಿಯೂರು–ಹೊಸದುರ್ಗ, ಹಿರಿಯೂರು–ಹಾಸನ, ಹಿರಿಯೂರು–ಧರ್ಮಪುರ ಮಾರ್ಗದ ನೂತನ ಬಸ್ ಸಂಚಾರಕ್ಕೆ ಹಸಿರು ನಿಶಾನೆ ತೋರಿದರು.

ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಯೋಗಿಶ್ ಬಾಬು, ಆದಿ ಜಾಂಬವ ನಿಗಮದ ಅಧ್ಯಕ್ಷ ಮಂಜುನಾಥ, ನಗರಸಭೆ ಅಧ್ಯಕ್ಷ ಬಾಲಕೃಷ್ಣ.ಆರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಖಾದಿ ರಮೇಶ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನಿರ್ದೇಶಕ ಇಬ್ರಾಹಿಂ ಮೈಗೂರ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಆಕಾಶ್ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು. ವಿಭಾಗೀಯ ನಿಯಂತ್ರಣಾಧಿಕಾರಿ ಕೆ.ವೆಂಕಟೇಶ ಸ್ವಾಗತಿಸಿದರು.

> **ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹಿರಿಯೂರು ತಾಲ್ಲೂಕಿನ ಜನರ ಬಹುದಿನದ ಕನಸು ಇಂದು ನನಸಾಗಿದೆ. ತಾಲ್ಲೂಕಿನ ಧರ್ಮಪುರ ಹೋಬಳಿ ಮುಂಬರುವ ದಿನದಲ್ಲಿ ತಾಲ್ಲೂಕು ಮಟ್ಟಕ್ಕೆ ಏರಲಿದೆ. ಈಗಾಗಲೇ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಜಾಗವನ್ನು ಗುರುತಿಸಿ ಸಾರಿಗೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ರೂ.3.35 ಕೋಟಿ ವೆಚ್ಚದಲ್ಲಿ ಬಸ್ ನಿರ್ಮಾಣ ಯೋಜನೆ ರೂಪಿಸಲಾಗಿದೆ. ಇದಕ್ಕೆ ಸಾರಿಗೆ ಸಚಿವರು ತಕ್ಷಣವೇ ಮಂಜೂರಾತಿ ನೀಡುವಂತೆ ಕೋರಿದರು. ಹಿರಿಯೂರಿನ ಮುಖ್ಯ ರಸ್ತೆಯಿಂದ ಬಸ್ ಡಿಪೋ ಸಂಪರ್ಕಿಸುವ ರಸ್ತೆ ಕಿರಿದಾಗಿದ್ದು, ಇದನ್ನು ದ್ವಿಪಥ ರಸ್ತೆಯನ್ನಾಗಿ ಸ್ಥಳೀಯ ಆಡಳಿತದಿಂದ ಅಭಿವೃದ್ಧಿ ಪಡಿಸಲಾಗುವುದು –ಸಚಿವ ಡಿ.ಸುಧಾಕರ**

> **ಹಿರಿಯೂರು ಬಸ್ ನಿಲ್ದಾಣ ಹಳೆಯದಾಗಿದ್ದು ಉನ್ನತೀಕರಿಸಲು ರೈತ ಮುಖಂಡರು ಮನವಿ ಮಾಡಿದ್ದಾರೆ. ಈ ಹಿನ್ನಲೆಯಲ್ಲಿ ಹಿರಿಯೂರು ಬಸ್ ನಿಲ್ದಾಣ ಉನ್ನತೀಕರಣಕ್ಕೂ ಮಂಜೂರಾತಿ ನೀಡಲಾಗುವುದು. ಸದ್ಯ ಉದ್ಘಾಟಿಸಿರುವ ಹಿರಿಯೂರು ನೂತನ ಬಸ್ ಘಟಕದಲ್ಲಿ ಆಡಳಿತ ಕಚೇರಿ, ಬಸ್‍ಗಳ ನಿರ್ವಹಣೆ ಮತ್ತು ಪರಿವೀಕ್ಷಣೆ ಅಂಕಣ, ಭದ್ರತಾ ಮತ್ತು ಸಂಚಾರ ಶಾಖೆ, ಮಹಿಳಾ ಮತ್ತು ಪುರುಷ ಸಿಬ್ಬಂದಿ ವಿಶ್ರಾಂತಿ ಗೃಹ, ಇಂಧನ ಪಂಪ್, ವಾಷಿಂಗ್ ರ್ಯಾಂಪ್, ಪಾರ್ಕಿಂಗ್ ವ್ಯವಸ್ಥೆ, ಜನರೇಟರ್ ಕೊಠಡಿ, ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಚಿತ್ರದುರ್ಗ ವಿಭಾಗದಲ್ಲಿ 358 ಬಸ್‍ಗಳು ಇದ್ದು, 924 ಚಾಲನಾ, 225 ತಾಂತ್ರಿಕ ಹಾಗೂ 194 ಆಡಳಿತ ಸೇರಿ 1343 ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ –ರಾಮಲಿಂಗಾರೆಡ್ಡಿ , ಸಚಿವ**

---

## ಮೆಗಾ ಮಾರ್ಕೇಟ್ ಡಿಪಾಜಿಟ್ ಕುರಿತು ಚರ್ಚೆ

• **ಉದಯವಾಹಿನಿ ಇಂಡಿ**

ಇಂಡಿ ಪುರಸಭೆ ಸಾಮಾನ್ಯ ಸಭೆ ಪುರಸಭೆ ಆವರಣದಲ್ಲಿ ಅಧ್ಯಕ್ಷ ಲಿಂಬಾಜಿ ರಾಠೋಡ ಇವರ ಅಧ್ಯಕ್ಷತೆಯಲ್ಲಿ ನಡೆಯಿತು. ಪುರಸಭೆ ಮುಖ್ಯಾಧಿಕಾರಿ ಸಿದ್ರಾಮ ಕಟ್ಟಿಮನಿ ಎಲ್ಲರನ್ನು ಸ್ವಾಗತಿಸಿದರು.


ಉದಯವಾಹಿನಿ ಚಿತ್ರ

**ಪುರಸಭೆ ಸಾಮಾನ್ಯ ಸಭೆ**

ಇಂಡಿ ಪುರಸಭೆಯಿಂದ ನೂತನವಾಗಿ ಕಟ್ಟಲ್ಪಟ್ಟ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಮೇಗಾ ಮಾರ್ಕೇಟಿನ ಕೆಳ ಅಂತಸ್ತಿನ ಒಂದು ನೂರು ಅಂಗಡಿ ಬಾಡಿಗೆ ಕೊಡುವ ಟೆಂಡರ್ ಕರೆದಿತ್ತು. ಬಾಡಿಗೆದಾರರು ಯಾರೂ ಭಾಗವಹಿಸಿರಲ್ಲಿಲ್ಲ. ಪ್ರತಿ ಅಂಗಡಿಗೆ ಎರಡು ಲಕ್ಷ ಡಿಪಾಜಿಟ್ ಮತ್ತು ಬಾಡಿಗೆ ಹರಾಜು ಮಾಡಬೇಕಾಗಿತ್ತು. 2 ಲಕ್ಷ ರೂ ಡಿಪಾಜಿಟ್ ಬಹಳವಾಗುತ್ತದೆ ಎಂದು ಸಾರ್ವಜನಿಕರು ಮನವಿ ಮಾಡಿದ್ದರು. ಈ ಕುರಿತು ಸಾಮಾನ್ಯ ಸಭೆಯಲ್ಲಿ ಡಿಪಾಜಿಟ್ ಕಡಿಮೆ ಮಾಡಲು ಮಾನ್ಯ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲು ತಿರ್ಮಾನಿಸಲಾಯಿತು. 2023–24 ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ ಪುರಸಭೆ ಇಂಡಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನವ್ಯವಸ್ಥೆ ಉನ್ನತಿಕರಿಸಲು ಪೈಪಲೈನ್ ಕಾಮಗಾರಿ ಕೈ ಗೊಳ್ಳುವ ಕುರಿತು ಚರ್ಚೆ, ಇಂಡಿ ಪಟ್ಟಣದ ಬ್ಲಾಕ್ ನಂ 30 ವಸತಿ ಉದ್ದೇಶದ ಕರಡು ವಿನ್ಯಾಸ ನಕ್ಷೆಗಳಿಗೆ ಅನುಮೋದನೆ ನೀಡುವ ಕುರಿತು ಚರ್ಚೆ,ಇಂಡಿ ಪಟ್ಟಣದ ಬ್ಲಾಕ್ ನಂ. 500 ರ ವಾಣಿಜ್ಯ ಉದ್ದೇಶದ ತಾತ್ಕಾಲಿಕತಾಂತ್ರಿಕ ಅನುಮೋದನೆ ಪರಿಷ್ಕೃತ ವಿನ್ಯಾಸಕ್ಕೆ ಅನುಮೋದನೆ ನೀಡುವ ಕುರಿತು ಚರ್ಚೆ ನಡೆಯಿತು.

ಚರ್ಚೆಯಲ್ಲಿ ಉಪಾಧ್ಯಕ್ಷ ಜಹಾಂಗೀರ ಸೌದಾಗರ , ಸದಸ್ಯರಾದ ಅನೀಲಗೌಡ ಬಿರಾದಾರ, ದೇವೆಂದ್ರ ಕುಂಬಾರ, ಉಮೇಶ ದೇಗಿನಾಳ, ಅಯೂಬ ಬಾಗವಾನ, ಶಬ್ಬೀರ ಖಾಜಿ ಪಾಲ್ಗೊಂಡಿದ್ದರು. ಪುರಸಭೆ ಸದಸ್ಯರಾದ ಭೀಮನಗೌಡ ಪಾಟೀಲ, ಬನ್ನೆಮ್ಮ ಹದರಿ, ರೇಣುಕಾ ಉಟಗಿ, ಸುಜಾತಾ ಚನಗೊಂಡ, ಕವಿತಾ ಜಯರಾಮ ರಾಠೋಡ , ವ್ಯವಸ್ಥಾಪಕರು ಪ್ರವೀಣ ಸೋನಾರ, ಅಸ್ಲಂ ಖಾದಿಮ್, ಸೋಮು ನಾಯಕ, ಹುಚ್ಚಪ್ಪ ಶಿವಶರಣ ಚಂದು ಕಾಲೆಭಾಗ, ನಿಂಬಾಳಕರ ಮತ್ತಿತರಿದ್ದರು.

---

## ಒಳ ಮೀಸಲಾತಿ: ಭೋವಿ ವಡ್ಡರ ಸಮಾಜಕ್ಕೆ ಅನ್ಯಾಯ

• **ಉದಯವಾಹಿನಿ ಸಿಂಧನೂರು**

ದಿ 19–08–2025 ರಂದು ನ್ಯಾ. ನಾಗಭೂಷಣ ವರದಿಯಲ್ಲಿನ ಮಾರ್ಪಾಡುಗಳೊ ಂದಿಗೆ ಒಳ ಮೀಸಲಾತಿ ಜಾರಿಗೆ ಮಾಡಿ ಎಡಗೈ 6% ಬಲಗೈಯ 6% ಸ್ಪರ್ಶ ಸಮೂದಾಯ 5% ಮೀಸಲಾತಿ ನೀಡಿದ್ದು ಇದರಲ್ಲಿ ಸ್ಪರ್ಶ ಸಮುದಾಯದಲ್ಲಿ ಬರುವ ಜಾತಿಗಳಲ್ಲಿ ಭೋವಿ–ವಡ್ಡರ ಸಮುದಾಯವನ್ನು ಪ್ರತ್ಯೇಣ ಮೀಸಲಾತಿಯ ನೀಡಬೇಕೆಂದು ಭೋವಿ ಸಮಾಜದ ತಾಲ್ಲೂಕು ಅಧ್ಯಕ್ಷ ಲಕ್ಷ್ಮಣ ಭೋವಿ ಅವರು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಒಳ ಮೀಸಲಾತಿಗೆ ಸಂಬಂಧಿಸಿದಂತೆ ನ್ಯಾ. ಸದಾಶಿವ ಆಯೋಗ, ನ್ಯಾ ರಾಮದಾಸ ಆಯೋಜ ಹಾಗೂ ನ್ಯಾ. ನಾಗಮೋಹನದಾಸ ಆಯೋಗಗಳನ್ನು ರಚಿಸಲಾಯಿತು

ಆದರೆ ಕೊನೆಯದಾಗಿ ನ್ಯಾ. ನಾಗಮೋಹನದಾಸ ವರದಿ ಆಧರಿಸಿ ಕರ್ನಾಟಕ ರಾಜ್ಯ ಸರಕಾರ ದಿನಾಂಕ 19–08–2025 ರಂದು ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟದಲ್ಲಿ ಒಳ ಮೀಸಲಾತಿಯನ್ನು ಮಾರ್ಪಾಡುಗಳೊಂದಿಗೆ, ಒಳಮಿಸಲಾತಿ ಜಾರಿ ಮಾಡಿ ಎಡಗೈ 6% ಬಲಗೈ 66 ಸ್ಪರ್ಶ ಸಮೂದಾಯ 5% ಮೀಸಲಾತಿ ನೀಡಿದ್ದು, ಇದರಲ್ಲಿ ಸ್ಪರ್ಶ ಸಮುದಾಯಕ್ಕೆ ಶೇ. 5% ಮೀಸಲಾತಿ ನೀಡಿದ್ದು. ಇದರಲ್ಲಿ ನಾಗಮೋಹನದಾಸ ವರದಿಯನ್ನು ಪರಿಶೀಲಿಸಿದಾಗ ಅದರಲ್ಲಿ ಭೋವಿ ವಡ್ಡರ ಸಮಾಜಕ್ಕೆ ಅನ್ಯಾಯವಾಗಿರುತ್ತದೆ.

ಏಕೆಂದರೆ ನಮ್ಮ ಭೋವಿ–ವಡ್ಡರ ಸಮಾಜದವರಿಂದ ಸ್ಪರ್ಶ ಸಮೂದಾಯದಲ್ಲಿ ಬರುವ ಇನ್ನಿತರ ಜಾತಿಗಳೊಂದಿಗೆ ಶಿಕ್ಷಣ ಉದ್ಯೋಗದಲ್ಲಿ ಪೈಪೋಟಿ ನಡೆಸಲು ಸಾಧ್ಯವಾಗುವುದಿಲ್ಲ.

ಆದಕಾರಣ ಮೀಸಲಾತಿ ಶೇ. 5%ರಲ್ಲಿ ಬರುವ ಸ್ಪರ್ಶ ಸಮೂದಾಯಗಳಲ್ಲಿ ಭೋವಿ – ವಡ್ಡರ ಜಾತಿಯನ್ನು ಬೇರ್ಪಡಿಸಿ ಪ್ರತ್ಯೇಕ ಮೀಸಲಾತಿಯನ್ನು ಜಾರಿ ಮಾಡಬೇಕೆಂದು ನಮ್ಮ ಸಮಾಜದಿಂದ ಆಗ್ರಹವಾಗಿದೆ


ಆದ ಕಾರಣ ಭೋವಿ ವಡ್ಡರ ನಮ್ಮ ಸಮಾಜಕ್ಕೆ ಉದ್ಯೋಗ ಶಿಕ್ಷಣಕ್ಕೆ ಸಂಬಂಧಿಸಿದ ಸರ್ಕಾರಿ ಸೌಲಭ್ಯ ವಂಚಿತರಾಗಿದ್ದಾರೆ ಈ ಕಾರಣದಿಂದ ಮುಂದೆ ನಮ್ಮ ಭವಿಷ್ಯಕ್ಕಾಗಿ ಹೋರಾಟ ನಿರಂತರವಾಗಿರುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಂಕರ. ದುರುಗಪ್ಪ. ಅಂಬಣ್ಣ ರವಿ. ಶ್ಯಾಮಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

---

## ಸರ್ಕಾರಗಳು ನ್ಯಾಯಬದ್ದವಾಗಿ ಬೆಳೆಹಾನಿ ಪರಿಹಾರ ಘೋಸುವಂತೆ ಒತ್ತಾಯ

• **ಚಟಿಂಚೋಳಿ**

ಜಿಲ್ಲೆಯಾದ್ಯಂತ ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ರೈತರು ಬೆಳೆದ ಉದ್ದು ಹೆಸರು ಸಂಪೂರ್ಣ ನಾಶವಾದರೆ ತೊಗರಿ ಪ್ರತಿಶತಃ 60ರಷ್ಟು ನಷ್ಟವಾಗಿದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ನ್ಯಾಯಬದ್ದವಾಗಿ ಸರ್ಕಾರಗಳು ಬೆಳೆ ಹಾನಿ ಪರಿಹಾರ ಘೋಸುವಂತೆ ಜಿಲ್ಲಾ ಕೃಷಿಕ ಸಮಾಜ ಅಧ್ಯಕ್ಷ ಡಾ.ಸಿದ್ರಾಮಪ್ಪ ಪಾಟೀಲ ದಂಗಾಪೂರ ಒತಾಯಿತ್ತಿಸಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ವಿವಿಧೆಡೆ ರೈತರು ಬೆಳೆದ ಜಮೀನುಗಳಿಗೆ ಭೇಟಿ ನೀಡಿ ಬೆಳೆಹಾನಿ ವೀಕ್ಷಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,2025–26ನೇ ಸಾಲಿನ ಮುಂಗಾರು ಹಂಗಾಮಿನ ಸ್ಥಿತಿಗತಿ ಹಾಗೂ ರೈತರ ಆರ್ಥಿಕ ಸಂಕಷ್ಟ ಪರಿಹಾರ ನೀಡುವಂತೆ ಈಗಾಗಲೇ ಮುಖ್ಯಮಂತ್ರಿಗಳಿಗೆ ಹಾಗೂ ಉಸ್ತುವಾರಿ ಸಚಿವರಿಗೆ ಮನವಿಪತ್ರ ಸಲ್ಲಿಸಿದ್ದೇನೆ. ತಾಲ್ಲೂಕಿನಲ್ಲಿ ಉದ್ದು, ಹೆಸರು ಶೇ.100ರಷ್ಟು ಬೆಳೆಗಳು ನಾಶವಾಗಿವೆ, ತೊಗರಿಬೇಳೆ ಶೇಕಡಾ 60ರಷ್ಟು ನಾಶವಾಗಿದೆ,ರೈತರು ಕಂಗಾಲಾಗಿದ್ದು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಮಧ್ಯೆಸ್ಥಿಕೆವಹಿಸಿ ಸೂಕ್ತ ಪರಿಹಾರ ನೀಡಿ ರೈತರ ಬೆನ್ನಿಗೆ ನಿಲ್ಲಬೇಕು,ಈಗಾಗಲೇ ಸರ್ಕಾರ ಬೆಳೆಹಾನಿ ಸಮೀಕ್ಷೆ ನಡೆಸುವಂತೆ ಆದೇಶ ಹೊರಡಿಸಿದ್ದು ಶೀಘ್ರದಲ್ಲೇ ಜಿಲ್ಲಾಡಳಿತ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು ಸರ್ಕಾರ ಶೀಘ್ರದಲ್ಲೆ ರೈತರ ಬೆಳೆಹಾನಿ ಪರಿಹಾರ ನೀಡಬೇಕು ಎಂದರು.

ಕೃಷಿ ಸಹಾಯಕ ನಿರ್ದೇಶಕ ವೀರಶೇಟ್ಟಿ ರಾಠೋಡ್, ತಾಲ್ಲೂಕಾ ಕೃಷಿಕ ಸಮಾಜ ಅಧ್ಯಕ್ಷ ಮಲ್ಲಿಕಾರ್ಜುನ ಬುಶೆಟ್ಟಿ ಇದ್ದರು.

> **ರಾಜ್ಯದ ಎಲ್ಲಾ ಕ್ಷೇತ್ರದ ಶಾಸಕರು ಬೆಳೆಹಾನಿ ಸುಕ್ಷೆ ನಡೆಸುತ್ತಿರುವುದು ರೈತರ ಬೆನ್ನಿಗೆ ನಿಂತ್ತಿರುವುದು ಒಳ್ಳೆಯ ಬೆಳವಣಿಗೆ,ಸಂಸದರು ಕೂಡ ಸರ್ಕಾರದ ಮೇಲೆ ಒತ್ತಾಡ ಹಾಕಿ ಹೆಚ್ಚಿನ ಪರಿಹಾರ ರೈತರಿಗೆ ಕೊಡಿಸುವಲ್ಲಿ ಶ್ರಮಿಸಬೇಕು,ತೋಟಗಾರಿಕೆ ಇಲಾಖೆಯ ಬೆಳೆಗಳು ಪಪ್ಪಾಯಿ,ಮೆಣಸಿನಕಾಯಿ,ಕಬ್ಬು ಇತರೆ ಬೆಳೆಗಳು ಸಹ ಅತಿಯಾದ ಮಳೆಯಿಂದ ಬೆಳೆ ನಷ್ಟವಾಗಿವೆ ಅದನ್ನು ಸಹ ಸರ್ವೇ ನಡೆಸಿ ಪರಿಹಾರ ನೀಡಬೇಕು –ಡಾ.ಸಿದ್ರಾಮಪ್ಪ ಪಾಟೀಲ ದಂಗಾಪೂರ**

---

## ಹಾಳಾದ ಬೆಳೆ, ಬೆಲೆ ಕುಸಿತ: ಸರ್ಕಾರದ ನೆರವೆಲ್ಲಿ?

• **ಉದಯವಾಹಿನಿ ಲಕ್ಷ್ಮೇಶ್ವರ**

ತಾಲ್ಲೂಕಿನಾದ್ಯಂತ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸಾವಿರಾರು ರೂಪಾಯಿ ಖರ್ಚು ಮಾಡಿ ಬೆಳೆದ ಹೆಸರು ಬೆಳೆ ಸತತ ಸುರಿದ ಮಳೆಯಿಂದಾಗಿ ಬೆಳೆಹಾನಿ ಒಂದು ಕಡೆ ಆಗಿದ್ದರೆ ಬೆಲೆ ಕುಸಿತ ರೈತರನ್ನು ಬೇತಾಳದಂತೆ ಬೆನ್ನತ್ತಿದೆ. ತಾಲ್ಲೂಕಿನಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸುಮಾರು 15 ಸಾವಿರ ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಹೆಸರು ಬೆಳೆ ಫಸಲು ಬಂದ ವೇಳೆಯೇ ಸತತ ಸುರಿದ ಮಳೆಗೆ ಸಿಕ್ಕು ಬೆಳೆ ಹಾನಿ ಉಂಟಾಗಿದ್ದರೆ ಇನ್ನೂ ಕೆಲವು ಕಡೆ ಹೆಸರು ಮೊಳಕೆ ನಾಟಿವೆ. ಈಗ ಬಂದಿರುವ ಹೆಸರನ್ನು ಮಾರುಕಟ್ಟೆಗೆ ರೈತರು ಮಾರಾಟಕ್ಕೆ ತೆಗೆದುಕೊಂಡು ಹೋದರೆ ಕಾಳಿನ ಗುಣಮಟ್ಟದ ಕಾರಣದಿಂದ ಅತ್ಯಂತ ಕಡಿಮೆ ದರದಲ್ಲಿ ಟೆಂಡರ್ ಹಾಕುತ್ತಿರುವದರಿಂದ ಪ್ರತಿನಿತ್ಯವೂ ರೈತರು ಟೆಂಡರನ್ನು ರದ್ದುಗೊಳಿಸಿ ಅದಕ್ಕಾಗಿಯೇ ಪ್ರತಿನಿತ್ಯವೂ ಎಪಿಎಂಸಿ ಮಾರುಕಟ್ಟೆಗೆ ಬರುವ ಸ್ಥಿತಿ ನಿರ್ಮಾಣವಾಗಿದೆ.


ಉದಯವಾಹಿನಿ ಚಿತ್ರ

ಈಗ ರೈತರು ಅತ್ತ ದರಿ ಇತ್ತಪುಲಿ ಎನ್ನುವಂತಹ ಸ್ಥಿತಿಯಲ್ಲಿ ಸಿಲುಕಿದ್ದು ವ್ಯಾಪಾರಸ್ಥರು ಕಾಳು ಗುಣಮಟ್ಟದ್ದಿಲ್ಲ ಖರೀದಿದಾರರು ಗುಣಮಟ್ಟದ ಕಾಳನ್ನು ಖರೀದಿಸಲು ಮುಂದಾಗುತ್ತಿದ್ದಾರೆ ಇತ್ತ ರೈತರು ಕೈಗೆ ಬಂದ ಬೆಲೆಗೆ ಮಾರಾಟ ಮಾಡಿ ಹೋಗುವ ಸ್ಥಿತಿ ಬಂದಾಗಿದ ಆದರೆ ಇದುವರೆಗೂ ಸರ್ಕಾರ ರೈತರಿಗೆ ಬೆಳೆ ಹಾನಿಯಾಗಲಿ, ಬೆಳೆ ವಿಮೆಯಾಗಲಿ ಅಥವಾ ಮಧ್ಯಂತರ ಪರಿಹಾರವನ್ನಾಗಲಿ ಘೋಷಿಸದೆ ಕೇವಲ ಗ್ಯಾರಂಟಿಯಲ್ಲಿಯೇ ಕಾಲ ಕಳೆಯುತ್ತಿರುವುದರಿಂದ ರೈತರಿಗೆ ಬೆಳೆ ಹಾನಿ ಬರುವ ಗ್ಯಾರಂಟಿಯೇ ಇಲ್ಲದಂತಾಗಿದೆ.

---

## ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆ ಅವಶ್ಯಕ

• **ಉದಯವಾಹಿನಿ ಬೀದರ್**

ಉತ್ತಮ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಅವಶ್ಯಕ ಎಂದು ತೋಟಗಾರಿಕೆ ಕಾಲೇಜು ಡೀನ್ ಡಾ. ಎಸ್.ವಿ. ಪಾಟೀಲ ಹೇಳಿದರು. ನಗರದ ತೋಟಗಾರಿಕೆ ಕಾಲೇಜಿನಲ್ಲಿ ಮೇರಾ ಯುವ ಭಾರತ್ ಹಾಗೂ ತೋಟಗಾರಿಕೆ ಕಾಲೇಜು ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಗಳು ಮನುಷ್ಯನನ್ನು ದೈಹಿಕ ಹಾಗೂ ಮಾನಸಿಕವಾಗಿ ಸದೃಢಗೊಳಿಸುತ್ತವೆ ಎಂದು ತಿಳಿಸಿದರು. ಯುವಜನರು ಆರೋಗ್ಯ ಕಾಯ್ದುಕೊಳ್ಳಲು ಆದಷ್ಟು ಜಂಕ್ ಫುಡ್‍ಗಳಿಂದ ದೂರವಿರಬೇಕು. ಸಿರಿಧಾನ್ಯ ಪದಾರ್ಥಗಳನ್ನು ಎಂದು ತಿಳಿಸಿದರು. ದೈಹಿಕ ಶಿಕ್ಷಕ ಡಾ. ರಮೇಶ ನಾಯ್ಕ್ ಅವರು, ಹಾಕಿ ಮಾಂತ್ರಿಕ ಧ್ಯಾನಚಂದ್ ಅವರ ಕುರಿತು ಮಾತನಾಡಿದರು. ರಾಜ್ಯಮಟ್ಟದ ಆಟಗಾರ್ತಿ ನಿಮ್ಮಸ್ವಾತಿ ಅವರನ್ನು ಸನ್ಮಾನಿಸಲಾಯಿತು.

---

## ಮಾದಕ ವಸ್ತು ವಿರುದ್ಧ ಜಾಗೃತಿಗೆ ಬೈಕ್ ಜಾಥಾ

• **ಉದಯವಾಹಿನಿ ಚಿತ್ರದುರ್ಗ**

ನಶಾ ಮುಕ್ತ ಭಾರತ ಅಭಿಯಾನದಡಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಬಂಡೀಪುರದಿಂದ ಬೀದರ್‍ವರೆಗೆ ಹಮ್ಮಿಕೊಂಡಿರುವ ಬೈಕ್ ಜಾಥಾವು ಶನಿವಾರ ತುಮಕೂರು ಮಾರ್ಗದಿಂದ ಚಿತ್ರದುರ್ಗ ನಗರಕ್ಕೆ ಆಗಮಿಸಿತು. ನಶಾ ಮುಕ್ತ ಭಾರತ ಅಭಿಯಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಚಿತ್ರದುರ್ಗ ನಗರದ ತುರುವನೂರು ರಸ್ತೆಯಲ್ಲಿರುವ ಪಿವಿಎಸ್ ಕಾಲೇಜು ಆವರಣದಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಲಾಯಿತು.

**ನಶಾ ಮುಕ್ತ ಭಾರತ ಅಭಿಯಾನ**

ಈ ವೇಳೆ ಮಾತನಾಡಿದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಮಾತನಾಡಿ, ಮದ್ಯಪಾನ ಮತ್ತು ಮಾದಕ ವಸ್ತುಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ವತಿಯಿಂದ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಆ.29 ರಿಂದ 31 ರವರೆಗೆ ಬಂಡೀಪುರದಿಂದ ಬೀದರ್‍ವರೆಗೆ ಮೂರು ದಿನಗಳ ಕಾಲ 1 ಸಾವಿರ ಕಿ.ಮೀ ಬೈಕ್ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ಪೊಲೀಸ್ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಎನ್.ಸಿ.ಸಿ ಸಹಯೋಗದೊಂದಿಗೆ ಜಾಥಾ ನಡೆಸಲಾಗುತ್ತಿದ್ದು, 20ಕ್ಕೂ ಹೆಚ್ಚು ಬೈಕ್ ಸವಾರರು ಭಾಗವಹಿಸಿದ್ದು, ಈ ಜಾಥಾ ಕಾರ್ಯಕ್ರಮವು ಮಾರ್ಗದುದ್ದಕ್ಕೂ ರಾಜ್ಯದ ಪ್ರಮುಖ ಜಿಲ್ಲೆಗಳ ಮೂಲಕ ಸಾಗುತ್ತಾ ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

2020ರ ಮಿಸ್ಸಸ್ ಇಂಡಿಯಾ ವಿಜೇತೆ ರೇಣುಕಾ ಮಾತನಾಡಿ, ಯುವಕರು ದುಶ್ಚಟದಿಂದ ದೂರವಿರಬೇಕು ಹಾಗೂ ವ್ಯಾಯಾಮ ಹಾಗೂ ನಡಿಗೆಯಂತಹ ಅಭ್ಯಾಸ ರೂಡಿಸಿಕೊಳ್ಳಬೇಕು ಹಾಗೂ ನೆರೆಹೊರೆಯಲ್ಲಿ ಯಾರಾದರೂ ದುಶ್ಚಟಕ್ಕೆ ಒಳಗಾಗಿದ್ದರೆ ಪೋಲಿಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ಹೇಳಿದರು.


ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‍ಸಿಹೆಚ್ ಅಧಿಕಾರಿ ಡಾ.ಅಭಿನವ್, ಎನ್‍ಎಸ್‍ಎಸ್ ರಾಜ್ಯ ಸಮಾಲೋಚಕ ಪ್ರತಾಪ್ ಲಿಂಗಯ್ಯ, ಪಿವಿಎಸ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಡಾ.ಪಿ.ವಿ. ಶ್ರೀಧರ್ ಮೂರ್ತಿ ಸೇರಿದಂತೆ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಇದ್ದರು.

---

## ಬೆಳೆ ಹಾಳಾದ ರೈತರಿಗೆ ಪರಿಹಾರ ಒದಗಿಸಿ

• **ಉದಯವಾಹಿನಿ ಔರಾದ್**

ಜಿಲ್ಲೆಯಲ್ಲಿ ಸುರಿಯುತ್ತಿರುವ ಭಾರಿ ಮಳೆಯಿಂದ ಜಿಲ್ಲೆಯಾದ್ಯಂತ ಅತಿವೃಷ್ಟಿಯಾಗಿ ಸಂಪೂರ್ಣ ಬೆಳೆ ಹಾನಿ ಆಗಿದ್ದು ರೈತರಿಗೆ ಸರ್ಕಾರ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ತಹಶೀಲ್ದಾರ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪೂರ, ಘಾಳಪ್ಪಾ ಶೆಂಬೆಳ್ಳಿ, ವಿಜಯಕುಮಾರ ಚಟನಾಳಕರ ಸೇರಿದಂತೆ ಇನ್ನಿತರರಿದ್ದರು.


ಉದಯವಾಹಿನಿ ಚಿತ್ರ

---

### ಅಧಿಕಾರಿಗಳು ಮಾಡಿರುವ ಕೆಲಸಗಳೇ ಶಾಶ್ವತವಾಗಿ ಉಳಿಯುತ್ತವೆ, ಕಾಯಕದಲ್ಲಿ ನಿಷ್ಠೆ ಇರಲಿ: ಇಓ ಶಂಕರ ರಾಠೋಡ್

# ತಾಪಂ ಇಓ ಶಂಕರ ರಾಠೋಡ್ ವರ್ಗಾವಣೆ ನಿಮಿತ್ತ ಬೀಳ್ಕೊಡುಗೆ ಸಮಾರಂಭ

• **ಉದಯವಾಹಿನಿ ಚಿಂಚೋಳಿ**

ಶಾಶ್ವತವಾಗಿ ಎನು ಇರಲ್ಲ ಆದರೆ ನಾವು ಮಾಡಿರುವ ಕೆಲಸ ಕಾರ್ಯಗಳೆ ಶಾಶ್ವತವಾಗಿ ಇರುತ್ತವೆ, ಕಾಯಕದಲ್ಲಿ ಕೈಲಾಸ ಕಾಣಬೇಕು,ಕಾಯಕದಲ್ಲಿ ನಿಷ್ಠೆ ಇರಬೇಕು ಎಂದು ವರ್ಗಾವಣೆಯಾದ ತಾಪಂ.ಇಓ ಶಂಕರ ರಾಠೋಡ್ ಹೇಳಿದರು.



ಉದಯವಾಹಿನಿ ಚಿತ್ರ

ಪಟ್ಟಣದ ತಾಪಂ ಸಭಾಂಗಣದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದಿಂದ ಹಮ್ಮಿಕೊಂಡ ತಾಪಂ ಇಓ ಶಂಕರ ರಾಠೋಡ್ ವರ್ಗಾವಣೆ ನಿಮಿತ್ತ ಬಿಳ್ಕೋಡುವ ಹಾಗೂ ನೂತನವಾಗಿ ಆಗಮಿಸಿದ ತಾಪಂ.ಇಓ ಸಂತೋಷ ರಾಠೋಡ್ ಸ್ವಾಗತ ಸಮಾರಂಭದಲ್ಲಿ ಮಾತನಾಡಿದ ಅವರು,ತಾಪಂ ಇಓಯಾಗಿ ಎರಡು ವರ್ಷ ಒಂದು ತಿಂಗಳು ಕೆಲಸ ಮಾಡಿದ್ದು ಎಲ್ಲಾ ಪಿಡಿಓಗಳು,ಕಛೇರಿಯ ಅಧಿಕಾರಿಗಳು ಸಿಬ್ಬಂದಿ ವರ್ಗದವರು ನನ್ನನ್ನು ತುಂಬಾ ಬೆಂಬಲ ನೀಡಿದ್ದೀರಿ ಅದಕ್ಕಾಗಿ ನನಗೆ ಉತ್ತಮ ಕೆಲಸ ಮಾಡಲು ಆಗಿದೆ.

**ಕಾಯಕದಲ್ಲಿ ಕೈಲಾಸ ಕಾಣಬೇಕು**

ಪಿಡಿಓಗಳು ದಿನಾಲು ತಮ್ಮ ತಮ್ಮ ಗ್ರಾ.ಪಂಗಳಿಗೆ ಹೋಗಿ ತಪ್ಪದೆ ಎಲ್ಲರೂ ಪೋನ್ ಕರೆಗಳು ಸ್ವೀಕರ ಮಾಡಿದರೆ ಅರ್ಧ ಸಮಸ್ಯೆಗಳಿಗೆ ಪರಿಹಾರ ದೊರಕುತ್ತದೆ, ತಾಪಂ.10ವರ್ಷದ ಅವಧಿಯಲ್ಲಿ 23ಸಾವಿರ ಮನೆಗಳು ಹಂಚಿಕೆ ಮಾಡಿದ್ದೇವೆ,ಎರಡು ವರ್ಷದಲ್ಲಿ 6900ಮನೆಗಳು ವಿತರಣೆ ಮಾಡಲಾಗಿದ್ದು, 4200 ಕೆಲಸದ ಕ್ರಿಯಾಯೋಜನೆ ಸಿದ್ದಪಡಿಸಿದ್ದೇವೆ,ನರೇಗಾ ಕೆಲಸದಲ್ಲಿ ಜಿಲ್ಲೆಯಲ್ಲಿಯೇ ಚಿಂಚೋಳಿ ತಾಲ್ಲೂಕಾ ಪ್ರಥಮ ಸ್ಥಾನದಲ್ಲಿದೆ. ನಿಸ್ವಾರ್ಥ ಸೇವೆ ಸಲ್ಲಿಸಬೇಕು,ಗ್ರಾ.ಪಂ.ಅಧ್ಯಕ್ಷರ ಪಿಡಿಓಗಳ ಹೊಂದಾಣಿಕೆ ಚನ್ನಾಗಿ ಇದ್ದರೆ ಮಾತ್ರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತದೆ ಎಲ್ಲಾ ಪಿಡಿಓಗಳು ಅಧ್ಯಕ್ಷರ ಜೊತೆ ಒಳ್ಳೆಯ ಹೊಂದಾಣಿಕೆ ಮಾಡಿಕೊಂಡು ಪಂಚಾಯತ್ ಅಭಿವೃದ್ಧಿ ಮಾಡಬೇಕು ಎಂದರು.

ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ಗ್ರೇಡ್2 ತಹಶೀಲ್ದಾರ್ ವೆಂಕಟೇಶ್ ದುಗ್ಗನ್, ಪಿಆರ್‍ಇ ಎಇಇ ಪ್ರವೀಣಕುಮಾರ, ಕ್ಷೇತ್ರ ಶಿಕ್ಷಣಾಧಿಕಾರಿ ವಿ.ಲಕ್ಷ್ಮಯ್ಯ, ಪಿಡಿಓ ಸಂಘದ ಅಧ್ಯಕ್ಷ ಪವನಕುಮಾರ ಮೇತ್ರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರು ಜಗನ್ನಾಥರೆಡ್ಡಿ ಚಟ್ನಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ ವ್ಯವಸ್ಥಾಪಕ ಮಲ್ಲಿಕಾರ್ಜುನ, ಮಲ್ಲಿಕಾರ್ಜುನ ಕಟ್ಟಿಮನಿ,ಎಡಿ ನಾಗೇಂದ್ರಪ್ಪ,ಪ್ರತೀಕ್ಷಾ ರಾಠೋಡ್,ಲಲೀತಾಬಾಯಿ,ರೇವಣಸಿದ್ದಯ್ಯ,ರೀಯಾಜ್ ಅಮೀನ್,ಶಾಂತಪ್ಪ,ಶ್ರೀಧರಗೌಡ,ವಿನೋಧ ಚವ್ಹಾಣ,ವಾಹೇದ್ ಅಲಿ,ಯಲಗೊಂಡ,ರಾಜಶೇಖರ ಹಿತ್ತಲ,ಚನ್ನವೀರಯ್ಯಸ್ವಾಮಿ,ನಾಗೇಂದ್ರಪ್ಪ ಪೂಜಾರಿ, ಪಾಂಡುರಂಗ,ಅಮೃತ,ಶರಣು,ಮಧುರವಾಣಿ, ಬಸವರಾಜ ಛಲವಾಧಿ,ಪ್ರಶಾಂತ,ಚಂದ್ರಕಾಂತ, ಗೋಪಾಲ ಬಾಜೆಪಳ್ಳಿ, ಮಡಿವಾಳಯ್ಯಸ್ವಾಮಿ, ರೇವಣಸಿದ್ದಯ್ಯ ಸ್ವಾಮಿ,ಕಮಾಲದಾಸ,ರಾಜಶೇಖರ, ಸೇರಿದಂತೆ ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಅನೇಕರಿದ್ದರು.

> **ಬಸವಕಲ್ಯಾಣದಲ್ಲಿ 10ವರ್ಷ ಪಿಡಿಓರೂಗಿ ಕೆಲಸ ಮಾಡಿದೇನೆ,ಕಮಲಾಪೂರದಲ್ಲಿ 04ವರ್ಷ ನರೇಗಾ ಯೋಜನೆಯಲ್ಲಿ ಸಹಾಯಕ ನಿರ್ದೇಶಕನಾಗಿ ಕೆಲಸ ಮಾಡಿದ್ದೇನೆ 15ವರ್ಷದ ಅನುಭವವುಳ್ಳವನಾಗಿದ್ದು ನನಗೂ ಸಹ ಎಲ್ಲಾ ಪಿಡಿಓಗಳು ಸಿಬ್ಬಂದಿ ವರ್ಗದವರು ಬೆಂಬಲ ನೀಡಿದರೆ ತಾಲ್ಲೂಕಾ ಅಭಿವೃದ್ಧಿ ಪಡಿಸಲು ಸಾಧ್ಯವಾಗುತ್ತದೆ –ಸಂತೋಷ ಚವ್ಹಾಣ ನೂತನ ತಾಪಂ ಇಓ**

---

## ಸಿಎಂ ವಿರುದ್ಧ ಅವಹೇಳನಕಾರಿ ಸ್ಟೇಟಸ್ ಪಿಡಿಒ ವಿರುದ್ಧ ಎಫ್.ಐ.ಆರ್

• **ಉದಯವಾಹಿನಿ ಕಲಬುರಗಿ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅವಹೇಳನ ಮಾಡುವ ಭಾಷಾ ಶೈಲಿ ಬಳಸಿ ವಾಟ್ಸಾಪ್ ಸ್ಟೇಟಸ್ ಇಟ್ಟ ಆರೋಪದ ಮೇರೆಗೆ ಆಳಂದ ತಾಲ್ಲೂಕಿನ ಸುಂಟನೂರ ಗ್ರಾಮ ಪಂಚಾಯಿತಿ ಪಿಡಿಒ ವಿರುದ್ಧ ಎಫ್.ಐ.ಆರ್ ದಾಖಲಾಗಿದೆ.

ಸುಂಟನೂರು ಗ್ರಾಮ ಪಂಚಾಯಿತಿ ಪಿಡಿಒ ಪ್ರವೀಣ್ ಕುಮಾರ್ ಉಡುಗಿ ವಿರುದ್ಧ ನಿಂಬರ್ಗಾ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರು ತೆರವುಗೊಳಿಸಿ ಸಿದ್ರಾಮುಲ್ಲಾಖಾನ್' ಎಂದು ಅವಹೇಳನಕಾರಿ ಭಾಷೆ ಬಳಸಿದ ಆರೋಪದ ಹಿನ್ನೆಲೆಯಲ್ಲಿ ಸುಂಟನೂರ ಗ್ರಾಮದ ಮಲ್ಲಿಕಾರ್ಜುನ ಪಿಡಿಒ ಪ್ರವೀಣ ವಿರುದ್ಧ ದೂರು ದಾಖಲಿಸಿದ್ದಾರೆ.''

ರೈತರ ಕಷ್ಟ ಹಾಗೂ ನಷ್ಟಗಳಿಗಿಂತ ಮುಸ್ಲಿಂ ಕಾಂಟ್ರಾಕ್ಟರ್ ಮೀಸಲಾತಿಯೇ ಮಹತ್ವದ್ದಾಗಿದೆ. ಸಿದ್ರಮುಲ್ಲನ ಬಜೆಟ್‍ನಲ್ಲಿ ಕೃಷಿಕರಿಗೆ ಬೆಲೆನೇ ಇಲ್ವ?'' ಎಂಬ ವಾಟ್ಸಾಪ್ ಸ್ಟೇಟಸ್ ಎಲ್ಲೆಡೆ ವೈರಲ್ ಆಗಿತ್ತು. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಾಗಿದೆ.

● ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಬರೆದ ರಹಸ್ಯ ಪತ್ರ ಕಾರಣ ಎಂದು ಭಾರತೀಯ ಅಧಿಕಾರಿಯೊಬ್ಬರ ಸ್ಫೋಟಕ ಹೇಳಿಕೆ

# ಕ್ಸಿ ಜಿನ್‌ಪಿಂಗ್ ಅವರ ಆ ರಹಸ್ಯ ಪತ್ರ ಭಾರತ-ಚೀನಾ ದೋಸ್ತಿಗೆ ಮುನ್ನುಡಿ

**ಬೀಜಿಂಗ್:** ಹದಗೆಟ್ಟಿದ್ದ ಭಾರತ-ಚೀನಾ ಸಂಬಂಧ ಸುಧಾರಣೆ ಕಾಣುವಂತಾಗಲು, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಬರೆದ ರಹಸ್ಯ ಪತ್ರ ಕಾರಣ ಎಂದು ಭಾರತೀಯ ಅಧಿಕಾರಿಯೊಬ್ಬರು ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಚೀನಾ ಮತ್ತು ಭಾರತದ ವಿರುದ್ಧ ಸುಂಕ ಸಮರ ಆರಂಭಿಸಿದ ಬಳಿಕ, ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಖಾಸಗಿ ಪತ್ರ ಬರೆದಿದ್ದರು. ಈ ಪತ್ರದ ಕುರಿತು ಪ್ರಧಾನಿ ಮೋದಿ ಅವರಿಗೆ ಮಾಹಿತಿ ನೀಡಿದ ಬಳಿಕ, ಭಾರತ-ಚೀನಾ ನಡುವೆ ಸಂಪರ್ಕ ಸಾಧ್ಯವಾಯಿತು ಎಂದು ಹೆಸರು ಹೇಳಲು ಇಚ್ಛಿಸದ ಭಾರತೀಯ ಅಧಿಕಾರಿಯ ಹೇಳಿಕೆಯನ್ನು ಉಲ್ಲೇಖಿಸಿ ಬ್ಲೂಮ್‌ಬರ್ಗ್ ವರದಿ ಮಾಡಿದೆ.

ಚೀನಾದೊಂದಿಗಿನ ಸಂಬಂಧಗಳನ್ನು ಮರುಸ್ಥಾಪಿಸಲು ಭಾರತ ಒಲವು ತೋರಲು, ಕ್ಸಿ ಜಿನ್‌ಪಿಂಗ್ ಅವರು ಬರೆದ ಆ ರಹಸ್ಯ ಪತ್ರವೇ ಮುನ್ನುಡಿ ಬರೆಯಿತು ಎಂದು ಭಾರತ ಸರ್ಕಾರದ ಉನ್ನತ ಅಧಿಕಾರಿ ಹೇಳಿದ್ದಾಗಿ ಬ್ಲೂಮ್‌ಬರ್ಗ್ ಸ್ಪಷ್ಟಪಡಿಸಿದೆ. ಈ ಪತ್ರದಲ್ಲಿ ಕ್ಸಿ ಜಿನ್‌ಪಿಂಗ್ ಅವರು ಚೀನಾದ ಹಿತಾಸಕ್ತಿಗಳಿಗೆ ಹಾನಿಯುಂಟುಮಾಡುವ ಯಾವುದೇ ಸಂಭಾವ್ಯ ಅಮೆರಿಕ-ಭಾರತ ಒಪ್ಪಂದಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರು ಎಂದು ಬ್ಲೂಮ್‌ಬರ್ಗ್ ವರದಿ ಉಲ್ಲೇಖಿಸಿದೆ.

ಈ ಹಿನ್ನೆಲೆಯಲ್ಲಿ ಡೊನಾಲ್ಡ್ ಟ್ರಂಪ್ ಅವರು ನಿರಂತರವಾಗಿ ಭಾರತಕ್ಕೆ ಸುಂಕ ಬೆದರಿಕೆಗಳನ್ನು ಹಾಕತೊಡಗಿದರು. ಆದರೆ ಈ ಬೆದರಿಕೆಗಳಿಗೆ ಕ್ಯಾರೆ ಎನ್ನದ ಭಾರತ, ಪರ್ಯಾಯ ಮಾರ್ಗಗಳ ಶೋಧಕಾರ್ಯದಲ್ಲಿ ನಿರತವಾಯಿತು. ಇದೇ ಸಂದರ್ಭದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರಹಸ್ಯ ಪತ್ರ ಬರೆದು, ದ್ವಿಪಕ್ಷೀಯ ಸಂಬಂಧ ಸುಧಾರಣೆಗೆ ಮನವಿ ಮಾಡಿದ್ದರು.




- ಹದಗೆಟ್ಟಿದ್ದ ಸಂಬಂಧ ಸುಧಾರಣೆಗೆ ಭಾರತ-ಚೀನಾ ಮುಂದಾಗಿದ್ದೇಗೆ?
- ಭಾರತಕ್ಕೆ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಬರೆದಿದ್ದ ರಹಸ್ಯ ಪತ್ರದಲ್ಲೇನಿತ್ತು?
- ಭಾರತ-ಚೀನಾ ಸಂಬಂಧ ಸುಧಾರಣೆ ಬಗ್ಗೆ ಸ್ಫೋಟಕ ಮಾಹಿತಿ ಬಹಿರಂಗ.

ಚೀನಾದ ಮನವಿಯನ್ನು ಗಂಭೀರವಾಗಿ ಪರಿಗಣಿಸಿದ ಭಾರತ, 2020ರ ಗಲ್ವಾನ್ ಗಡಿ ಘರ್ಷಣೆ ಕಾರಣಕ್ಕೆ ಉದ್ಭವವಾಗಿದ್ದ ವೈರತ್ವವನ್ನು ಮೀರಿ ಚಲಿಸಲು ಪ್ರಯತ್ನಗಳನ್ನು ಆರಂಭಿಸಿತು. ಚೀನಾ ಕೂಡ ಇದಕ್ಕೆ ಪೂರ್ಣ ಸಹಕಾರ ನೀಡಿತು. ಇದರಿಂದಾಗಿ ದೀರ್ಘಕಾಲದ ಗಡಿ ವಿವಾದಗಳ ಪರಿಹಾರಕ್ಕೆ ಮಾತುಕತೆಗಳನ್ನು ನವೀಕರಿಸಲು ಸಾಧ್ಯವಾಯಿತು.

ಇದೀಗ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಶೃಂಗಸಭೆಯಲ್ಲಿ ಭಾಗವಹಿಸಲು, ಪ್ರಧಾನಿ ಮೋದಿ ಚೀನಾ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿ ವೇಳೆ ಪ್ರಧಾನಿ ಮೋದಿ ಅವರು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರನ್ನು ನೇರವಾಗಿ ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಈ ಭೇಟಿ ಉಭಯ ರಾಷ್ಟ್ರಗಳನ್ನು ಮತ್ತಷ್ಟು ಹತ್ತಿರಕ್ಕೆ ತರಲಿದೆ ಎಂದು ನಿರೀಕ್ಷಿಸಲಾಗಿದೆ.

## ಸುಧಾರಣೆ ಕಂಡ ಸಂಬಂಧ

ಈ ಎಲ್ಲಾ ಕ್ಷಿಪ್ರಗತಿಯ ಬೆಳವಣಿಗೆಗಳು ಭಾರತ ಮತ್ತು ಚೀನಾ ನಡುವಿನ ದ್ವಿಪಕ್ಷೀಯ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಮುನ್ನುಡಿ ಬರೆಯಿತು. ಅದರ ಭಾಗವಾಗಿ ಭಾರತ ಮತ್ತು ಚೀನಾ ನಡುವಿನ ನೇರ ಪ್ರಯಾಣಿಕ ವಿಮಾನ ಸೇವೆ ಪುನರಾರಂಭ, ಪ್ರವಾಸಿ ವೀಸಾ ವಿತರಣೆಯಂತಹ ಕ್ರಮಗಳು ಜಾರಿಗೆ ಬಂದವು. ಅಷ್ಟೇ ಅಲ್ಲದೇ ಬೀಜಿಂಗ್ ಈ ಹಿಂದೆ ನವದೆಹಲಿ ಮೇಲೆ ಹೇರಿದ್ದ ಯೂರಿಯಾ ಸಾಗಣೆಯ ಮೇಲಿನ ನಿರ್ಬಂಧಗಳನ್ನು ಕೂಡ ಸಡಿಲಗೊಳಿಸಿದೆ.

**ಸ್ಫೋಟಕ ವರದಿ ಡಿಕೋಡ್**

ಕಳೆದ ವರ್ಷ ರಷ್ಯಾದ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯಲ್ಲಿ, ಪ್ರಧಾನಿ ಮೋದಿ ಮತ್ತು ಕ್ಸಿ ಜಿನ್‌ಪಿಂಗ ಕೊನೆಯ ಬಾರಿಗೆ ವೇದಿಕೆ ಹಂಚಿಕೊಂಡಿದ್ದರು. ಅಲ್ಲದೇ ಈಗ ಗಲ್ವಾನ್ ಘರ್ಷಣೆಯ ಬಳಿಕ ಇದೇ ಮೊದಲ ಬಾರಿಗೆ ಪ್ರಧಾನಿ ಮೋದಿ ಚೀನೀ ನೆಲಕ್ಕೆ ಕಾಲಿಡುತ್ತಿದ್ದಾರೆ. ಚೀನಾದ ಟಿಯಾಂಜಿನ್ ನಗರದಲ್ಲಿನಡೆಯುತ್ತಿರುವ ಎಸ್‌ಸಿಒ ಶೃಂಗಸಭೆ, 2001ರಲ್ಲಿ ಒಕ್ಕೂಟ ಸ್ಥಾಪನೆಯಾದ ಬಳಿಕ ನಡೆಯುತ್ತಿರುವ ಅತ್ಯಂತ ದೊಡ್ಡ ಸಭೆಯಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕ ಸಮರದಿಂದ ಕೆರಳಿರುವ ಬ್ರಿಕ್ಸ್ ಒಕ್ಕೂಟದ ರಾಷ್ಟ್ರಗಳು ಮತ್ತಷ್ಟು ಒಗ್ಗಟ್ಟನ್ನು ಬಯಸುತ್ತಿವೆ. ಚೀನಾದಲ್ಲಿ ನಡೆಯುತ್ತಿರುವ ಎಸ್‌ಸಿಒ ಶೃಂಗಸಭೆ ಇದಕ್ಕೆ ಅವಕಾಶ ಒದಗಿಸಿದ್ದು, ಅಮೆರಿಕ ಹೊರತಾದ ಜಾಗತಿಕ ಕ್ರಮ ರಚನೆ ಪ್ರಯತ್ನಗಳು ಆರಂಭವಾಗಲಿವೆ. ಭಾರತ-ಚೀನಾ ನಡುವಿನ ಸಂಬಂಧ ಸುಧಾರಣೆ ಮಹತ್ವದ ಪಾತ್ರ ನಿರ್ವಹಿಸಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

## ಮಾತುಕತೆ ಆರಂಭವಾಗಿದ್ದು ಹೇಗೆ?

**ಬ್ಲೂಮ್‌ಬರ್ಗ್ ವರದಿಯಲ್ಲಿ ಉಲ್ಲೇಖಿಸಿರುವಂತೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದ ಸರಕುಗಳ ಮೇಲೆ ಹೆಚ್ಚುವರಿ ಸುಂಕ ಹೇರಿದ ಬಳಿಕ, ಭಾರತ ತನ್ನ ಆರ್ಥಿಕ ಸ್ಥಿರತೆಗಾಗಿ ಪರ್ಯಾಯ ಮಾರ್ಗಗಳನ್ನು ಹುಡುಕಲಾರಂಭಿಸಿತು. ಈ ಮಧ್ಯೆ ಜಮ್ಮು ಮತ್ತು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ, ಭಾರತ ಮತ್ತು ಪಾಕಿಸ್ತಾನ ನಡುವೆ ಸಂಘರ್ಷಕ್ಕೆ ಕಾರಣವಾಯಿತು. ಉಭಯ ರಾಷ್ಟ್ರಗಳ ನಡುವೆ ನಡೆದ ಕದನ ವಿರಾಮ ಒಪ್ಪಂದದ ಕ್ರೆಡಿಟ್ ಪಡೆಯಲು ಮುಂದಾದ ಟ್ರಂಪ್, ಭಾರತ ಇದಕ್ಕೆ ಅವಕಾಶ ಕೊಡದ ಹಿನ್ನೆಲೆಯಲ್ಲಿ ಮುನಿಸಿಕೊಂಡರು.**

# ಭಾರತ ವಿರೋಧಿ ಅಮೆರಿಕ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ ಯಹೂದಿಗಳು

**ನ್ಯೂಯಾರ್ಕ್:** ರಷ್ಯಾ ತೈಲ ಖರೀದಿಗೆ ಭಾರತವನ್ನು ಟೀಕಿಸಿದ್ದಕ್ಕಾಗಿ ಅಮೆರಿಕದ ಅಧಿಕಾರಿಗಳನ್ನು ಅಮೆರಿಕದ ಯಹೂದಿ ವಕಾಲತ್ತು ಗುಂಪು ತರಾಟೆಗೆ ತೆಗೆದುಕೊಂಡಿದೆ. ರಷ್ಯಾ-ಉಕ್ರೇನ್ ಸಂಘರ್ಷಕ್ಕೆ ನವದೆಹಲಿ ಜವಾಬ್ದಾರಿಯಲ್ಲ ಎಂದು ಪ್ರತಿಪಾದಿಸಿರುವ ಗುಂಪು ಅಮೆರಿಕ-ಭಾರತ ಸಂಬಂಧಗಳನ್ನು ಮರುಹೊಂದಿಸಲು ಕರೆ ನೀಡಿದೆ.

ಟ್ರಂಪ್ ಆಡಳಿತ ಸದಸ್ಯರು ಇತ್ತೀಚೆಗೆ ಮಾಸ್ಕೋದಿಂದ ಇಂಧನ ಖರೀದಿಸಿದ್ದಕ್ಕಾಗಿ ಭಾರತದ ವಿರುದ್ಧ ತಮ್ಮ ಟೀಕೆಗಳನ್ನು ಹೆಚ್ಚಿಸಿದ್ದಾರೆ, ಇದು ಉಕ್ರೇನ್ ಸಂಘರ್ಷದಲ್ಲಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಯುದ್ಧ ಯಂತ್ರಕ್ಕೆ ನಿಧಿ ನೀಡುತ್ತಿದೆ ಎಂದು ಹೇಳಿದ್ದಾರೆ.

ಶ್ವೇತಭವನದ ವ್ಯಾಪಾರ ಸಲಹೆಗಾರ ಪೀಟರ್ ನವರೊ ಸಂಘರ್ಷವನ್ನು ಮೋದಿಯ ಯುದ್ಧ ಎಂದು ಕರೆದ ನಂತರ ಮತ್ತು ಶಾಂತಿಯ ಹಾದಿ ಭಾಗಶಃ ನವದೆಹಲಿಯ ಮೂಲಕವೇ ಸಾಗುತ್ತದೆ ಎಂದು ಹೇಳಿದ ನಂತರ ಅಮೇರಿಕನ್ ಯಹೂದಿ ಸಮಿತಿಯ ಈ ಹೇಳಿಕೆಗಳು ಬಂದಿವೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಯಹೂದಿ ವಕಾಲತ್ತು ಗುಂಪು ಅಮೆರಿಕದ ಅಧಿಕಾರಿಗಳಿಂದ ಭಾರತದ ಮೇಲೆ ನಡೆಯುತ್ತಿರುವ ದಾಳಿಗಳ ಕೋರಸ್‌ನಿಂದ ಅದು ನಿಗೂಢ ಮತ್ತು ಆಳವಾಗಿ ತೊಂದರೆಗೀಡಾಗಿದೆ ಎಂದು ಹೇಳಿದೆ ಮತ್ತು ನವರೊ ಅವರ ಹೇಳಿಕೆಗಳನ್ನು ಅಸಹ್ಯ ಆರೋಪ ಎಂದು ಕರೆದಿದೆ. ಇಂಧನಕ್ಕಾಗಿ ಹಸಿದ ಭಾರತವು ರಷ್ಯಾದ ತೈಲವನ್ನು ಅವಲಂಬಿಸಿರುವುದಕ್ಕೆ ನಾವು ವಿಷಾದಿಸುತ್ತೇವೆ.


ಆದರೆ ಪುಟಿನ್ ಅವರ ಯುದ್ಧ ಅಪರಾಧಗಳಿಗೆ ಭಾರತ ಜವಾಬ್ದಾರನಲ್ಲ, ಇದು ಸಹೋದರಿ ಪ್ರಜಾಪ್ರಭುತ್ವ ಮತ್ತು ಯುನೈಟೆಡ್ ಸ್ಟೇಟ್ಸ್‌ನ ಹೆಚ್ಚುತ್ತಿರುವ ಪ್ರಮುಖ ಕಾರ್ಯತಂತ್ರದ ಪಾಲುದಾರ ಮತ್ತು ಮಹಾಶಕ್ತಿ ಸ್ಪರ್ಧೆಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ಅದು ಹೇಳಿದೆ. ಈ ಪ್ರಮುಖ ಸಂಬಂಧವನ್ನು ಮರುಸ್ಥಾಪಿಸುವ ಸಮಯ ಇದು ಎಂದು ಅದು ಸೇರಿಸಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವ್ಯಾಪಾರ ಮತ್ತು ಸುಂಕಗಳ ಕುರಿತಾದ ನೀತಿಗಳಿಂದಾಗಿ ವಾಷಿಂಗ್ಟನ್ ಮತ್ತು ನವದೆಹಲಿ ನಡುವಿನ ಸಂಬಂಧಗಳಲ್ಲಿ ಪ್ರಮುಖ ಕುಸಿತದ ನಂತರ ಟ್ರಂಪ್ ಆಡಳಿತದ ವ್ಯಾಪಾರ ಮತ್ತು ಉತ್ಪಾದನೆಯ ಹಿರಿಯ ಸಲಹೆಗಾರ ನವರೊ ಕಳೆದ ಕೆಲವು ದಿನಗಳಿಂದ ಭಾರತವನ್ನು ನಿರಂತರವಾಗಿ ಗುರಿಯಾಗಿಸಿಕೊಂಡಿದ್ದಾರೆ.



**ಟ್ರಂಪ್ ಭಾರತದ ಮೇಲೆ 25 ಪ್ರತಿಶತ ಪರಸ್ಪರ ಸುಂಕಗಳನ್ನು ಮತ್ತು ದೆಹಲಿಯ ರಷ್ಯಾದ ತೈಲ ಖರೀದಿಗೆ ಹೆಚ್ಚುವರಿಯಾಗಿ 25 ಪ್ರತಿಶತವನ್ನು ವಿಧಿಸಿದ್ದಾರೆ. ಭಾರತ ತನ್ನ ಮೇಲೆ ವಿಧಿಸಲಾದ ಸುಂಕಗಳನ್ನು ಅಸಮರ್ಥನೀಯ ಮತ್ತು ಅಸಮಂಜಸ ಎಂದು ಕರೆದಿದೆ. ಯಾವುದೇ ಪ್ರಮುಖ ಆರ್ಥಿಕತೆಯ, ಭಾರತವು ತನ್ನ ರಾಷ್ಟ್ರೀಯ ಹಿತಾಸಕ್ತಿಗಳು ಮತ್ತು ಆರ್ಥಿಕ ಭದ್ರತೆಯನ್ನು ಕಾಪಾಡಿಕೊಳ್ಳಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತದೆ. -ಭಾರತ**

# ಚಿಕಿತ್ಸೆ ನೀಡುತ್ತಿದ್ದ ವೈದ್ಯರೇ ಹೃದಯಾಘಾತಕ್ಕೆ ಬಲಿ

**ಚೆನ್ನೈ:** ಹೃದ್ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದ ವೈದ್ಯರೇ ಹೃದಯಾಘಾತಕ್ಕೆ ಬಲಿಯಾಗಿರುವ ಘಟನೆ ತಮಿಳುನಾಡಿನಲ್ಲಿ ನಡೆದಿದೆ. 39 ವರ್ಷದ ಹೃದಯ ಶಸ್ತ್ರಚಿಕಿತ್ಸಕರೊಬ್ಬರು ಹೃದಯಾಘಾತದಿಂದ ಕುಸಿದು ಬಿದ್ದು ಚೆನ್ನೈನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಸಾವನ್ನಪ್ಪಿದ್ದಾರೆ. ಇಲ್ಲಿನ ಸವಿತಾ ವೈದ್ಯಕೀಯ ಕಾಲೇಜಿನ ಕನ್ಸಲ್ಟೆಂಟ್ ಹೃದಯ ಶಸ್ತ್ರಚಿಕಿತ್ಸಕ ಡಾ. ಗ್ರಾಡ್ಲಿನ್ ರಾಯ್ ಆಸ್ಪತ್ರೆಯಲ್ಲಿ ಕುಸಿದು ಬಿದ್ದರು. ತಕ್ಷಣ ಹೈದರಾಬಾದ್ ಮೂಲದ ನರವಿಜ್ಞಾನಿ ಡಾ. ಸುಧೀರ್ ಕುಮಾರ್, ಡಾ. ರಾಯ್ ಮತ್ತವರ ಸಹೋದ್ಯೋಗಿಗಳು ಅವರನ್ನು ಉಳಿಸಲು ಎಲ್ಲವನ್ನೂ ಪ್ರಯತ್ನಿಸಿದರು, ಆದರೆ ಸಾಧ್ಯವಾಗಲಿಲ್ಲ ಎಂದು ವರದಿಯಾಗಿದೆ.



ಸಿಪಿಆರ್, ಸ್ಟೆಂಟಿಂಗ್‌ನೊಂದಿಗೆ ತುರ್ತು ಆಂಜಿಯೋಪ್ಲಾಸ್ಟಿ, ಇಂಟ್ರಾ-ಮಹಾಪಧಮನಿಯ ಬಲೂನ್ ಪಂಪ್, ಇಸಿಎಂಒ ಕೂಡ ಮಾಡಲಾಯಿತು. ಆದರೆ 100% ಎಡ ಮುಖ್ಯ ಅಪಧಮನಿಯ ಅಡಚಣೆಯಿಂದಾಗಿ ಭಾರಿ ಹೃದಯ ಸ್ತಂಭನದಿಂದ ಉಂಟಾದ ಹಾನಿಯನ್ನು ಯಾವುದೂ ಹಿಮ್ಮೆಟ್ಟಿಸಲು ಸಾಧ್ಯವಾಗಲಿಲ್ಲ ಎಂದು ಡಾ. ಕುಮಾರ್ ಎಕ್ಸ್‌ನಲ್ಲಿ ಬರೆದಿದ್ದಾರೆ. ಡಾ. ರಾಯ್ ಅವರ ಸಾವು ಒಂದು ಪ್ರತ್ಯೇಕ ಘಟನೆಯಲ್ಲ ಮತ್ತು 30 ಮತ್ತು 40 ರ ಹರೆಯದ ಯುವ ವೈದ್ಯರು ಹಠಾತ್ ಹೃದಯಾಘಾತದಿಂದ ಬಳಲುತ್ತಿರುವ ಆತಂಕಕಾರಿ ಪ್ರವೃತ್ತಿ ಇದೆ ಎಂದು ವೈದ್ಯರು ಗಮನಸೆಳೆದರು. ದೀರ್ಘಾವಧಿಯ ಕೆಲಸದ ಸಮಯವು ಅಂತಹ ಸಾವುಗಳಿಗೆ ಪ್ರಮುಖ ಕಾರಣಗಳಲ್ಲಿ ಒಂದಾಗಿದೆ ಎಂದು ತಜ್ಞರು ಹೇಳಿದ್ದಾರೆ. ವೈದ್ಯರು ಸಾಮಾನ್ಯವಾಗಿ ದಿನಕ್ಕೆ 12-18 ಗಂಟೆಗಳ ಕಾಲ ಕೆಲಸ ಮಾಡುತ್ತಾರೆ, ಕೆಲವೊಮ್ಮೆ ಒಂದೇ ಪಾಳಿಯಲ್ಲಿ 24 ಗಂಟೆಗಳಿಗಿಂತ ಹೆಚ್ಚು ಕಾಲ ಕೆಲಸ ಮಾಡುತ್ತಾರೆ. ತೀವ್ರವಾದ ಒತ್ತಡವೂ ಇರುತ್ತದೆ.

ಜೀವನ್ಮರಣ ನಿರ್ಧಾರಗಳ ನಿರಂತರ ಒತ್ತಡ, ರೋಗಿಯ ಹೆಚ್ಚಿನ ನಿರೀಕ್ಷೆಗಳು ಮತ್ತು ವೈದ್ಯಕೀಯ-ಕಾನೂನು ಕಾಳಜಿಗಳು ಇದಕ್ಕೆ ಕಾರಣವಾಗುತ್ತವೆ. ಅನಾರೋಗ್ಯಕರ ಜೀವನಶೈಲಿ, ಅನಿಯಮಿತ ಊಟ, ದೈಹಿಕ ವ್ಯಾಯಾಮದ ಕೊರತೆ ಮತ್ತು ನಿರ್ಲಕ್ಷ್ಯದ ಆರೋಗ್ಯ ತಪಾಸಣೆಗಳು ಇತರ ಕಾರಣಗಳಾಗಿವೆ. ಖಿನ್ನತೆ ಮತ್ತು ಆತಂಕ ಸೇರಿದಂತೆ ವೃತ್ತಿಯ ಮಾನಸಿಕ ಒತ್ತಡವನ್ನು ಸಹ ಹೆಚ್ಚಾಗಿ ನಿರ್ಲಕ್ಷಿಸಲಾಗುತ್ತದೆ. ಡಾ. ರಾಯ್ ಅವರು ಪತ್ನಿ ಮತ್ತು ಚಿಕ್ಕ ಮಗುವನ್ನು ಅಗಲಿದ್ದಾರೆ.

# 33 ಬಾಂಗ್ಲಾ ಪ್ರಜೆಗಳನ್ನು ಹೊರದಬ್ಬಿದ ಅಸ್ಸಾಂ

**ಗುವಾಹಟಿ:** ಅಸ್ಸಾಂ ಪೊಲೀಸರು 33 ಹೊಸ ನುಸುಳುಕೋರರನ್ನು ಬಾಂಗ್ಲಾದೇಶಕ್ಕೆ ಹಿಂದಕ್ಕೆ ತಳ್ಳಿದ್ದಾರೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ. 33 ಹೊಸ ನುಸುಳುಕೋರರನ್ನು ಬಾಂಗ್ಲಾದೇಶಕ್ಕೆ ಹಿಂದಕ್ಕೆ ತಳ್ಳಲಾಗಿದೆ ಎಂದು ಶರ್ಮಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ನಮ್ಮ ಕಠಿಣ ಪ್ರಯತ್ನಗಳು ಮುಂದುವರಿಯುತ್ತವೆ ಮತ್ತು ಮುಂಬರುವ ದಿನಗಳಲ್ಲಿ ಮತ್ತಷ್ಟು ತೀವ್ರಗೊಳ್ಳುತ್ತವೆ ಎಂದು ಮುಖ್ಯಮಂತ್ರಿ ಎಚ್ಚರಿಸಿದ್ದಾರೆ. ಆದಾಗ್ಯೂ, ಅವರನ್ನು ಯಾವ ವಲಯದಿಂದ ಹಿಂದಕ್ಕೆ ತಳ್ಳಲಾಗಿದೆ ಎಂದು ಅವರು ಉಲ್ಲೇಖಿಸಲಿಲ್ಲ. ಆದರೆ ಹೆಚ್ಚಿನ ಒಳನುಸುಳುವವರನ್ನು ಶ್ರೀಭೂಮಿ ಜಿಲ್ಲೆಯ ಭಾರತ-ಬಾಂಗ್ಲಾದೇಶ ಗಡಿಯ ಮೂಲಕ ಹಿಂದಕ್ಕೆ ಕಳುಹಿಸಲಾಗುತ್ತಿದೆ.

ಅಸ್ಸಾಂ ಪೊಲೀಸರು ನನ್ನನ್ನು ಮನೆಗೆ, ನಾನು ಸೇರಿರುವ ಸ್ಥಳಕ್ಕೆ ಕರೆದೊಯ್ಯುತ್ತಾರೆ ಎಂದು ಅವರು ಹೇಳಿದರು. ಸಈ ವಾರದ ಆರಂಭದಲ್ಲಿ ಪೊಲೀಸರು ಪ್ರತಿ ವಾರ 70-100 ಒಳನುಸುಳುವವರನ್ನು ಬಾಂಗ್ಲಾದೇಶಕ್ಕೆ ಹಿಂದಕ್ಕೆ ತಳ್ಳುತ್ತಿದ್ದಾರೆ ಎಂದು ಸಿಎಂ ಹೇಳಿದ್ದರು. ಇತ್ತೀಚಿನ ತಿಂಗಳುಗಳಲ್ಲಿ 450 ಕ್ಕೂ ಹೆಚ್ಚು ಅಕ್ರಮ ಒಳನುಸುಳುವವರನ್ನು ಹಿಂದಕ್ಕೆ ತಳ್ಳಲಾಗಿದೆ ಎಂದು ಹೇಳಲಾಗಿದೆ. ರಾಜ್ಯ ಸರ್ಕಾರ ಒಳನುಸುಳುವಿಕೆ ಮುಕ್ತ ಅಸ್ಸಾಂ ಬದ್ಧವಾಗಿದೆ ಎಂದು ಶರ್ಮಾ ಹೇಳಿಕೊಂಡಿದ್ದಾರೆ.

ಕಳೆದ ವರ್ಷ ಬಾಂಗ್ಲಾದೇಶದಲ್ಲಿ ಗಲಭೆಗಳು ಪ್ರಾರಂಭವಾದಾಗಿನಿಂದ ಈಶಾನ್ಯದಲ್ಲಿ 1,885 ಕಿಮೀ ಉದ್ದದ ಭಾರತ-ಬಾಂಗ್ಲಾದೇಶ ಗಡಿಯಲ್ಲಿ ಬಿಎಸ್‌ಎಫ್ ತನ್ನ ಜಾಗರೂಕತೆಯನ್ನು ತೀವ್ರಗೊಳಿಸಿದೆ. ಯಾವುದೇ ವ್ಯಕ್ತಿ ಅಕ್ರಮವಾಗಿ ರಾಜ್ಯಕ್ಕೆ ಪ್ರವೇಶಿಸದಂತೆ ಮತ್ತು ಯಾವುದೇ ಮಾನ್ಯ ಪೌರತ್ವ ದಾಖಲೆಗಳಿಲ್ಲದ ಯಾವುದೇ ವ್ಯಕ್ತಿಯನ್ನು ಹಿಂದಕ್ಕೆ ತಳ್ಳದಂತೆ ಖಚಿತಪಡಿಸಿಕೊಳ್ಳಲು ಅಸ್ಸಾಂ ಪೊಲೀಸರು ಭಾರತ-ಬಾಂಗ್ಲಾದೇಶ ಗಡಿಯಲ್ಲಿ ಹೈ ಅಲರ್ಟ್ ಅನ್ನು ಕಾಯ್ದುಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಕ್ವಿಂಟಾಲ್‌ಗೆ 2,545 ರೂ. ಬೆಲೆಗೆ ರೈತರಿಂದ ಭತ್ತ ಖರೀದಿಸಲು ಮುಂದಾದ ತಮಿಳುನಾಡು ಸರ್ಕಾರ

**ಚೆನ್ನೈ:** ತಮಿಳುನಾಡು ಸರ್ಕಾರವು ಕುರುವೈ (ಖಾರಿಫ್) ಹಂಗಾಮಿಗೆ ರೈತರಿಂದ ಕ್ವಿಂಟಾಲ್‌ಗೆ 2,545 ರೂ.ಗಳ ಹೆಚ್ಚಿನ ಬೆಲೆಗೆ ಭತ್ತವನ್ನು ಖರೀದಿಸಲಿದೆ ಎಂದು ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಆರ್. ಸಕ್ಕರಪಾಣಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರ ನಿರ್ದೇಶನದ ಮೇರೆಗೆ 2025-26ರ ಖರೀದಿ ಹಂಗಾಮಿನಲ್ಲಿ ಸೆಪ್ಟೆಂಬರ್ 1 ರಿಂದ ಗ್ರೇಡ್ ಎ ಭತ್ತಕ್ಕೆ ಕ್ವಿಂಟಾಲ್‌ಗೆ 2,545 ರೂ.ಗಳು ಮತ್ತು ಸಾಮಾನ್ಯ ಭತ್ತದ ವಿಧದ ಕ್ವಿಂಟಾಲ್‌ಗೆ 2,500 ರೂ.ಗಳಂತೆ ಭತ್ತವನ್ನು ಖರೀದಿಸಲಾಗಿದೆ ಎಂದು ಅವರು ಹೇಳಿದರು.

ಈ (ಮೊತ್ತ) ರಾಜ್ಯ ಸರ್ಕಾರದ ಪ್ರೋತ್ಸಾಹಧನವನ್ನು ಆಯಾ ಭತ್ತದ ತಳಿಗಳಿಗೆ ಕ್ವಿಂಟಾಲ್‌ಗೆ 156 ರೂ.ಗಳು ಮತ್ತು 131 ರೂ.ಗಳನ್ನು ಒಳಗೊಂಡಿದೆ. ಡಿಎಂಕೆ ಚುನಾವಣಾ ಪ್ರಣಾಳಿಕೆಯಲ್ಲಿ (2021 ರಲ್ಲಿ) ಪ್ರತಿ ಕ್ವಿಂಟಾಲ್ ಭತ್ತಕ್ಕೆ 2,500 ರೂ.ಗಳನ್ನು ನೀಡುವುದಾಗಿ ನೀಡಿದ್ದ ಭರವಸೆಯನ್ನು ನಾವು ಈಡೇರಿಸಿದ್ದೇವೆ ಎಂದು ಘೋಷಿಸಲು ನನಗೆ ಹೆಮ್ಮೆಯಾಗುತ್ತಿದೆ ಎಂದು ಸಕ್ಕರಪಾಣಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.



**ತಮಿಳುನಾಡಿನಲ್ಲಿ ದಾಖಲೆ ನಿರ್ಮಾಣ**

ಗ್ರೇಡ್ ಎ ಬೆಳೆಗೆ 2,545 ರೂ.ಗಳ ಬೆಲೆಯು ಖಾರಿಫ್ ಮಾರುಕಟ್ಟೆ ಋತುವಿಗೆ (ಕೆಎಂಎಸ್) ಕೇಂದ್ರವು ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ರೂ. 2,389 ಮತ್ತು ಸಾಮಾನ್ಯ ತಳಿಗೆ ರೂ. 2,500 ಎಂಎಸ್‌ಪಿಯನ್ನು ಒಳಗೊಂಡಿದೆ. ಸ್ಟಾಲಿನ್ ಅವರ 51 ತಿಂಗಳ ಆಳ್ವಿಕೆಯಲ್ಲಿ, ಇಲ್ಲಿಯವರೆಗೆ ಒಟ್ಟು 1.85 ಕೋಟಿ ಮೆಟ್ರಿಕ್ ಟನ್ ಭತ್ತವನ್ನು ಖರೀದಿಸಲಾಗಿದೆ ಮತ್ತು ರೈತರಿಗೆ ರೂ. 44,777.83 ಕೋಟಿ ಒದಗಿಸಲಾಗಿದೆ, ಹೀಗಾಗಿ ತಮಿಳುನಾಡಿನಲ್ಲಿ ದಾಖಲೆ ನಿರ್ಮಿಸಲಾಗಿದೆ.

ಇದರಲ್ಲಿ ರಾಜ್ಯ ಸರ್ಕಾರವು 2,031.29 ಕೋಟಿ ರೂ.ಗಳನ್ನು ಪ್ರೋತ್ಸಾಹ ಧನವಾಗಿ ನೀಡಿದೆ ಎಂದು ಸಚಿವರು ಹೇಳಿದರು. ಒಂದು ಧಾನ್ಯದ ಅಕ್ಕಿಯೂ ವ್ಯರ್ಥವಾಗಬಾರದು ಎಂದು ಹೇಳಿದ ಸಕ್ಕರಪಾಣಿ, ಅಕ್ಕಿಯನ್ನು ತೆರೆದ ಸ್ಥಳದಲ್ಲಿ ಇಡದೆ ಸಂಗ್ರಹಿಸಲು ಆಧುನಿಕ ಅಕ್ಕಿ ಸಂಗ್ರಹಣಾ ಸೌಲಭ್ಯಗಳನ್ನು ನಿರ್ಮಿಸಲು ಮುಖ್ಯಮಂತ್ರಿ ಆದೇಶಿಸಿದ್ದಾರೆ ಎಂದು ಹೇಳಿದರು. ಈ ಉದ್ದೇಶಕ್ಕಾಗಿ ಸೂಕ್ತ ಹಣವನ್ನು ಹಂಚಿಕೆ ಮಾಡಲಾಗಿದೆ. ಈ ವರ್ಷ, ಅಭೂತಪೂರ್ವವಾಗಿ ಹೆಚ್ಚಿನ ಭತ್ತದ ಕೊಯ್ಲು ಮತ್ತು ಆಗಾಗ್ಗೆ ಮಳೆಯ ಹೊರತಾಗಿಯೂ, ಭತ್ತದ ಕಾಳುಗಳು ಮಳೆಯಲ್ಲಿ ನೆನೆಯದಂತೆ ಉಳಿಸಲಾಗಿದೆ. ಅದೇ ರೀತಿ, ಮುಂಬರುವ 2025-26ರ ಹಂಗಾಮಿಗೆ ಸೆಪ್ಟೆಂಬರ್ ಮೊದಲ ದಿನದಿಂದ ಭತ್ತ ಖರೀದಿಯನ್ನು ಪ್ರಾರಂಭಿಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಅವರು ಹೇಳಿದರು.


# ಚೀನಾದಲ್ಲಿ ಮುಖಾಮುಖಿಯಾಗುತ್ತಿದ್ದಾರೆ ಮೋದಿ-ಪುಟಿನ್

**ಮಾಸ್ಕೋ:** ಚೀನಾದ ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಯ ಸಂದರ್ಭದಲ್ಲಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಕ್ರೆಮ್ಲಿನ್‌ನ ವಿದೇಶಾಂಗ ನೀತಿ ಸಹಾಯಕ ಯೂರಿ ಉಷಾಕೋವ್ ತಿಳಿಸಿದ್ದಾರೆ.

ನಾಳೆ ಆರಂಭಗೊಳ್ಳಲಿರುವ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ಮೋದಿ ಮತ್ತು ಪುಟಿನ್ ಚೀನಾಕ್ಕೆ ಪ್ರಯಾಣಿಸಲಿದ್ದಾರೆ. ಸೆಪ್ಟೆಂಬರ್ 1 ರಂದು ಪ್ಲಸ್ ಸಭೆಯ ನಂತರ, ನಮ್ಮ ಅಧ್ಯಕ್ಷರು ಭಾರತೀಯ ಪ್ರಧಾನಿ ಮೋದಿಯವರನ್ನು ಭೇಟಿ ಮಾಡುತ್ತಾರೆ ಎಂದು ಉಷಾಕೋವ್ ಪತ್ರಕರ್ತರಿಗೆ ತಿಳಿಸಿದರು. ಅವರು ನಿಯಮಿತವಾಗಿ ಫೋನ್‌ನಲ್ಲಿ ಸಂಪರ್ಕದಲ್ಲಿದ್ದರೂ, ಈ ವರ್ಷ ಇದು ಅವರ ಮೊದಲ ಸಭೆಯಾಗಿದೆ ಎಂದು ಅವರು ಹೇಳಿದರು.

ನಮ್ಮ ದೇಶಗಳು ವಿಶೇಷ ಕಾರ್ಯತಂತ್ರದ ಪಾಲುದಾರಿಕೆಗೆ ಬದ್ಧವಾಗಿವೆ ಎಂದು ಅವರು ಹೇಳಿದರು. ಈ ನಿಟ್ಟಿನಲ್ಲಿ ಒಂದು ಸಂಬಂಧಿತ ಹೇಳಿಕೆಯನ್ನು ಡಿಸೆಂಬರ್ 2010 ರಲ್ಲಿ ಅಂಗೀಕರಿಸಲಾಯಿತು, ಅಂದರೆ ಈ ವರ್ಷವು ಅಂದಿನಿಂದ 15 ನೇ ವಾರ್ಷಿಕೋತ್ಸವವನ್ನು ಸೂಚಿಸುತ್ತದೆ.

ವಿಶೇಷವಾಗಿ ಮುಖ್ಯವಾದ ವಿಷಯವೆಂದರೆ ನಮ್ಮ ಅಧ್ಯಕ್ಷರು ಡಿಸೆಂಬರ್‌ನಲ್ಲಿ ಭಾರತಕ್ಕೆ ಮುಂಬರುವ ಭೇಟಿಗೆ ಸಿದ್ಧತೆಗಳನ್ನು ಚರ್ಚಿಸಲಾಗುವುದು ಎಂದು ಉಷಾಕೋವ್ ಹೇಳಿದರು.



# ಸುಂಕ ಹೇರಲು ನಿಮಗೆ ಅಧಿಕಾರ ಇಲ್ಲ: ಟ್ರಂಪ್‌ಗೆ ಕೋರ್ಟ್ ಶಾಕ್

## ಬಹುತೇಕ ಸುಂಕಗಳು ಕಾನೂನುಬಾಹಿರ ಎಂದ ನ್ಯಾಯಾಲಯ, ದೇಶಕ್ಕೆ ವಿನಾಶಕಾರಿ, ಸುಪ್ರೀಂಗೆ ಹೋಗ್ತೀನಿ ಎಂದ ಟ್ರಂಪ್


**ವಾಷಿಂಗ್ಟನ್ ಡಿಸಿ :** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಅಲ್ಲಿನ ಕೋರ್ಟ್ ಶಾಕ್ ನೀಡಿದೆ. ಟ್ರಂಪ್ ಅವರು ವಿವಿಧ ದೇಶಗಳ ಮೇಲೆ ವಿಧಿಸಿದ್ದ ಬಹುತೇಕ ಸುಂಕಗಳು ಕಾನೂನುಬಾಹಿರ ಎಂದು ಫೆಡರಲ್ ಮೇಲ್ಮನವಿ ನ್ಯಾಯಾಲಯ ಮಹತ್ವದ ತೀರ್ಪನ್ನು ನೀಡಿದೆ. ಇದು ಟ್ರಂಪ್ ಅವರ ವ್ಯಾಪಾರ ನೀತಿಗೆ ದೊಡ್ಡ ಹೊಡೆತ ನೀಡಿದ್ದು, ಅಮೆರಿಕದ ಸುಪ್ರೀಂ ಕೋರ್ಟ್‌ನಲ್ಲಿ ಹೋರಾಟಕ್ಕೆ ಕಾರಣವಾಗುವ ನಿರೀಕ್ಷೆ ಇದೆ. ವಾಷಿಂಗ್ಟನ್ ಡಿಸಿಯಲ್ಲಿರುವ ಫೆಡರಲ್ ಸರ್ಕ್ಯೂಟ್‌ಗಾಗಿ ಇರುವ ಅಮೆರಿಕದ ಮೇಲ್ಮನವಿ ನ್ಯಾಯಾಲಯ ಶುಕ್ರವಾರ 7-4 ಬಹುಮತದಲ್ಲಿ ಈ ನಿರ್ಧಾರವನ್ನು ಪ್ರಕಟಿಸಿದೆ. ಆದರೆ, ಟ್ರಂಪ್ ಇದನ್ನು ದೇಶಕ್ಕೆ ವಿನಾಶಕಾರಿ ಎಂದು ಕರೆದಿದ್ದು, ತಮ್ಮ ಸುಂಕ ಸಮರವನ್ನು ಮುಂದುವರೆಸುವುದಾಗಿ ಹೇಳಿದ್ದಾರೆ.

ಡೊನಾಲ್ಡ್ ಟ್ರಂಪ್ ತಮ್ಮ ವ್ಯಾಪಾರ ಯುದ್ಧದ ಭಾಗವಾಗಿ ಏಪ್ರಿಲ್‌ನಲ್ಲಿ ವಿಧಿಸಿದ್ದ ಪರಸ್ಪರ ಸುಂಕಗಳು ಮತ್ತು ಫೆಬ್ರವರಿಯಲ್ಲಿ ಚೀನಾ, ಕೆನಡಾ ಮತ್ತು ಮೆಕ್ಸಿಕೋ ವಿರುದ್ಧ ಘೋಷಿಸಿದ್ದ ಇನ್ನೊಂದು ಸುತ್ತಿನ ಸುಂಕಗಳನ್ನು ಈ ತೀರ್ಪು ಒಳಗೊಂಡಿದೆ. ಆದರೆ, ಉಕ್ಕು ಮತ್ತು ಅಲ್ಯೂಮಿನಿಯಂ ಆಮದುಗಳ ಮೇಲೆ ಬೇರೆ ಕಾನೂನುಗಳ ಅಡಿಯಲ್ಲಿ ವಿಧಿಸಲಾದ ಸುಂಕಗಳಿಗೆ ಈ ತೀರ್ಪು ಅನ್ವಯಿಸುವುದಿಲ್ಲ. ರಾಷ್ಟ್ರೀಯ ತುರ್ತು ಪರಿಸ್ಥಿತಿಗೆ ಪ್ರತಿಕ್ರಿಯೆಯಾಗಿ ಅಧ್ಯಕ್ಷರಿಗೆ ಹಲವು ಕ್ರಮಗಳನ್ನು ತೆಗೆದುಕೊಳ್ಳಲು ಕಾನೂನು ಅಧಿಕಾರ ನೀಡುತ್ತದೆ, ಆದರೆ ಈ ಯಾವುದೇ ಕ್ರಮಗಳಲ್ಲಿ ಸುಂಕಗಳನ್ನು ವಿಧಿಸುವ ಅಧಿಕಾರವನ್ನು ಸ್ಪಷ್ಟವಾಗಿ ಸೇರಿಸಿಲ್ಲ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಉಲ್ಲೇಖಿಸಿದೆ. ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆಯಡಿಯಲ್ಲಿ ಟ್ರಂಪ್ ತಮ್ಮ ಅಧಿಕಾರವನ್ನು ಮೀರಿದ್ದಾರೆ ಎಂದು ತೀರ್ಪು ಸ್ಪಷ್ಟಪಡಿಸಿದೆ. ಆದರೆ, ಆಮದುಗಳನ್ನು ನಿಯಂತ್ರಿಸುವ ಅಧಿಕಾರವು ಸುಂಕಗಳನ್ನು ವಿಧಿಸುವ ಅಧಿಕಾರವನ್ನು ಒಳಗೊಂಡಿದೆ ಎಂಬ ಟ್ರಂಪ್ ಆಡಳಿತದ ವಾದವನ್ನು ನ್ಯಾಯಾಲಯ ತಿರಸ್ಕರಿಸಿದೆ. ನಿರಂತರ ವ್ಯಾಪಾರ ಕೊರತೆ ಮತ್ತು ಗಡಿಯಾಚೆಗಿನ ಮಾದಕವಸ್ತು ಸಾಗಾಟವನ್ನು ರಾಷ್ಟ್ರೀಯ ತುರ್ತುಸ್ಥಿತಿ ಎಂದು ಘೋಷಿಸಿ 1977ರ ಐಇಇಪಿಎ ಕಾಯ್ದೆಯನ್ನು ಡೊನಾಲ್ಡ್ ಟ್ರಂಪ್ ಅವರು ತಾವು ಹೇರಿದ್ದ ಸುಂಕಗಳನ್ನು ಸಮರ್ಥಿಸಲು ಬಳಸಿದ್ದರು. ಜಾಗತಿಕ ವ್ಯಾಪಾರವನ್ನು ಸಮತೋಲನಗೊಳಿಸಲು ಮತ್ತು ಅಮೆರಿಕದ ಕೈಗಾರಿಕೆಗಳನ್ನು ರಕ್ಷಿಸಲು ಈ ಸುಂಕಗಳು ಅವಶ್ಯಕ ಎಂದು ವಾದಿಸಿದ್ದರು. ಆದರೆ, ಕೋರ್ಟ್ ಅದನ್ನು ಮಾನ್ಯ ಮಾಡಲಿಲ್ಲ.

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಅಮೆರಿಕ ಕೋರ್ಟ್ ಶಾಕ್
- ಸುಂಕ ಹೇರಲು ನಿಮಗೆ ಅಧಿಕಾರ ಇಲ್ಲ ಎಂದು ಕೋರ್ಟ್ ತೀರ್ಪು
- ಬಹುತೇಕ ಸುಂಕಗಳು ಕಾನೂನುಬಾಹಿರ ಎಂದ ನ್ಯಾಯಾಲಯ
- ಇದು ದೇಶಕ್ಕೆ ವಿನಾಶಕಾರಿ, ಸುಪ್ರೀಂಗೆ ಹೋಗ್ತೀನಿ ಎಂದ ಅಧ್ಯಕ್ಷ

## ಅಕ್ಟೋಬರ್ 14ರವರೆಗೆ ತೀರ್ಪಿಗೆ ತಡೆ

**ಐದು ಸಣ್ಣ ಅಮೆರಿಕನ್ ಕಂಪನಿಗಳು ಮತ್ತು ಡೆಮಾಕ್ರಟಿಕ್ ನೇತೃತ್ವದ 12 ರಾಜ್ಯಗಳು ಟ್ರಂಪ್ ಸುಂಕದ ವಿರುದ್ಧ ಪ್ರತ್ಯೇಕವಾಗಿ ಪ್ರಕರಣಗಳನ್ನು ದಾಖಲಿಸಿದ್ದವು. ಸಂವಿಧಾನದ ಪ್ರಕಾರ, ತೆರಿಗೆ ಮತ್ತು ಸುಂಕಗಳನ್ನು ವಿಧಿಸುವ ಅಧಿಕಾರ ಕಾಂಗ್ರೆಸ್‌ಗೆ ಸೇರಿದ್ದು ಎಂದು ಮೊಕದ್ದಮೆ ಹೂಡಿದ್ದವು. ಈ ಹಿಂದೆ ನ್ಯೂಯಾರ್ಕ್ ಮೂಲದ ಅಂತಾರಾಷ್ಟ್ರೀಯ ವ್ಯಾಪಾರದ ಅಮೆರಿಕ ನ್ಯಾಯಾಲು ಕೂಡ ಟ್ರಂಪ್ ಸುಂಕ ನೀತಿಗಳ ವಿರುದ್ಧ ತೀರ್ಪು ನೀಡಿತ್ತು. ಮೇಲ್ಮನವಿ ನ್ಯಾಯಾಲಯವು ತನ್ನ ತೀರ್ಪನ್ನು ಅಕ್ಟೋಬರ್ 14ರವರೆಗೆ ತಡೆಹಿಡಿದಿದ್ದು, ಟ್ರಂಪ್ ಆಡಳಿತಕ್ಕೆ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶವನ್ನು ನೀಡಿದೆ. ಭಾರತದ ಮೇಲೆಯೂ ಶೇ.50ರಷ್ಟು ಸುಂಕವನ್ನು ಅಮೆರಿಕ ವಿಧಿಸಿದ್ದು, ಇದು ಭಾರೀ ಚರ್ಚೆಗೆ ಕಾರಣವಾಗಿದೆ.**



**ಇದು ದೇಶಕ್ಕೆ ವಿನಾಶಕಾರಿ ತೀರ್ಪು**

**ನ್ಯಾಯಾಲಯದಿಂದ ತೀರ್ಪು ಪ್ರಕಟವಾದ ಬೆನ್ನಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ಈ ತೀರ್ಪು ದೇಶಕ್ಕೆ ಸಂಪೂರ್ಣ ವಿನಾಶಕಾರಿ ಎಂದಿದ್ದಾರೆ. ತಮ್ಮ ಟ್ರೂತ್ ಸೋಶಿಯಲ್ ವೇದಿಕೆಯಲ್ಲಿ ದೀರ್ಘವಾಗಿ ಬರೆದುಕೊಂಡಿರುವ ಟ್ರಂಪ್ ನ್ಯಾಯಾಲಯವನ್ನು ಹೆಚ್ಚು ಪಕ್ಷಪಾತಿ ಎಂದು ಕರೆದಿದ್ದು, ಸುಪ್ರೀಂ ಕೋರ್ಟ್ ತಮ್ಮ ಪರವಾಗಿ ತೀರ್ಪು ನೀಡಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.**

# ಮಿನಿ ನ್ಯೂಸ್

## ಸೆ. ಅಂತ್ಯಕ್ಕೆ ತೇಜಸ್ ಮಾರ್ಕ್ 1ಎ ಭಾರತಕ್ಕೆ

**ನವದೆಹಲಿ:** ತೇಜಸ್ ಯುದ್ಧ ವಿಮಾನಗಳ ಪೈಕಿ ಎರಡು ತೇಜಸ್ ಮಾರ್ಕ್ 1 ಎ ಯುದ್ಧ ವಿಮಾನಗಳು ಸೆಪ್ಟಂಬರ್ ಅಂತ್ಯದ ವೇಳೆಗೆ ಭಾರತಕ್ಕೆ ಬರುವ ನಿರೀಕ್ಷೆ ಇದೆ ಎಂದು ರಕ್ಷಣಾ ಕಾರ್ಯದರ್ಶಿ ಆರ್ ಕೆ ಸಿಂಗ್ ಹೇಳಿದ್ದಾರೆ. 2014ರಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ, ಸ್ವಾವಲಂಬನೆಯ ಮೇಲೆ ನಿರಂತರ ಗಮನ ಹರಿಸಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ. ದೆಹಲಿಯಲ್ಲಿ ಹಮ್ಮಿಕೊಂಡಿರುವ ರಕ್ಷಣಾ ಶೃಂಗಸಭೆಯಲ್ಲಿ ಮಾತನಾಡಿದ ಅವರು ರಕ್ಷಣಾ ವಲಯದಲ್ಲಿ 'ಆತ್ಮನಿರ್ಭರ' ಸಾಧಿಸುವ ಕುರಿತು, ಸ್ವಾವಲಂಬಿಯಾಗಿರುವುದು ಭಾರತ ಕಾರ್ಯತಂತ್ರದ ಸ್ವಾಯತ್ತತೆ ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ಕಾರ್ಯತಂತ್ರದ ಸ್ವಾಯತ್ತತೆ ಕಾಪಾಡಿಕೊಳ್ಳಲು ಸ್ವಾವಲಂಬಿಗಳಾಗುವುದು ಕಡ್ಡಾಯವಾಗಿದೆ. ಮಾಡಬಹುದಾದ ಏಕೈಕ ಮಾರ್ಗವೆಂದರೆ ರಕ್ಷಣಾ ಅಗತ್ಯಗಳಲ್ಲಿ ಹೆಚ್ಚಿನ ದೇಶದೊಳಗೆ ಪೂರೈಸಲ್ಪಡುವುದನ್ನು ಖಚಿತಪಡಿಸಿಕೊಳ್ಳುವ ಕಡೆಗೆ ಗಮನ ಹರಿಸಲಾಗಿದೆ ಎಂದಿದ್ದಾರೆ.

## ರಷ್ಯಾದ ಎರಡು ಸೇತುವೆ ಉಡೀಸ್

**ಮಾಸ್ಕೋ:** ರಷ್ಯಾ - ಉಕ್ರೇನ್ ನಡುವಿನ ಯುದ್ಧ ಸದ್ಯಕ್ಕೆ ನಿಲ್ಲುವ ಲಕ್ಷಣಗಳು ಕಾಣಿಸುತ್ತಿಲ್ಲ. ಅಗ್ಗದ ಡ್ರೋನ್ ಬಳಸುವುದರೊಂದಿಗೆ ರಷ್ಯಾದ ಎರಡು ಸೇತುವೆಗಳನ್ನು ಉಕ್ರೇನ್ ಉಡೀಸ್ ಮಾಡಿದೆ. ರಷ್ಯಾದ ಪಡೆಗಳು ಅಲ್ಲಿ ಅಡಗಿಸಿಟ್ಟಿದ್ದ ಗಣಿ ಮತ್ತು ಮದ್ದುಗುಂಡುಗಳ ದಾಸ್ತಾನುಗಳನ್ನು ನಿಖರವಾಗಿ ಗುರಿಯಾಗಿಸಿಕೊಂಡು ಉಕ್ರೇನ್ ದಾಳಿ ನಡೆಸಿರುವುದಾಗಿ ಸಿಎನ್‌ಎನ್ ವರದಿ ಮಾಡಿದೆ.

ಈ ಸೇತುವೆಗಳು ಉಕ್ರೇನ್‌ನ ಖಾರ್ಕಿವ್ ಪ್ರದೇಶದ ಗಡಿಯ ಸಮೀಪದಲ್ಲಿದ್ದು, ರಷ್ಯಾ ತನ್ನ ಸೈನ್ಯವನ್ನು ಮರು ನಿಯೋಜಿಸಲು ಬಳಸುತ್ತಿದೆ ಎಂದು ಉಕ್ರೇನಿಯನ್ ಮಿಲಿಟರಿ ಮಾಹಿತಿ ನೀಡಿದೆ. ರಷ್ಯಾ ಪಡೆಗಳು ತಮ್ಮ ಕಾರ್ಯತಂತ್ರದ ಪ್ರಮುಖ ಸ್ಥಳವನ್ನಾಗಿ ಮಾಡಿಕೊಂಡಿದ್ದ ಸೇತುವೆಗಳನ್ನು ಉಕ್ರೇನಿಯನ್ ಮಿಲಿಟರಿ ಪಡೆಗಳು ಹಠಾತ್ ದಾಳಿ ನಡೆಸಿ ನಾಶಪಡಿಸಿವೆ. ಶತ್ರುಗಳ ಚಲನವಲನ ತಡೆಯಲು ಸೇತುವೆಗಳು, ಹೆದ್ದಾರಿಗಳು ಮತ್ತು ಇತರ ಪ್ರಮುಖ ಮಾರ್ಗಗಳನ್ನು ನಾಶಪಡಿಸುವ ಹಾದಿಯಲ್ಲಿ ಮಿಲಿಟರಿ ಪಡೆಗಳು ತೊಡಗಿವೆ. ಫೆಬ್ರವರಿ 2022ರಲ್ಲಿ ರಷ್ಯಾದ ಪೂರ್ಣ-ಪ್ರಮಾಣದ ಆಕ್ರಮಣದ ಆರಂಭಿಕ ದಿನಗಳಲ್ಲಿ ಉಕ್ರೇನ್ ಸ್ವತಃ ಅಂತಹ ಕ್ರಮಗಳನ್ನು ಕೈಗೊಂಡಿತು. ಸೇತುವೆಗಳನ್ನು ನಾಶಪಡಿಸಿದಾಗ ರಷ್ಯಾದ ಯುದ್ಧದ ಗತಿ ನಿಧನಗೊಂಡಿತ್ತು ಅಲ್ಲದೇ ತನ್ನ ರಾಜಧಾನಿಯನ್ನು ರಕ್ಷಿಸಿಕೊಂಡಿತ್ತು. ಆ ಸಂದರ್ಭದಲ್ಲಿ ಉಕ್ರೇನಿಯನ್ ಪಡೆಗಳು ರಷ್ಯಾ ಅಡಗಿಟ್ಟಿರುವ ಮದ್ದು, ಗುಂಡುಗಳ ರಹಸ್ಯ ತಿಳಿದುಕೊಂಡು ಅದನ್ನು ತಮ್ಮ ಅನುಕೂಲಕ್ಕೆ ಬಳಸಿಕೊಂಡಿತು ಎಂದು ಸಿಎನ್‌ಎನ್ ವರದಿ ಮಾಡಿದೆ.

## ನಕ್ಸಲರಿಂದ ಶಿಕ್ಷಕನ ಹತ್ಯೆ

**ಛತ್ತೀಸ್‌ಗಢ:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ 'ಶಿಕ್ಷಾದೂತ' (ಸರ್ಕಾರಿ ಶಾಲೆಗಳಿಗೆ ಭೇಟಿ ನೀಡುವ ತಾತ್ಕಾಲಿಕ ಶಿಕ್ಷಕ) ಆಗಿ ಕೆಲಸ ಮಾಡುತ್ತಿದ್ದ 25 ವರ್ಷದ ಯುವಕನನ್ನು ಪೊಲೀಸ್ ಮಾಹಿತಿದಾರನೆಂದು ಶಂಕಿಸಿ, ನಕ್ಸಲರು ಅಪಹರಿಸಿ ಹತ್ಯೆ ಮಾಡಿದ್ದಾರೆ ಎಂದು ಅಧಿಕಾರಿಯೊಬ್ಬರು ಶನಿವಾರ ತಿಳಿಸಿದ್ದಾರೆ. ಗಂಗಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಟೋಡ್ಕಾ ಗ್ರಾಮದ ನಿವಾಸಿ ಕಲ್ಲು ತಾಟಿ ಎಂಬ ಶಿಕ್ಷಕ, ಶುಕ್ರವಾರ ಸಂಜೆ ಹತ್ತಿರದ ಲೆಂದ್ರ ಗ್ರಾಮದ ಶಾಲೆಯಿಂದ ಮನೆಗೆ ಹಿಂತಿರುಗುತ್ತಿದ್ದಾಗ ನಕ್ಸಲರು ಅವರನ್ನು ಅಪಹರಿಸಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ನಕ್ಸಲರು ಶಿಕ್ಷಕನನ್ನು ಹರಿತವಾದ ಆಯುಧಗಳಿಂದ ಕೊಂದು ಗ್ರಾಮದ ಬಳಿ ಎಸೆದಿದ್ದಾರೆ ಎಂದು ಅವರು ಹೇಳಿದ್ದಾರೆ. ಶನಿವಾರ ಬೆಳಗ್ಗೆ ಭದ್ರತಾ ಪಡೆಗಳ ತಂಡವನ್ನು ಸ್ಥಳಕ್ಕೆ ಕಳುಹಿಸಲಾಗಿದ್ದು, ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಬಸ್ತಾರ್ ಪ್ರದೇಶದಲ್ಲಿ ಶಿಕ್ಷಾದೂತರನ್ನು ಗುರಿಯಾಗಿಸಿಕೊಂಡು ನಕ್ಸಲರು ದಾಳಿ ನಡೆಸುತ್ತಿದ್ದಾರೆ. ಅವರು ಪೊಲೀಸ್ ಮಾಹಿತಿದಾರರು ಎಂದು ಶಂಕಿಸಲಾಗಿದೆ ಮತ್ತು ಜೂನ್ 2023 ರಿಂದ ಬುಡಕಟ್ಟು ಪ್ರಾಬಲ್ಯದ ಬಸ್ತಾರ್ ಪ್ರದೇಶದಲ್ಲಿ ನಡೆದ ಎಂಟನೇ ಕೊಲೆ ಇದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಪ್ರದೇಶದಲ್ಲಿ ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಯುವ ಶಿಕ್ಷಕರ ಹತ್ಯೆಯನ್ನು ನಾವು ಬಲವಾಗಿ ಖಂಡಿಸುತ್ತೇವೆ. ಸಮಾಜವನ್ನು ಉನ್ನತೀಕರಿಸಲು ಕೆಲಸ ಮಾಡುವವರನ್ನು ಗುರಿಯಾಗಿಸಿಕೊಂಡು ಮಾವೋವಾದಿಗಳು ನಡೆಸುತ್ತಿರುವ ಇಂತಹ ಹೇಯ ಕೃತ್ಯಗಳನ್ನು ಯಾವುದೇ ಸಂದರ್ಭದಲ್ಲೂ ಸಹಿಸಲಾಗುವುದಿಲ್ಲ ಎಂದು ಬಸ್ತಾರ್ ರೇಂಜ್‌ನ ಪೊಲೀಸ್ ಮಹಾನಿರ್ದೇಶಕ ಸುಂದರರಾಜ್ ಪಿ ಅವರು ಹೇಳಿದ್ದಾರೆ.

## ಫ್ರೀ ಬಸ್ : ಆಂಧ್ರ ಪ್ರದೇಶದಲ್ಲೂ ಸೀಟ್‌ಗಾಗಿ ಮಹಿಳೆ ಜಟಾಪಟಿ

**ವಿಜಯನಗರಂ:** ಈ ಹಿಂದೆ ಕರ್ನಾಟಕದಲ್ಲಿ ವ್ಯಾಪಕ ಸುದ್ದಿ ಮಾಡಿದ್ದ ಫ್ರೀ ಬಸ್ ಇದೀಗ ನೆರೆಯ ಆಂಧ್ರ ಪ್ರದೇಶದಲ್ಲೂ ವ್ಯಾಪಕ ಸುದ್ದಿಗೆ ಗ್ರಾಸವಾಗುತ್ತಿದ್ದು, ಬಸ್‌ನಲ್ಲಿನ ಸೀಟ್‌ಗಾಗಿ ನಡೆದ ಜಟಾಪಟಿ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ. ಹೌದು... ಇದೇ ಆಗಸ್ಟ್ 15ರಿಂದ ಆಂಧ್ರ ಪ್ರದೇಶ ಸರ್ಕಾರ 'ಸ್ತ್ರೀ ಶಕ್ತಿ' ಹೆಸರಿನಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಯೋಜನೆ ಆರಂಭಿಸಿದೆ. ಈ ಯೋಜನೆ ಅಡಿಯಲ್ಲಿ ಪ್ರತಿದಿನ ಸುಮಾರು 18 ರಿಂದ 20 ಲಕ್ಷ ಜನರು ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದಾರೆ. ಹೀಗಾಗಿ ಎಲ್ಲಾ ಬಸ್‌ಗಳು ಕಿಕ್ಕಿರಿದು ತುಂಬಿ ಪ್ರಯಾಣ ಮಾಡುತ್ತಿವೆ.

ಎಪಿಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಮಹಿಳಾ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಿದ್ದು, ಸೀಟ್‌ಗಾಗಿ ಪ್ರಯಾಣಿಕರ ನಡುವೆ ಆಗಾಗ್ಗೆ ಗಲಾಟೆಗಳು ಕೂಡ ಸಾಮಾನ್ಯವಾಗಿ ಬಿಟ್ಟಿವೆ. ಆಂಧ್ರ ಪ್ರದೇಶದ ವಿಜಯನಗರಂ ಜಿಲ್ಲೆಯಲ್ಲಿ ಸೀಟ್‌ಗಾಗಿ ಮಹಿಳೆ ಮತ್ತು ವ್ಯಕ್ತಿಯ ನಡುವೆ ನಡೆದ ಗಲಾಟೆ ವ್ಯಾಪಕ ಸುದ್ದಿಗೆ ಗ್ರಾಸವಾಗಿದೆ. ತಾನು ಹಿಡಿದಿಟ್ಟಿದ್ದ ಸೀಟ್‌ನಲ್ಲಿ ಕುಳಿತ್ತಿದ್ದಾನೆ ಎಂದು ಮಹಿಳೆ ಗಲಾಟೆ ಮಾಡಿದ್ದು ಇಬ್ಬರೂ ಪರಸ್ಪರ ಚಪ್ಪಲಿಯಲ್ಲಿ ಬಡಿದಾಡಿದ್ದಾರೆ. ಮಹಿಳೆ ಹೇಳಿದಂತೆ ಬಸ್ ನಿಲ್ದಾಣದಲ್ಲಿರುವಾಗಲೇ ತನಗಾಗಿ ಮತ್ತು ತನ್ನ ಮಗಳಿಗಾಗಿ ಹೊರಗಿನಿಂದ ದುಪ್ಪಟ ಹಾಕಿ ಸೀಟು ಹಿಡಿದಿದ್ದೆ. ಆದರೆ ಬಸ್ ಹತ್ತಿದಾಗ ಈತ ತನ್ನ ದುಪ್ಪಟ್ಟಾ ತೆಗೆದು ಕುಳಿತುಕೊಂಡಿದ್ದ. ಸೀಟ್ ಹಿಡಿದಿದ್ದೇನೆ ಎಂದು ಹೇಳಿದರೂ ಕೇಳದೇ ಬಲವಂತವಾಗಿ ಕುಳಿತುಕೊಂಡ ಎಂದು ಆರೋಪಿಸಿದ್ದಾರೆ. ಈ ವೇಳೆ ಮಹಿಳೆ ವ್ಯಕ್ತಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆತ ಕೂಡ ಗದರಿದ್ದಾನೆ. ಇದರಿಂದ ಕೋಪಗೊಂಡ ಮಹಿಳೆ ನೋಡನೋಡುತ್ತಲೇ ಆತನ ಮೇಲೆ ಹಲ್ಲೆ ಮಾಡಿದ್ದಾಳೆ. ಈ ವೇಳೆ ಆತ ಕೂಡ ಹಲ್ಲೆ ಮಾಡಿದ್ದು, ಈ ವೇಳೆ ಮಹಿಳೆ ತನ್ನ ಚಪ್ಪಲಿ ತೆಗೆದುಕೊಂಡು ಹೊಡೆಯಲು ಮುಂದಾಗಿದ್ದು, ಈತ ಕೂಡ ಚಪ್ಪಲಿ ತೆಗೆದು ಹೊಡೆಯಲು ಮುಂದಾಗಿದ್ದಾನೆ. ಈ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ.

## ಮೈಸೂರಲ್ಲಿ ಶೂಟ್ ಬಿಟ್ಟು ತೆರಳಿದ ರಾಮ್ ಚರಣ್


### ಅಲ್ಲು ಅರ್ಜುನ್ ಅಜ್ಜಿ ಕನಕರತ್ನಂ ನಿಧನ

ಅಲ್ಲು ಅರ್ಜುನ್ ಅವರ ಅಜ್ಜಿ ಅಲ್ಲು ಕನಕರತ್ನಂ ಅವರು ಆಗಸ್ಟ್ 30 ರಂದು 94 ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ಸಿನಿಮಾ ಶೂಟಿಂಗ್‌ನಿಂದ ಮುಂಬೈನಲ್ಲಿದ್ದ ಅಲ್ಲು ಅರ್ಜುನ್ ಅಜ್ಜಿಯ ಸಾವಿನ ಸುದ್ದಿ ಕೇಳಿ ಹೈದರಾಬಾದ್‌ಗೆ ತೆರಳುತ್ತಿದ್ದಾರೆ.

ಅಲ್ಲು ಅರ್ಜುನ್ ಅಜ್ಜಿ ಅಲ್ಲು ಕನಕರತ್ನಂ ಅವರು ನಿಧನ ಹೊಂದಿದ್ದಾರೆ. ಅವರಿಗೆ 94 ವರ್ಷ ವಯಸ್ಸಾಗಿತ್ತು. ಕನಕರತ್ನಂ ಮಗ ಅಲ್ಲು ಅರವಿಂದ್ ಮನೆಯಲ್ಲಿ ಅಂತಿಮ ಸಂಸ್ಕಾರಕ್ಕೆ ವ್ಯವಸ್ಥೆ ಮಾಡಲಾಗಿದೆ ಎನ್ನಲಾಗಿದೆ. ಅಂತಿಮ ವಿಧಿ ವಿಧಾನಗಳು ಸಂಜೆ ನಡೆಯುವ ಸಾಧ್ಯತೆ ಇದೆ. ಕನಕರತ್ನಂ ಪತಿ ಅಲ್ಲು ರಾಮಲಿಂಗಯ್ಯ ಅವರು ತೆಲುಗಿನ ಲೆಜೆಂಡರಿ ನಟ ಆಗಿದ್ದರು. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಇವರು 2004ರಲ್ಲಿ ನಿಧನ ಹೊಂದಿದ್ದರು. ಕನಕರತ್ನಂ ಅವರು ವಯೋ ಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಶನಿವಾರ ಅವರು ಕೊನೆಯುಸಿರು ಎಳೆದಿದ್ದಾರೆ.

ಸದ್ಯ ಅಲ್ಲು ಅರ್ಜುನ್ ಅವರು ಸಿನಿಮಾ ಶೂಟಿಂಗ್‌ಗಾಗಿ ಮುಂಬೈನಲ್ಲಿ ಇದ್ದಾರೆ. ಅಜ್ಜಿ ಸಾವಿನ ಸುದ್ದಿ ಕೇಳಿದ ಬಳಿಕ ಶೂಟ್‌ನ ಅರ್ಧಕ್ಕೆ ನಿಲ್ಲಿಸಿ ಹೈದರಾಬಾದ್‌ಗೆ ಮರಳುತ್ತಿದ್ದಾರೆ. ಮಧ್ಯಾಹ್ನದ ವೇಳೆಗೆ ಅವರು ಹೈದರಾಬಾದ್ ತಲುಪೋ ಸಾಧ್ಯತೆ ಇದೆ.

ರಾಮ್ ಚರಣ್ ಅವರು ಕೂಡ ಮೈಸೂರಿನಲ್ಲಿ ಶೂಟಿಂಗ್ ಮಾಡುತ್ತಿದ್ದಾರೆ. ಬುಚಿ ಬಾಬು ಸನಾ ಸಿನಿಮಾ 'ಪೆದ್ದಿ'ಯ ಭಾಗ ಆಗಿದ್ದಾರೆ. ಅವರು ಕೂಡ ಶೂಟ್ ಕ್ಯಾನ್ಸಲ್ ಮಾಡಿ ಹೈದರಾಬಾದ್‌ಗೆ ಬರುತ್ತಿದ್ದಾರೆ.





## ಹಾಸಿಗೆ-ದಿಂಬು ಕೊಡಿ ಪ್ಲೀಸ್

### ಕೋರ್ಟ್‌ನಲ್ಲಿ ದರ್ಶನ್ ವಿವಿಧ ಬೇಡಿಕೆ

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಮತ್ತು ಪವಿತ್ರಾ ಗೌಡ ಅವರ ಜಾಮೀನು ರದ್ದಾಗಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ದರ್ಶನ್ ದಿಂಬು ಮತ್ತು ಹಾಸಿಗೆಗಾಗಿ ಅರ್ಜಿ ಸಲ್ಲಿಸಿದ್ದಾರೆ. ಪವಿತ್ರಾ ಗೌಡ ಕೆಳ ಹಂತದ ನ್ಯಾಯಾಲಯದಲ್ಲಿ ಮತ್ತೆ ಜಾಮೀನು ಅರ್ಜಿ ಸಲ್ಲಿಸಿದ್ದಾರೆ.

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಏಳು ಆರೋಪಿಗಳ ಜಾಮೀನು ರದ್ದಾಗಿದೆ. ಹೀಗಾಗಿ, ಈ ಏಳೂ ಮಂದಿ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲು ಸೇರಿದ್ದಾರೆ. ಹೀಗಿರುವಾಗಲೇ ಪವಿತ್ರಾ ಗೌಡ ಅವರು ಕೆಳ ಹಂತದ ಕೋರ್ಟ್‌ನಲ್ಲಿ ಜಾಮೀನಿಗೆ ಅರ್ಜಿ ಸಲ್ಲಿಕೆ ಮಾಡಿದ್ದಾರೆ. ದರ್ಶನ್ ಅವರು ದಿಂಬು-ಹಾಸಿಗಾಗಿ ಬೇಡಿಕೆ ಇಟ್ಟಿದ್ದಾರೆ. ಸದ್ಯ ಇಬ್ಬರ ಅರ್ಜಿ ವಿಚಾರಣೆಯ ತೀರ್ಪು ಸೆಪ್ಟೆಂಬರ್ 2ಕ್ಕೆ ಹೊರ ಬೀಳಲಿದೆ. ದರ್ಶನ್ ಅವರಿಗೆ ವಿಶೇಷ ಸವಲತ್ತು ನೀಡದಂತೆ ಸುಪ್ರೀಂ ಕೋರ್ಟ್ ಖಡಕ್ ಸೂಚನೆ ಕೊಟ್ಟಿದೆ.

ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಸಾಕಷ್ಟು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಅವರಿಗೆ ನಿಯಮದಲ್ಲಿರುವಂತೆ ಒಂದು ಬೆಡ್‌ಶೀಟ್ ಮಾತ್ರ ನೀಡಲಾಗಿದೆ ಎನ್ನಲಾಗಿದೆ. ಹೆಚ್ಚುವರಿಯಾಗಿ ಯಾವುದೇ ಬೆಡ್ ಶೀಟ್ ಕೊಟ್ಟಿಲ್ಲ. ಈ ವಿಚಾರಕ್ಕೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಕೆ ಆಗಿದೆ.

'ನಾವು ದರ್ಶನ್‌ಗೆ ಮನೆ ಊಟ ಕೇಳುತ್ತಿಲ್ಲ. 5 ಸ್ಟಾರ್ ಅನುಕೂಲ ಕೂಡ ಬೇಕು ಎಂದು ಹೇಳುತ್ತಿಲ್ಲ. ದರ್ಶನ್‌ಗೆ ಬೆಡ್‌ಶಿಟ್, ದಿಂಬು ಕೊಡುತ್ತಿಲ್ಲ. ಕೋರ್ಟ್‌ನಿಂದ ನಿರ್ದೇಶನ ತನ್ನಿ ಎಂದಿದ್ದಾರೆ' ಎಂದು ದರ್ಶನ್ ಪರ ವಕೀಲ್ ಸುನೀಲ್‌ಕುಮಾರ್ ಸೆಶನ್ ಕೋರ್ಟ್‌ನಲ್ಲಿ ವಾದ ಮಾಡಿದ್ದಾರೆ. ಈ ಅರ್ಜಿ ವಿಚಾರಣೆ ಮುಂದಕ್ಕೆ ಹಾಕಲಾಗಿದೆ. ಇನ್ನು, ದರ್ಶನ್ ಅವರನ್ನು ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡುವಂತೆ ಅರ್ಜಿ ಸಲ್ಲಿಕೆ ಆಗಿತ್ತ. ಇದರ ವಿಚಾರಣೆ ಸೆ.2ಕ್ಕೆ ಮುಂದೂಡಿಕೆ ಆಗಿದೆ.

ಸುಪ್ರೀಂಕೋರ್ಟ್‌ನಲ್ಲಿ ಪವಿತ್ರಾ ಗೌಡ ಜಾಮೀನು ರದ್ದಾಗಿದೆ. ಈ ಬೆನ್ನಲ್ಲೇ ಅವರು ಕೆಳ ಹಂತದ ನ್ಯಾಯಾಲಯದಲ್ಲಿ ಜಾಮೀನಿಗೆ ಅರ್ಜಿ ಸಲ್ಲಿಸಿದ್ದಾರೆ. ಈ ವೇಳೆ ಪವಿತ್ರಾ ಪರ ವಕೀಲರು ವಾದ ಮಂಡಿಸಿದರು.



## ಜನರನ್ನು ನೋಡಿ ಭಯಬಿದ್ದ ಜಾನ್ವಿ

### ಜಾನ್ವಿಯ ಮುಖದಲ್ಲಿ ಹಿಂಜರಿಕೆ




ತುಷಾರ್ ಜಲೋಟಾ ನಿರ್ದೇಶನದ ಪರಮ್ ಸುಂದರಿ ಚಿತ್ರ ಆಗಸ್ಟ್ 29 ರಂದು ಬಿಡುಗಡೆಯಾಗಿ ಯಶಸ್ವಿಯಾಗಿದೆ. ಜಾನ್ವಿ ಕಪೂರ್ ಮತ್ತು ಸಿದ್ಧಾರ್ಥ್ ಮಲ್ಹೋತ್ರಾ ಅವರ ಅಭಿನಯ ಮೆಚ್ಚುಗೆ ಪಡೆದಿದೆ. ಗಣಪತಿ ದರ್ಶನಕ್ಕೆ ಹೋದಾಗ ಜನಸಂದಣಿಯಿಂದ ಜಾನ್ವಿ ಅನುಭವಿಸಿದ ಆತಂಕವೂ ಸುದ್ದಿಯಾಗಿದೆ. ಚಿತ್ರದ ಮೊದಲ ದಿನದ ಗಳಿಕೆ 7.25 ಕೋಟಿ ರೂಪಾಯಿ. ಸಿದ್ಧಾರ್ಥ್ ಮಲ್ಹೋತ್ರಾ ಮತ್ತು ಜಾನ್ವಿ ಕಪೂರ್ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ 'ಪರಮ್ ಸುಂದರಿ' ಸಿನಿಮಾ ಆಗಸ್ಟ್ 29ರಂದು ರಿಲೀಸ್ ಆಯಿತು. ತುಷಾರ್ ಜಲೋಟಾ ನಿರ್ದೇಶನದ ಈ ಚಿತ್ರವು ಮೆಚ್ಚುಗೆ ಪಡೆದಿದೆ. ಇದರಲ್ಲಿ ಸಿದ್ಧಾರ್ಥ್ ಉತ್ತರ ಭಾರತದ ಯುವಕನ ಪಾತ್ರವನ್ನು ನಿರ್ವಹಿಸಿದರೆ, ಜಾನ್ವಿ ದಕ್ಷಿಣ ಭಾರತದ ಯುವತಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕಳೆದ ಕೆಲವು ದಿನಗಳಿಂದ, ಸಿದ್ಧಾರ್ಥ್ ಮತ್ತು ಜಾನ್ವಿ ವಿವಿಧ ನಗರಗಳಲ್ಲಿ ತಮ್ಮ ಚಿತ್ರದ ಪ್ರಚಾರವನ್ನು ಬಿರುಸಿನಿಂದ ಮಾಡುತ್ತಿದ್ದಾರೆ. ಅದೇ ರೀತಿ, ಚಿತ್ರ ಬಿಡುಗಡೆಯಾಗುವ ಮೊದಲು, ಇಬ್ಬರೂ 'ಲಾಲ್ ಬೌಚಾ ರಾಜ' ಗಣಪತಿ ದರ್ಶನಕ್ಕೆ ತೆರಳಿದರು. ಆ ಜನಸಂದಣಿಯಲ್ಲಿ ಹೋಗುವಾಗ ಜಾನ್ವಿಯ ಮುಖದಲ್ಲಿ ಹಿಂಜರಿಕೆ ಸ್ಪಷ್ಟವಾಗಿ ಗೋಚರಿಸುತ್ತಿತ್ತು. ಜಾನ್ವಿ ಮರಾಠಿ ಹುಡುಗಿಯಾಗಿ ಗಣಪತಿಯನ್ನು ಭೇಟಿ ಮಾಡಲು ಬಂದಿದ್ದರು. ಸಿದ್ಧಾರ್ಥ್ ಅವರು ಜಾನ್ವಿಯ ಹಿಂದೆ ನಿಂತು ಜನಸಂದಣಿಯಲ್ಲಿ ಅವರನ್ನು ರಕ್ಷಿಸೋದು ಕಂಡು ಬಂತು. ಮಂಟಪದ ಮುಂದೆ ಜನಸಂದಣಿಯನ್ನು ನೋಡಿ ಜಾನ್ವಿಯ ಮುಖದಲ್ಲಿ ಭಾವ ಬದಲಾಯಿತು. ಭಯ ಮತ್ತು ಚಿಂತೆ ಅವರ ಮುಖದಲ್ಲಿ ಸ್ಪಷ್ಟವಾಗಿ ಗೋಚರಿಸಿತು. ನೆಟ್ಟಿಗರು ಇದಕ್ಕೆ ಪ್ರತಿಕ್ರಿಯಿಸಲು ಪ್ರಾರಂಭಿಸಿದರು. 'ಜಾನ್ವಿ ಇಷ್ಟೊಂದು ಜನಸಂದಣಿಯನ್ನು ಎದುರಿಸುತ್ತಿರುವುದು ಇದೇ ಮೊದಲು. ಆದರೆ ಅನೇಕ ಭಾರತೀಯ ಮಹಿಳೆಯರಿಗೆ ಇದು ದಿನನಿತ್ಯದ ಘಟನೆ' ಎಂದು ಕೆಲವರು ಹೇಳಿದ್ದಾರೆ.

## ರುಕ್ಮಿಣಿ ಹಾಡು ಹೇಳ್ತಾರೆ ನೋಡಿ

ರುಕ್ಮಿಣಿ ವಸಂತ್ ಅವರು ಕನ್ನಡ ಚಲನಚಿತ್ರರಂಗದಲ್ಲಿ ಯಶಸ್ವಿ ನಟಿಯಾಗಿದ್ದಾರೆ. 'ಮದರಾಸಿ' ಚಿತ್ರದಲ್ಲಿ ಅವರು ನಟಿಸುತ್ತಾ ಇದ್ದಾರೆ. ಅವರು ಓರ್ವ ಗಾಯಕಿಯೂ ಹೌದು. ಇತ್ತೀಚೆಗೆ ಅವರ ಹಾಡುಗಳು ವೈರಲ್ ಆಗುತ್ತಿವೆ, ಅವರ ಗಾಯನ ಪ್ರತಿಭೆಯನ್ನು ಬಹಿರಂಗ ಪಡಿಸುತ್ತಿವೆ. ಆ ಸಂದರ್ಭದ ವಿಡಿಯೋ ಇಲ್ಲಿದೆ.


ನಟಿ ರುಕ್ಮಿಣಿ ವಸಂತ್ ಒಳ್ಳೆಯ ನಟಿ ಅನ್ನೋದು ಎಲ್ಲರಿಗೂ ಗೊತ್ತು. ಅವರು ನಟನೆಯ ಮೂಲಕ ತಮ್ಮನ್ನು ತಾವು ಸಾಬೀತು ಮಾಡಿಕೊಂಡಿದ್ದಾರೆ. ಆದರೆ, ಅವರು ಒಳ್ಳೆಯ ಸಿಂಗರ್ ಅನ್ನೋ ವಿಚಾರ ನಿಮಗೆ ಗೊತ್ತೇ ಈ ವಿಷಯ ಅನೇಕರಿಗೆ ತಿಳಿದೇ ಇಲ್ಲ. ಇದಕ್ಕೆ ಸಂಬಂಧಿಸಿದಂತೆ ಹೊಸ ಪೋಸ್ಟ್ ಒಂದು ವೈರಲ್ ಆಗಿದೆ. ಇದರಲ್ಲಿ ರುಕ್ಮಿಣಿ ಅವರು ಸುಮಧುರವಾಗಿ ಹಾಡಿದ್ದಾರೆ. ಅವರ ಹಾಡು ಎಲ್ಲರ ಗಮನ ಸೆಳೆದಿದೆ. ರುಕ್ಮಿಣಿ ವಸಂತ್ ಅವರು 'ಮದರಾಸಿ' ಹೆಸರಿನ ಹೊಸ ಸಿನಿಮಾದಲ್ಲಿ ನಟಿಸಿದ್ದಾರೆ. ಈ ಚಿತ್ರದಲ್ಲಿ ಅವರದ್ದು ಮಾಲತಿ ಹೆಸರಿನ ಪಾತ್ರ. ಈ ಚಿತ್ರಕ್ಕೆ ಶಿವಕಾರ್ತಿಕೇಯ ಹೀರೋ. ಶಿವಕಾರ್ತಿಕೇಯ ಅವರು ಈಗಾಗಲೇ ಕಾಲಿವುಡ್‌ನಲ್ಲಿ ಸಾಕಷ್ಟು ಗುರುತಿಸಿಕೊಳ್ಳುತ್ತಿದ್ದಾರೆ. ಅವರ ಜೊತೆ ನಟಿಸೋ ಅವಕಾಶ ರುಕ್ಮಿಣಿಗೆ ಸಿಕ್ಕಿದೆ. ಇದಕ್ಕಾಗಿ ರುಕ್ಮಿಣಿ ವಿವಿಧ ಸಂದರ್ಶನ ನೀಡುತ್ತಿದ್ದಾರೆ. ಈ ವೇಳೆ ಅವರು ಹಾಡುಗಳನ್ನು ಕೂಡ ಹಾಡುತ್ತಿದ್ದಾರೆ.

## ಗೌತಮಿ ಜಾಧವ್ ಬೆಳ್ಳಿ ತೆರೆಗೆ ರೀ ಎಂಟ್ರಿ




ಬಿಗ್‌ಬಾಸ್‌ನಿಂದ ಹೊರಬಂದವರು, ಬಿಗ್‌ಬಾಸ್‌ನಲ್ಲಿ ದೊರೆತ ಜನಪ್ರಿಯತೆಯನ್ನು ಬಳಸಿಕೊಂಡು, ಅದನ್ನು ಉಳಿಸಿಕೊಂಡು ಹೋಗಲು ಬೇರೆ ಬೇರೆ ಪ್ರಾಜೆಕ್ಟ್‌ಗಳಿಗೆ ಕೈ ಹಾಕುತ್ತಾರೆ. ಸದಾ ಟ್ರೆಂಡಿಂಗ್‌ನಲ್ಲಿರುವಂತೆ ನೋಡಿಕೊಳ್ಳುತ್ತಾರೆ. ಆದರೆ ಬಿಗ್‌ಬಾಸ್‌ನಿಂದ ಬಂದ ಬಳಿಕ ಗೌತಮಿ ಜಾಧವ್ ಯಾವುದೇ ಹೊಸ ಘೋಷಣೆಗಳನ್ನು ಮಾಡಿರಲಿಲ್ಲ. ಇದೀಗ ಗೌತಮಿಯವರು ಏಕಾ-ಏಕಿ ಸಿನಿಮಾದಲ್ಲಿ ನಟಿಸಲು ಮುಂದಾಗಿದ್ದಾರೆ.

ಗೌತಮಿ ಜಾಧವ್ ಎಂದೊಡನೆ 'ಸತ್ಯ' ಧಾರಾವಾಹಿ ನೆನಪಾಗುತ್ತದೆ. 'ಸತ್ಯ' ಧಾರಾವಾಹಿ ಮೂಲಕ ಕನ್ನಡಿಗರ ಮನೆ ಮಾತಾಗಿದ್ದರು. ಆ ಧಾರಾವಾಹಿ ಅವರಿಗೆ ದೊಡ್ಡ ಹೆಸರು ಗಳಿಸಿಕೊಟ್ಟಿತು. 'ಸತ್ಯ' ಮಾತ್ರವಲ್ಲದೆ ಇನ್ನೂ ಕೆಲ ಧಾರಾವಾಹಿಗಳಲ್ಲಿ ಗೌತಮಿ ನಟಿಸಿದ್ದರೂ ಸಹ ಅವರಿಗೆ ದೊಡ್ಡ ಹೆಸರು ಗಳಿಸಿಕೊಟ್ಟಿದ್ದು ಮಾತ್ರ 'ಸತ್ಯ' ಧಾರಾವಾಹಿಯೇ. ಕಳೆದ ಬಿಗ್‌ಬಾಸ್ ಸೀಸನ್‌ನಲ್ಲಿಯೂ ಸಹ ಗೌತಮಿ ಜಾಧವ್ ಭಾಗವಹಿಸಿದ್ದರು. ಹಲವು ವಾರಗಳ ಕಾಲ ಮನೆಯಲ್ಲಿದ್ದ ಅವರು ಆಟದಿಂದ ಗಮನ ಸೆಳೆದರು. ಗೌತಮಿ ಜಾಧವ್ ಒಳ್ಳೆಯ ನಟಿ. ಈ ಹಿಂದೆ ಕೆಲ ಸಿನಿಮಾಗಳಲ್ಲಿ ನಟಿಸಿದ್ದಾರೆ ಆದರೆ ಅವರಿಗೆ ಸಿನಿಮಾಗಳಲ್ಲಿ ದೊಡ್ಡ ಯಶಸ್ಸು ಧಕ್ಕಿಲ್ಲ. ವಿಶೇಷವೆಂದರೆ ಒಂದು ತಮಿಳು ಸಿನಿಮಾನಲ್ಲಿಯೂ ಸಹ ಗೌತಮಿ ಜಾಧವ್ ನಟಿಸಿದ್ದಾರೆ ಆದರೆ ನಿರೀಕ್ಷಿತ ಗೆಲುವು ಅವರಿಗೆ ಧಕ್ಕಿಲ್ಲ. ಇದೀಗ ಗೌತಮಿ ಜಾಧವ್ ಮತ್ತೆ ದೊಡ್ಡ ಪರದೆಗೆ ರೀ ಎಂಟ್ರಿ ನೀಡಿದ್ದಾರೆ. ಅವರ ಹೊಸ ಸಿನಿಮಾದ ಮುಹೂರ್ತ ಇದೀಗ ನೆರವೇರಿದೆ. ಬಿಗ್‌ಬಾಸ್‌ನಿಂದ ಹೊರಬಂದವರು, ಬಿಗ್‌ಬಾಸ್‌ನಲ್ಲಿ ದೊರೆತ ಜನಪ್ರಿಯತೆಯನ್ನು ಬಳಸಿಕೊಂಡು, ಅದನ್ನು ಉಳಿಸಿಕೊಂಡು ಹೋಗಲು ಬೇರೆ ಬೇರೆ ಪ್ರಾಜೆಕ್ಟ್‌ಗಳಿಗೆ ಕೈ ಹಾಕುತ್ತಾರೆ.




## ಸಂತ್ರಸ್ತರ ಕುಟುಂಬಗಳಿಗೆ 25 ಲಕ್ಷ ರೂ. ನೀಡಿದ ಆರ್‌ಸಿಬಿ

### ಫ್ರಾಂಚೈಸಿಯ ಕಾಳಜಿಗೆ ಫ್ಯಾನ್ಸ್ ಮೆಚ್ಚುಗೆ



ಐಪಿಎಲ್ 2025ರ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು 20 ಓವರ್‌ಗಳಲ್ಲಿ 190 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 184 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಈ ಮೂಲಕ 6 ರನ್‌ಗಳ ರೋಚಕ ಜಯದೊಂದಿಗೆ ಆರ್‌ಸಿಬಿ ಚೊಚ್ಚಲ ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಿತ್ತು. ಇಂಡಿಯನ್ ಪ್ರೀಮಿಯರ್ ಲೀಗ್ 2025 ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪಾಲಿಗೆ ಜೂನ್ 4 'ಕಪ್'ಚುಕ್ಕೆ. ಜೂನ್ 4, 2025 ರಂದು ಬೆಂಗಳೂರಿನಲ್ಲಿ ನಡೆದ ಆರ್‌ಸಿಬಿ ಕಪ್ ಗೆದ್ದ ಸಂಭ್ರಮಾಚರಣೆ ವೇಳೆ ಉಂಟಾದ ಕಾಲ್ತುಳಿತದಿಂದಾಗಿ 11 ಮಂದಿ ಅಭಿಮಾನಿಗಳು ಸಾವಿಗೀಡಾಗಿದ್ದರು.

ಈ ದುರ್ಘಟನೆಯಲ್ಲಿ ಮೃತಪಟ್ಟ ಕುಟುಂಬಗಳಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಸಹಾಯಹಸ್ತ ಚಾಚಿದೆ. ಆರ್‌ಸಿಬಿ ತಂಡದ ಸಂಭ್ರಮಾಚರಣೆ ವೇಳೆ ಕಾಲ್ತುಳಿತದಿಂದ ಮೃತಪಟ್ಟ ಪ್ರತಿ ಕುಟುಂಬಗಳಿಗೆ ತಲಾ 25 ಲಕ್ಷ ರೂ. ಆರ್ಥಿಕ ಸಹಾಯ ನೀಡಿರುವುದಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಅಧಿಕೃತವಾಗಿ ಪ್ರಕಟಿಸಿದೆ. ಈ ನೆರವಿನೊಂದಿಗೆ ಆರ್‌ಸಿಬಿ ಹೊಸ ಅಧ್ಯಾಯವನ್ನು ಸಹ ಶುರು ಮಾಡಿದೆ. ಅಭಿಮಾನಿಗಳ ಸಾವಿನ ಬೆನ್ನಲ್ಲೇ ಆರ್‌ಸಿಬಿ ಕೇರ್ಸ್ ಶುರು ಮಾಡಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಇದೀಗ ಮೃತಪಟ್ಟ ಕುಟುಂಬಗಳಿಗೆ ಧನ ಸಹಾಯ ನೀಡಿದೆ. ಅಲ್ಲದೆ ಆರ್‌ಸಿಬಿ ಕೇರ್ಸ್ ಮೂಲಕ ಮತ್ತಷ್ಟು ಸಹಾಯಹಸ್ತ ನೀಡುವ ಹಾಗೂ ಕಾರ್ಯಕ್ರಮಗಳನ್ನು ಆಯೋಜಿಸುವ ಭರವಸೆಯನ್ನು ಸಹ ನೀಡಿದ್ದಾರೆ.

ಜನವರಿ 4, 2025 ಈ ದಿನ ನಮ್ಮ ಹೃದಯದಲ್ಲಿ ಶಾಶ್ವತವಾಗಿ ಉಳಿಯಲಿದೆ. ನಾವು ಕಳೆದುಕೊಂಡಿದ್ದು 11 ಅಭಿಮಾನಿಗಳನ್ನಷ್ಟೇ ಅಲ್ಲ ಅವರು ನಮ್ಮ ಕುಟುಂಬದ ಸದಸ್ಯರಾಗಿದ್ದರು, ನಮ್ಮ ಹೃದಯದ ಭಾಗವಾಗಿದ್ದರು. ಅವರ ಉತ್ಸಾಹವೇ ನಮ್ಮ ಊರು, ಸಮುದಾಯ ಮತ್ತು ತಂಡಕ್ಕೆ ಜೀವ ತುಂಬುವ ಬೆಳಕಾಗಿತ್ತು. ನಮ್ಮ ನೆನಪುಗಳಲ್ಲಿ ಅವರು ಸದಾ ಜೀವಂತವಾಗಿರುತ್ತಾರೆ. ಅವರ ಜಾಗವನ್ನು ಯಾವ ಸಹಾಯವೂ ತುಂಬಲಾರದು. ಆದರೆ ಮೊದಲನೇ ಮತ್ತು ಗೌರವದ ಸಂಕೇತವಾಗಿ, ಆರ್‌ಸಿಬಿ ಪ್ರತಿ ಕುಟುಂಬಕ್ಕೆ 25 ಲಕ್ಷ ರೂ. ನೆರವನ್ನು ನೀಡಿದೆ. ಇದು ಕೇವಲ ಆರ್ಥಿಕ ಸಹಾಯವಲ್ಲ, ಕರುಣೆ, ಒಗಟ್ಟು ಮತ್ತು ನಿರಂತರ ಕಾಳಜಿಯ ಭರವಸೆ. ಇದು ಆರ್‌ಸಿಬಿ ಕೇರ್ಸ್‌ನ ಆರಂಭವೂ ಹೌದು. ಅವರ ನೆನಪನ್ನು ಗೌರವಿಸುವ ಮೂಲಕ ಶುರುವಾದ ಈ ಪ್ರಯತ್ನ, ಅಭಿಮಾನಿಗಳ ಭಾವನೆ, ನಂಬಿಕೆ ಮತ್ತು ಸುರಕ್ಷತೆ ಪ್ರತಿಬಿಂಬಿಸುವ ದೀರ್ಘಕಾಲದ ಬದ್ಧತೆಯಾಗಿದೆ. ಆರ್‌ಸಿಬಿ ಕೇರ್ಸ್ ಕುರಿತು ಇನ್ನಷ್ಟು ವಿವರಗಳು ಶೀಘ್ರದಲ್ಲೇ ಎಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತನ್ನ ಅಧಿಕೃತ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದೆ. ಇದೀಗ ಅಭಿಮಾನಿಗಳ ಮೇಲಿನ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಕಾಳಜಿಗೆ ಫ್ಯಾನ್ಸ್ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಅಲ್ಲದೆ ಆರ್‌ಸಿಬಿ ಕೇಸ್‌ರ್‌ನ ನಡೆಯನ್ನು ಸ್ವಾಗತಿಸಿದ್ದಾರೆ.

## ದಿಗ್ವೇಶ್ ರಾಠಿಯ ಚಳಿ ಬಿಡಿಸಿದ ನಿತೀಶ್ ರಾಣಾ



ಕ್ರಿಕೆಟ್ ಅಂಗಳದಲ್ಲಿ ಡೆಲ್ಲಿ ಬಾಯ್ಸ್ ಫೈಟ್ ಮುಂದುವರೆದಿದೆ. ಈ ಹಿಂದೆ ದೆಹಲಿ ಮೂಲದ ಕ್ರಿಕೆಟಿಗರಾದ ವಿರಾಟ್ ಕೊಹ್ಲಿ ಹಾಗೂ ಗೌತಮ್ ಗಂಭೀರ್ ನಡುವಣ ಕಿತ್ತಾಟಕ್ಕೆ ಐಪಿಎಲ್ ಸಾಕ್ಷಿಯಾಗಿತ್ತು.

ಇದಾದ ಬಳಿಕ ದೆಹಲಿಯವರಾದ ನಿತೀಶ್ ರಾಣಾ ಹಾಗೂ ಹೃತಿಕ್ ಶೋಕೀನ್ ಮೈದಾನದಲ್ಲೇ ಜಗಳವಾಡಿಕೊಂಡಿದ್ದರು. ಅಲ್ಲದೆ ಕಳೆದ ಐಪಿಎಲ್‌ನಲ್ಲಿ ದಿಗ್ವೇಶ್ ರಾಠಿ ದೆಹಲಿ ಮೂಲದ ತನ್ನ ಸಹ ಆಟಗಾರ ಪ್ರಿಯಾಂಶ್ ಆರ್ಯ ಅವರನ್ನು ನೋಟ್‌ಬುಕ್ ಸೆಲೆಬ್ರೇಷನ್ ಮೂಲಕ ಕೆಣಕಿದ್ದರು. ಇದೀಗ ಮತ್ತೊಮ್ಮೆ ದಿಗ್ವೇಶ್ ರಾಠಿ ಸುದ್ದಿಯಲ್ಲಿದ್ದಾರೆ. ಅದು ಕೂಡ ನಿತೀಶ್ ರಾಣಾ ಜೊತೆ ಜಗಳಕ್ಕಿಳಿಯುವ ಮೂಲಕ..!

ಹೌದು, ಡೆಲ್ಲಿ ಪ್ರೀಮಿಯರ್ ಲೀಗ್‌ನ ಎಲಿಮಿನೇಟರ್ ಪಂದ್ಯದಲ್ಲಿ ನಿತೀಶ್ ರಾಣಾ ಹಾಗೂ ದಿಗ್ವೇಶ್ ರಾಠಿ ಕಿತ್ತಾಡಿಕೊಂಡಿದ್ದಾರೆ. ಈ ಪಂದ್ಯದ 10ನೇ ಓವರ್‌ನ 4ನೇ ಎಸೆತವನ್ನು ಎಸೆಯಲು ಬಂದ ದಿಗ್ವೇಶ್ ಚೆಂಡೆಸೆಯದೇ ಹಿಂತಿರುಗಿದ್ದರು. ಇದಾದ ಬಳಿಕ ಚೆಂಡೆಸೆಯಲು ಮುಂದಾದಾಗ ನಿತೀಶ್ ರಾಣಾ ಹಿಂದೆ ಸರಿದರು.

ಆ ಬಳಿಕ ದಿಗ್ವೇಶ್ ರಾಠಿ ಎಸೆದ ಎಸೆತದಲ್ಲಿ ನಿತೀಶ್ ಸ್ವಿಚ್ ಹಿಟ್‌ನೊಂದಿಗೆ ಸಿಕ್ಸ್ ಬಾರಿಸಿದ್ದಾರೆ. ಅಲ್ಲದೆ ಬ್ಯಾಟ್ ಮೇಲೆ ಸಹಿ ಹಾಕುವ ಮೂಲಕ ನೋಟ್ ಬುಕ್ ಸೆಲೆಬ್ರೇಷನ್‌ಗೆ ಟಕ್ಕರ್ ಕೊಟ್ಟಿದ್ದಾರೆ. ಇದರಿಂದ ಕುಪಿತಗೊಂಡ ದಿಗ್ವೇಶ್ ಅದೇನೋ ಗೊಣಗಿದ್ದಾರೆ. ಇದರಿಂದ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದ್ದು, ಪರಿಸ್ಥಿತಿ ಕೈ ಮೀರಿ ಹೋಗುವ ಮುನ್ನ ಅಂಪೈರ್ ಹಾಗೂ ಸಹ ಆಟಗಾರರು ಮಧ್ಯ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದ್ದಾರೆ. ಇದೀಗ ನಿತೀಶ್ ರಾಣಾ ಹಾಗೂ ದಿಗ್ವೇಶ್ ರಾಠಿ ವಿಡಿಯೋ ಸೋಷಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿದೆ.

ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಸೌತ್ ಡೆಲ್ಲಿ ಸೂಪರ್ ಸ್ಟಾರ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 201 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ವೆಸ್ಟ್ ಡೆಲ್ಲಿ ಲಯನ್ಸ್ ಪರ ನಿತೀಶ್ ರಾಣಾ (134) ಅಜೇಯ ಶತಕ ಸಿಡಿಸಿದ್ದರು. ಈ ಶತಕದೊಂದಿಗೆ ವೆಸ್ಟ್ ಡೆಲ್ಲಿ ಲಯನ್ಸ್ ತಂಡವು 17.1 ಓವರ್‌ಗಳಲ್ಲಿ 202 ರನ್ ಬಾರಿಸಿ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966